22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 131 | ನವದೆಹಲಿ | ಬೆಲೆ ₹10 | ನವಂಬರ್ 11, 2024 ಸೋಮವಾರ

## ಒಳಪುಟಗಳಲ್ಲಿ

ಗುಜರಿ ಮಾರಾಟದ ಮೂಲಕವೇ 2,364 ಕೋಟಿ ರೂ. ಗಳಿಸಿದ ಸರ್ಕಾರ: ಪು.4

# ಕಾಂಗ್ರೆಸ್‌ನಿಂದ ಹಿಂದುಳಿದ ಸಮುದಾಯಗಳ ವಿಭಜನೆ; ಒಬಿಸಿ ಒಗ್ಗಟ್ಟಿಗೆ ಮೋದಿ ಕರೆ

**ಬೊಕಾರೊ (ಜಾರ್ಖಂಡ್), ನ.10: ಇನ್ನು ಜಾರ್ಖಂಡ್‌ನಲ್ಲಿ ರ‍್ಯಾಲಿ ಹಮ್ಮಿಕೊಂಡಿರುವ ಪ್ರಧಾನಿ ಮೋದಿ ಅವರು, ಹೇಮಂತ್ ಸೊರೇನ್ ನೇತೃತ್ವದ ಜಾರ್ಖಂಡ್ ಸರ್ಕಾರದ ವಿರುದ್ಧ ಕೆಂಡಕಾರಿದ್ದಾರೆ. ಜಾರ್ಖಂಡ್‌ನಲ್ಲಿ ದೊಡ್ಡ ಪ್ರಮಾಣದ ನಡೆಯುತ್ತಿದೆ ಎಂದು ಪ್ರಧಾನಿ ಮೋದಿ ಅವರು ಹೇಳಿದರು.**




**2004ರಿಂದ 2014ರ ವರೆಗೆ ಅಧಿಕಾರದಲ್ಲಿದ್ದ ಸೋನಿಯಾ ಗಾಂಧಿ ಮತ್ತು ಅಂದಿನ ಪ್ರಧಾನಿ ಮನಮೋಹನ್ ಸಿಂಗ್ ನೇತೃತ್ವದ ಕೇಂದ್ರ ಸರ್ಕಾರ, 10 ವರ್ಷಗಳಲ್ಲಿ ಕೇವಲ 80,000 ಹಣವನ್ನು ಜಾರ್ಖಂಡ್‌ಗೆ ನೀಡಿತ್ತು. ಆದರೆ, ನಮ್ಮ ಸರ್ಕಾರ 10 ವರ್ಷಗಳಲ್ಲಿ 3 ಲಕ್ಷ ಕೋಟಿಗೂ ಅಧಿಕ ಅನುದಾನ ನೀಡಿದೆ ಎಂದು ಹೇಳಿದರು. ಜಾರ್ಖಂಡ್‌ನ 81 ವಿಧಾನಸಭಾ ಸ್ಥಾನಗಳಿಗೆ ನವೆಂಬರ್ 13 ಮತ್ತು 20ರಂದು ಎರಡು ಹಂತಗಳಲ್ಲಿ ಮತದಾನ ನಡೆಯಲಿದ್ದು, ನವೆಂಬರ್ 23ರಂದು ಮತ ಎಣಿಕೆ ನಡೆಯಲಿದೆ**

ಬೊಕಾರೊದ ಚಂದಂಕಿಯಾರಿಯಲ್ಲಿ ಬೃಹತ್ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಅವರು ಇಂಡಿಯಾ ಅಲಯನ್ಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ತಮ್ಮ ಭಾಷಣದಲ್ಲಿ, ಜಾರ್ಖಂಡ್‌ನಲ್ಲಿ ಬಿಜೆಪಿ–ಎನ್‌ಡಿಎ ಸರ್ಕಾರ ರಚನೆಯಾಗುವುದು ಖಚಿತ. ನಾವು (ಬಿಜೆಪಿ ಸರ್ಕಾರ) ಜಾರ್ಖಂಡ್ ಅನ್ನು ರಚಿಸಿದ್ದೇವೆ ಮತ್ತು ನಾವು ಅದನ್ನು ಸುಧಾರಿಸುತ್ತೇವೆ ಎಂದು ಪ್ರಧಾನಿ ಮೋದಿ ಹೇಳಿದರು. ಅಕ್ರಮ ಮರಳುಗಾರಿಕೆ ಬಗ್ಗೆ ಮಾತನಾಡಿದ ಅವರು, ದೊಡ್ಡ ಪ್ರಮಾಣದಲ್ಲಿ ಹಣವನ್ನು ವಶಪಡಿಸಿಕೊಂಡ ವಿಷಯವನ್ನು ಪ್ರಸ್ತಾಪಿಸಿದ್ದಾರೆ. ಜೆಎಂಎಂ ಮತ್ತು ಕಾಂಗ್ರೆಸ್ ಮೈತ್ರಿಕೂಟ ಜನರನ್ನು ಲೂಟಿ ಮಾಡುತ್ತಿದೆ ಎಂದು ಆರೋಪ ಮಾಡುವ ಮೂಲಕ ವಾಗ್ದಾಳಿ ನಡೆಸಿದರು. ಸೊರೇನ್ ಸರ್ಕಾರ ಜಾರ್ಖಂಡ್ ಅನ್ನು ಲೂಟಿ ಮಾಡುತ್ತಿದೆ.

**ಒಗ್ಗಟ್ಟಿನಿಂದ ಇದ್ದರೆ ಸುರಕ್ಷಿತ**

ಭಾರತ ಒಕ್ಕೂಟದ ಪಕ್ಷಗಳು ಸಮಾಜವನ್ನು ಒಡೆಯಲು ಪಿತೂರಿ ನಡೆಸುತ್ತಿವೆ ಎಂದು ಪ್ರಧಾನಿ ಮೋದಿ ಆರೋಪಿಸಿದರು. ಒಬಿಸಿ ಸಮುದಾಯ, ದಲಿತ ಸಮುದಾಯ ಮತ್ತು ಬುಡಕಟ್ಟು ಸಮುದಾಯ ವಿಶೇಷವಾಗಿ ಕಾಂಗ್ರೆಸ್ನ ಗುರಿಯಾಗಿದೆ. ಭಾರತ ಒಕ್ಕೂಟದ ಪಕ್ಷಗಳು ವಿವಿಧ ಜಾತಿಗಳನ್ನು ಪರಸ್ಪರ ಹೋರಾಡುವಂತೆ ಮಾಡುವ ತಂತ್ರವನ್ನು ಅನುಸರಿಸುತ್ತಿವೆ. ಈ ಪಿತೂರಿಗಳ ಬಗ್ಗೆ ನಾವು ಜಾಗರೂಕರಾಗಿರುತ್ತೇವೆ ಎಂದು ಪ್ರಧಾನಿ ಮೋದಿ ಹೇಳಿದರು. 'ಒಟ್ಟಾಗಿ ಇದ್ದರೆ ನಾವು ಸುರಕ್ಷಿತವಾಗಿರುತ್ತೇವೆ' ಎಂಬ ಘೋಷಣೆಯನ್ನು ಪ್ರಧಾನಿ ಮೋದಿ ಮತ್ತೊಮ್ಮೆ ಹೇಳಿದರು.

**ಕಾಂಗ್ರೆಸ್ ಪಿತೂರಿ ಅರಿಯಬೇಕು**

ಪ್ರಧಾನಮಂತ್ರಿ ಅವರು, ಕಾಂಗ್ರೆಸ್ ಯಾವಾಗಲೂ ಎಸ್ಸಿ/ಎಸ್ಟಿ/ಒಬಿಸಿ ಯ ಏಕತೆಗೆ ಬದ್ಧ ವಿರೋಧಿಯಾಗಿದೆ. ಸ್ವಾತಂತ್ರ್ಯದ ನಂತರ, ಎಲ್ಲಿಯವರೆಗೆ ಖಅ ಸಮಾಜವು ಚದುರಿಹೋಯಿತು, ST ಸಮಾಜವು ಚದುರಿ ಹೋಯಿತು.

ಒಬಿಸಿ ಸಮಾಜವು ಚದುರಿ ಹೋಯಿತು, ಕಾಂಗ್ರೆಸ್ ಸಂತೋಷದಿಂದ ಕೇಂದ್ರದಲ್ಲಿ ಸರ್ಕಾರಗಳನ್ನು ರಚಿಸಿತು, ಆದರೆ ಈ ಸಮಾಜವು ಒಗ್ಗೂಡಿದ ತಕ್ಷಣ ಕೇಂದ್ರದಲ್ಲಿ ಕಾಂಗ್ರೆಸ್ ಪೂರ್ಣ ಬಹುಮತದೊಂದಿಗೆ ಸರ್ಕಾರ ರಚಿಸಲು ಸಾಧ್ಯವಾಗಲಿಲ್ಲ.

ಜಾರ್ಖಂಡ್‌ನ ಕ್ಷಿಪ್ರ ಅಭಿವೃದ್ಧಿಗಾಗಿ, ಎಲ್ಲರ ಪ್ರಯತ್ನ ಅಂದರೆ ಎಲ್ಲರ ಸಾಮೂಹಿಕ ಶಕ್ತಿಯನ್ನು ಬಳಸುವುದು ಬಹಳ ಮುಖ್ಯ. ಆದ್ದರಿಂದ ಕಾಂಗ್ರೆಸ್–ಜೆಎಂಎಂನ ದೊಡ್ಡ ಷಡ್ಯಂತ್ರದ ಬಗ್ಗೆ ನೀವೆಲ್ಲರೂ ಎಚ್ಚರದಿಂದಿರಬೇಕು. ಒಬಿಸಿ ಸಮುದಾಯಕ್ಕೆ 1990ರಲ್ಲಿ ಮೀಸಲಾತಿ ಸಿಕ್ಕಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ವಿವಿಧ ಒಬಿಸಿ ಜಾತಿಗಳ ಸಂಖ್ಯಾಬಲ ಒಗ್ಗೂಡಿದ ಕಾರಣ ಇಲ್ಲಿ ೦ು೨ವ್ರ್ಗ್ ಲೋಕಸಭೆಯಲ್ಲಿ ಕಾಂಗ್ರೆಸ್ 250 ಸ್ಥಾನಗಳನ್ನು ಗೆಲ್ಲಲು ಸಾಧ್ಯವಾಗಿಲ್ಲ. ಆದ್ದರಿಂದ, ಒಬಿಸಿಯ ಈ ಸಾಮೂಹಿಕ ಶಕ್ತಿಯನ್ನು ಮುರಿಯಲು ಕಾಂಗ್ರೆಸ್ ಬಯಸುತ್ತದೆ ಮತ್ತು ಈ ಬಲವನ್ನು ಮುರಿಯುವ ಮೂಲಕ, ಒಬಿಸಿ ಯನ್ನು ನೂರಾರು ವಿವಿಧ ಜಾತಿಗಳಾಗಿ ವಿಭಜಿಸಲು ಬಯಸುತ್ತದೆ. ಸಮಾಜ ವಿಘಟನೆಯಾಗುವುದು, ಸಣ್ಣ ತುಂಡುಗಳಾಗಿ ಒಡೆಯುವುದು ಯಾರಿಗೂ ಬೇಕಾಗಿಲ್ಲ. ಆದ್ದರಿಂದ, ನಾವು ಇದನ್ನು ಯಾವಾಗಲೂ ನೆನಪಿನಲ್ಲಿಟ್ಟುಕೊಳ್ಳಬೇಕು. ನಾವು ಒಗ್ಗಟ್ಟಿನಿಂದ ಇದ್ದರೆ, ನಾವು ಸುರಕ್ಷಿತವಾಗಿರುತ್ತೇವೆ ಎಂದು ಮೋದಿ ಕರೆ ನೀಡಿದರು.

## ಸಚಿವ ಜಮೀರ್ ಅಹ್ಮದ್ ವಿರುದ್ಧ ಕ್ರಮಕ್ಕೆ ರಾಜ್ಯಪಾಲರ ಸೂಚನೆ



ಬೆಂಗಳೂರು, ನ.10: ಮುಡಾ ಅಕ್ರಮಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಹೈಕೋರ್ಟ್ ನೀಡಿದ ತೀರ್ಪಿನ ಬಗ್ಗೆ ಆಕ್ಷೇಪಾರ್ಹ ಹೇಳಿಕೆ ನೀಡಿದ್ದ ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ರಾಜ್ಯಾಪಾಲರು ಸೂಚನೆ ನೀಡಿದ್ದಾರೆ. ಸಚಿವ ಜಮೀರ್ ಅಹಮ್ಮದ್ ಹೇಳಿಕೆ ಸಂಬಂಧ ಅಡ್ವೋಕೇಟ್ ಜನರಲ್‌ಗೆ ರಾಜ್ಯಪಾಲರು ಪತ್ರ ಬರೆದಿದ್ದು, ಮುಂದಿನ ಕಾನೂನು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಜಮೀರ್ ಅಹ್ಮದ್ ಕಳೆದ ಸೆ.24ರಂದು ಮುಡಾ (ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ) ಅಕ್ರಮ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಹೈಕೋರ್ಟ್ ಗ್ರೀನ್ ಸಿಗ್ನಲ್ ನೀಡಿತ್ತು. ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಆದೇಶವನ್ನು ಎತ್ತಿ ಹಿಡಿದಿದ್ದ ಹೈಕೋರ್ಟ್ ಸಿದ್ದರಾಮಯ್ಯ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ವಜಾಗೊಳಿಸಿತ್ತು. ಕಳೆದ ಸೆಪ್ಟೆಂಬರ್ 25ರಂದು ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡುವಾಗ ಜಮೀರ್ ನಾನು ಬಿಡಿಸಿ ಹೇಳುವಂತಿಲ್ಲ. ನಿನ್ನೆ ಬಂದಿರುವುದು ಎಲ್ಲೋ ಒಂದು ಕಡೆ ರಾಜಕೀಯ ತೀರ್ಪು, ಇದು ನನ್ನ ವೈಯಕ್ತಿಕ ಅಭಿಪ್ರಾಯ ಎಂದು ಹೇಳಿದ್ದರು. ಮರುದಿನ ತಮ್ಮ ಹೇಳಿಕೆ ಕುರಿತು ಕ್ಷಮೆ ಕೋರಿದ್ದರು. ಜಮೀರ್ ಅವರ ಈ ಹೇಳಿಕೆ ಖಂಡಿಸಿ ಸಾಮಾಜಿಕ ಕಾರ್ಯಕರ್ತ ಟಿ.ಜೆ.ಅಬ್ರಾಹಂ ರಾಜ್ಯಪಾಲರಿಗೆ ದೂರು ನೀಡಿದ್ದರು. ನ್ಯಾಯಾಂಗ ನಿಂದನೆಯ ಜೊತೆಗೆ ಸಚಿವ ಜಮೀರ್ ಅಹಮದ್ ವಿರುದ್ಧ ಕ್ರಿಮಿನಲ್ ಪ್ರೊಸಿಡಿಂಗ್‌ಗೆ ರಾಜ್ಯಪಾಲರಿಗೆ ದೂರು ನೀಡಿದ್ದರು. ದೂರಿನ ಹಿನ್ನೆಲೆ ಅಡ್ವೋಕೇಟ್ ಜನರಲ್‌ಗೆ ಪತ್ರ ಬರೆದಿರುವ ರಾಜ್ಯಪಾಲರು ಸಚಿವರ ವಿರುದ್ಧ ಮುಂದಿನ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ಈ ಮಟ್ಟದ ಸುಳ್ಳು ಹೇಳೋದು ಪ್ರಧಾನಿ ಸ್ಥಾನಕ್ಕೆ ಅವಮಾನ**

## ಡಿ'ಕುನ್ಹಾ ವರದಿ ಸಂಪುಟದ ಮುಂದೆ ಬಂದ ನಂತರ ಮುಂದಿನ ತೀರ್ಮಾನ: ಸಿಎಂ



**ಮೋದಿ ಅವರು ಹೇಳಿದ್ದು ಸಾಬೀತು ಮಾಡಿದ್ರೆ ನಾನು ರಾಜಕೀಯ ನಿವೃತ್ತಿ ಘೋಷಿಸ್ತೀನಿ. ಇಲ್ಲದಿದ್ದರೆ ನೀವು ನಿವೃತ್ತಿ ಘೋಷಿಸ್ತೀರಾ ಎಂದು ಪ್ರಧಾನಿ ಮೋದಿಯವರಿಗೆ ಸಿಎಂ ನೇರ ಸವಾಲು ಹಾಕಿದರು.**

**ಹುಬ್ಬಳ್ಳಿ ನ.10:** ಪ್ರಧಾನಿ ನರೇಂದ್ರ ಮೋದಿಯವರು ಸುಳ್ಳು ಹೇಳೋದು ಹೊಸ ವಿಷಯ ಏನಲ್ಲ. ಆದರೆ ಈ ಮಟ್ಟದ ಸುಳ್ಳು ಹೇಳೋದು ಪ್ರಧಾನಿ ಸ್ಥಾನಕ್ಕೆ ದೊಡ್ಡ ಅವಮಾನ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೋದಿಯವರ ಹೊಸ ಹೊಸ ಸುಳ್ಳುಗಳಿಗೆ ತಿರುಗೇಟು ನೀಡಿದರು. ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರ ಪ್ರಶ್ನೆಗಳಿಗೆ ಉತ್ತರಿಸಿದರು. ಕರ್ನಾಟಕದಲ್ಲಿ ಅಬಕಾರಿ ಇಲಾಖೆಯ 700 ಕೋಟಿ ಹಣ ತಂದು ಮಹಾರಾಷ್ಟ್ರದಲ್ಲಿ ಕಾಂಗ್ರೆಸ್ ಚುನಾವಣೆ ನಡೆಸುತ್ತಿದೆ ಎನ್ನುವ ಪ್ರಧಾನಿಯವರ ಸುಳ್ಳಿನ ಬಗ್ಗೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಸಿಎಂ ಮೇಲಿನಂತೆ ಪ್ರತಿಕ್ರಿಯಿಸಿದರು. ಅಬಕಾರಿ ಇಲಾಖೆಯಲ್ಲಿ 700 ಕೋಟಿ ಎಲ್ಲಿರುತ್ತದೆ. ಯಾರು ಕೊಡ್ತಾರೆ? ಪ್ರಧಾನಿ ಆದವರಿಗೆ ಈ ಮಟ್ಟದ ತಿಳಿವಳಿಕೆ ಕೊರತೆ ಇರಬಾರದು ಎಂದರು. ನಿವೃತ್ತ ನ್ಯಾಯಮೂರ್ತಿ ಡಿ'ಕುನ್ಹಾ ಅವರ ವರದಿ ಆಧಾರದಲ್ಲಿ ಯಡಿಯೂರಪ್ಪ ಮತ್ತು ಶ್ರೀರಾಮುಲು ಅವರ ವಿರುದ್ಧ ಮುಂದಿನ ಕ್ರಮ ಏನು ಎನ್ನುವ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಸಿಎಂ, ವರದಿ ಮೊದಲು ಕ್ಯಾಬಿನೆಟ್ ಮುಂದೆ ಬರಲಿ. ಬಳಿಕ ತೀರ್ಮಾನ ಆಗ್ತದೆ ಎಂದರು. ಡಿ'ಕುನ್ಹಾ ಆಯೋಗದ ವರದಿಯ ಗೊಡ್ಡು ಬೆದರಿಕೆಗೆ ಹೆದರುವುದಿಲ್ಲ ಎನ್ನುವ ಬೊಮ್ಮಾಯಿ ಅವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಆಯೋಗದ ವರದಿ ಹೇಗೆ ಗೊಡ್ಡು ಬೆದರಿಕೆ ಆಗುತ್ತದೆ? ಜನರ ಹಣ ಲೂಟಿ ಹೊಡೆದು ಆಮೇಲೆ ಗೊಡ್ಡು ಬೆದರಿಕೆ ಅಂದರೆ ಹೇಗೆ ಎಂದು ಮರು ಪ್ರಶ್ನಿಸಿದರು. 30 ವರ್ಷಗಳ ಹಿಂದೆ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ತನ್ನ ಕೊಲೆಗೆ ಯತ್ನ ನಡೆದಿತ್ತು ಎನ್ನುವ ಯಡಿಯೂರಪ್ಪ ಅವರ ಆರೋಪಕ್ಕೆ ಪ್ರತಿಕ್ರಿಯಿಸಿ ಆಗ ಏಕೆ ಯಡಿಯೂರಪ್ಪ ದೂರು ಕೊಡಲಿಲ್ಲ? ಕೇಸು ಹಾಕಿಸಲಿಲ್ಲ ಎಂದರು. ಮುಡಾ ಪ್ರಕರಣದಲ್ಲಿ ಸ್ಟಾಂಪ್ ಡ್ಯೂಟಿಯನ್ನು ತಹಶೀಲ್ದಾರ್ ಕಟ್ಟಿದ್ದಾರೆ ಎನ್ನುವ ಹೊಸ ಸುಳ್ಳಿನ ಬಗ್ಗೆ ಪ್ರತಿಕ್ರಿಯಿಸಿ ತಹಶೀಲ್ದಾರ್ ಚೆಕ್‌ನಲ್ಲಿ ಕೊಟ್ಟಿದ್ದಾರಾ ಯಾರು ಇಂಥಾ ಸುಳ್ಳುಗಳನ್ನು ಸೃಷ್ಟಿಸೋದು ಎಂದು ಪ್ರಶ್ನಿಸಿದರು.

## ಪ್ರಧಾನಿ ಮೋದಿ ಹಣ ಸಂಗ್ರಹ ಆರೋಪ ಸಾಬೀತು ಪಡಿಸಿದರೆ ಯಾವುದೇ ಶಿಕ್ಷೆಗೆ ಸಿದ್ಧ



**ಬೆಂಗಳೂರು, ನ.10 :** ರಾಜ್ಯದಲ್ಲಿ ಮದ್ಯ ಮಾರಾಟಗಾರರಿಂದ ಹಣ ಸಂಗ್ರಹಿಸಿ ಮಹಾರಾಷ್ಟ್ರ ಚುನಾವಣೆಗೆ ಬಳಸಲಾಗುತ್ತಿದೆ ಎಂಬ ಪ್ರಧಾನಿ ಮೋದಿ ಅವರು ಹೇಳಿರುವುದು ರಾಜಕೀಯ ಆರೋಪ ಅಷ್ಟೆ. ಅವರು ಇದನ್ನು ಸಾಬೀತುಪಡಿಸಿದರೆ ಯಾವುದೇ ಶಿಕ್ಷೆಗೆ ಸಿದ್ಧ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ಯಾವ ಯಾವ ರಾಜ್ಯದಲ್ಲಿ ಚುನಾವಣೆಗೆಂದು ಎಷ್ಟು ಹಣ ಸಂಗ್ರಹಿಸುತ್ತಿದ್ದಾರೆ ಎಂದು ನಾವು ಹೇಳಬೇಕಾಗುತ್ತದೆ. ಸುಮ್ಮನೆ ಆಧಾರವಿಲ್ಲದೆ ಆರೋಪ ಮಾಡುವುದು ಸರಿಯಲ್ಲ. ಇವೆಲ್ಲ ಸುಳ್ಳು ಆರೋಪ ಎಂದು ಹೇಳಿದರು. ಮಹಾರಾಷ್ಟ್ರ ರಾಜ್ಯದ ಕಾಂಗ್ರೆಸ್ನ ಯಾವುದೇ ನಾಯಕರುಗಳು ನಮ್ಮ ಜತೆ ಮಾತನಾಡಿಲ್ಲ. ಆದರೂ ಪ್ರಧಾನಿ ಮೋದಿ ಅವರು ಮಹಾರಾಷ್ಟ್ರದಲ್ಲಿ ಸುಳ್ಳು ಹೇಳಿಕೆ ಕೊಡುತ್ತಿರುವುದು ಅವರ ಹುದ್ದೆಗೆ ಗೌರವ ತರಲ್ಲ ಎಂದರು. ಮೋದಿ ಅವರು ಪದೇ ಪದೇ ಕರ್ನಾಟಕದ ಹೆಸರನ್ನು ತರುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಇದರಿಂದ ಪ್ರಯೋಜನ ಆಗಲ್ಲ, ಈ ಹಿಂದೆಯೇ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ರಾಜ್ಯದ ಜನತೆ ಮೋದಿ ಅವರಿಗೆ ತಕ್ಕ ಉತ್ತರ ಕೊಟ್ಟಿದ್ದಾರೆ ಎಂದರು. ಈ ಹಿಂದೆ ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಬಗ್ಗೆಯೂ ಮೋದಿ ಅವರು ಸುಳ್ಳು ಹೇಳಿದ್ದರು. ನಾನು ಮಹಾರಾಷ್ಟ್ರದ ಬಿಜೆಪಿ ಮತ್ತು ಅಲ್ಲಿನ ಮಿತ್ರ ಪಕ್ಷಗಳ ನಾಯಕರಿಗೆ ಪತ್ರ ಬರೆದು ರಾಜ್ಯದ ಎಲ್ಲ ಜಿಲ್ಲೆಗಳಲ್ಲೂ ಗ್ಯಾರಂಟಿ ಯೋಜನೆಗಳ ಅನುಷ್ಠಾನವನ್ನು ವೀಕ್ಷಿಸಿ ಆಹ್ವಾನ ಕೊಡಲು ನಿರ್ಧರಿಸಿದ್ದೇನೆ.

ಅವರಿಗೆ ಅಗತ್ಯ ಬಿದ್ದರೆ ವಿಶೇಷ ವಿಮಾನವನ್ನು ಒದಗಿಸಿಕೊಡುತ್ತೇನೆ. ಹಾಗೆಯೇ ಎಲ್ಲ ಜಿಲ್ಲೆಗಳ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರ ದೂರವಾಣಿಯನ್ನು ಕೊಡುತ್ತೇನೆ. ಅವರೇ ಮಾತನಾಡಿ ಗ್ಯಾರಂಟಿ ಯೋಜನೆಯ ಅನುಷ್ಠಾನದ ಬಗ್ಗೆ ಮಾಹಿತಿ ಪಡೆದುಕೊಳ್ಳಲಿ ಎಂದು ಡಿ.ಕೆ ಶಿವಕುಮಾರ್ ಹೇಳಿದರು.

## ರಾಜ್ಯಸರ್ಕಾರ ಅವಧಿ ಪೂರೈಸದು



ರಾಮನಗರ, ನ.10: ಜನರನ್ನು ಸುಲಿಗೆ ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ತನ್ನ ಅವಧಿ ಪೂರ್ಣಗೊಳಿಸಲ್ಲ ಎಂದು ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಅವರು ಭವಿಷ್ಯ ನುಡಿದರು. ತಮ್ಮ ಮೊಮ್ಮಗ ನಿಖಿಲ್ ಕುಮಾರಸ್ವಾಮಿ ಪರ ಚನ್ನಪಟ್ಟಣದ ಎಸ್.ಎಂ. ಹಳ್ಳಿಯಲ್ಲಿ ಪ್ರಚಾರ ಭಾಷಣ ಮಾಡಿದ ಅವರು, ಅಧಿಕಾರಕ್ಕೆ ಬಂದ ದಿನದಿಂದಲೂ ಕಾಂಗ್ರೆಸ್‌ನವರು ನಾಡಿನ ಜನರನ್ನು ಶೋಷಣೆ ಮಾಡುತ್ತಿದ್ದು, ಹೀಗೆ ಮುಂದುವರಿದರೆ ಜನರ ಬದುಕಿಗೆ ಯಾವುದೇ ಒಳ್ಳೆಯದ್ದು ಆಗಲ್ಲ. ಹೀಗಾಗಿ ಇಂತಹ ಸರ್ಕಾರವನ್ನು ಕಿತ್ತೊಗೆಯಬೇಕು ಎಂದು ಕರೆ ಕೊಟ್ಟರು. ಗ್ಯಾರಂಟಿಗಳು ಯೋಜನೆ ಗಳನ್ನು ನಿಭಾಯಿಸಲು ಸರ್ಕಾರಕ್ಕೆ ಆಗುತ್ತಿಲ್ಲ. ಜನರ ನಿರೀಕ್ಷೆಯಂತೆ ಯೋಜನೆಗಳು ತಲುಪುತ್ತಿಲ್ಲ.

ಸುಳ್ಳು ಭರವಸೆಗಳನ್ನು ನೀಡಿ ಜನರ ಭಾವನೆಗಳೊಂದಿಗೆ ರಾಜ್ಯ ಸರ್ಕಾರ ಚೆಲ್ಲಾಟವಾಡುತ್ತಿದೆ ಎಂದು ಕುಟುಕಿದರು.

## ಅಫ್ಘಾನ್ ರಕ್ಷಣಾ ಸಚಿವರನ್ನು ಭೇಟಿಯಾದ ಭಾರತೀಯ ನಿಯೋಗ



**ಕಾಬೂಲ್, ನ.10:** ಮಹತ್ವದ ನಡೆಯೊಂದರಲ್ಲಿ ಭಾರತದ ನಿಯೋಗವು ಶನಿವಾರ ಅಫ್ಘಾನಿಸ್ತಾನದ ಹಂಗಾಮಿ ರಕ್ಷಣಾ ಸಚಿವ ಮುಲ್ಲಾ ಮುಹಮ್ಮದ್ ಯಾಕೂಬ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದೆ.

ಇರಾನ್‌ನಲ್ಲಿ ತಾನು ಅಭಿವೃದ್ಧಿಪಡಿಸುತ್ತಿರುವ ಚಬಹಾರ್ ಬಂದರನ್ನು ಬಳಸಿಕೊಳ್ಳುವಂತೆ ಆಹ್ವಾನ ನೀಡಿದೆ.

ಅಲ್ಲದೆ ಅಫ್ಘಾನಿಸ್ತಾನಕ್ಕೆ ತಾನು ನೀಡುತ್ತಿರುವ ಮಾನವೀಯ ನೆರವನ್ನು ವಿಸ್ತರಿಸುವ ಬಗ್ಗೆಯೂ ಚರ್ಚಿಸಿದೆ.

ಭಾರತೀಯ ನಿಯೋಗದ ನೇತೃತ್ವವನ್ನು ಪಾಕಿಸ್ತಾನ –ಅಮೆರಿಕ – ಇರಾನ್ ವಿಭಾಗದ ಜಂಟಿ ಕಾರ್ಯದರ್ಶಿ ಜೆ.ಪಿ.ಸಿಂಗ್ ವಹಿಸಿದ್ದರು. ಅಫ್ಘಾನಿಸ್ತಾನದ ಮಾಜಿ ಅಧ್ಯಕ್ಷ ಹಾಮಿದ್ ಕರ್ಝಾಯಿ ಹಾಗೂ ಇತರ ಹಿರಿಯ ನಾಯಕರನ್ನು ಮತ್ತು ಅಫ್ಘಾನ್ ನಲ್ಲಿ ಕಾರ್ಯಾಚರಿಸುತ್ತಿರುವ ವಿಶ್ವಸಂಸ್ಥೆ ಏಜೆನ್ಸಿಗಳ ಮುಖ್ಯಸ್ಥರನ್ನು ಕೂಡಾ ಭಾರತೀಯ ನಿಯೋಗ ಭೇಟಿಯಾಗಿರುವುದಾಗಿ ವಿದೇಶಾಂಗ ವ್ಯವಹಾರಗಳ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

2021ರಿಂದ ಅಫ್ಘಾನಿಸ್ತಾನದ ಆಡಳಿತ ನಡೆಸುತ್ತಿರುವ ತಾಲಿಬಾನ್ ಸರಕಾರಕ್ಕೆ ಭಾರತವು ಮಾನ್ಯತೆಯನ್ನು ನೀಡಿಲ್ಲ. ಆದರೆ ಆ ದೇಶದ ಜನತೆಗೆ ಭಾರತವು ಗೋಧಿ, ಔಷಧಿಗಳು, ವೈದ್ಯಕೀಯ ಸಾಮಾಗ್ರಿಗಳು ಸೇರಿದಂತೆ ಮಾನವೀಯ ನೆರವನ್ನು ಒದಗಿಸುತ್ತಾ ಬಂದಿದೆ.

ಚಬಹಾರ್ ಬಂದರನ್ನು ಅಭಿವೃದ್ಧಿಪಡಿಸಲು ಹಾಗೂ ನಿರ್ವಹಿಸುವ ಕುರಿತಾಗಿ ಈ ವರ್ಷದ ಆರಂಭದಲ್ಲಿ ಭಾರತವು ಇರಾನ್ ಜೊತೆ ಒಪ್ಪಂದವನ್ನು ಏರ್ಪಡಿಸಿಕೊಂಡಿತ್ತು..

## ಸುಪ್ರೀಂಕೋರ್ಟ್ ಸಿಜೆಯಾಗಿ ಸಂಜೀವ್ ಖನ್ನಾ ಇಂದು ಪ್ರಮಾಣವಚನ ಸ್ವೀಕಾರ



**ನವದೆಹಲಿ, ನ.10:** ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ಸೋಮವಾರ ಭಾರತದ ಮುಂದಿನ ಮುಖ್ಯ ನ್ಯಾಯಮೂರ್ತಿಯಾಗಿ (ಸಿಜೆಐ) ಪ್ರಮಾಣವಚನ ಸ್ವೀಕರಿಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಖನ್ನಾ ಅವರಿಗೆ ಪ್ರತಿಜ್ಞಾವಿಧಿ ಬೋಧಿಸಲಿದ್ದಾರೆ. ನ್ಯಾಯಮೂರ್ತಿ ಖನ್ನಾ ಅವರು 51ನೇ ಸಿಜೆಐ ಆಗಿದ್ದು, ಸುಮಾರು 6 ತಿಂಗಳ ಅಧಿಕಾರಾವಧಿಯನ್ನು ಹೊಂದಿದ್ದಾರೆ.

ಸುಪ್ರೀಂ ಕೋರ್ಟ್ ನ್ಯಾಯಾಧೀಶರಾಗಿ, ಅವರು 370ನೇ ವಿಧಿ ರದ್ದತಿ, ವ್ಯಭಿಚಾರದ ಅಪರಾಧೀಕರಣ, ಚುನಾವಣಾ ಬಾಂಡ್‌ಗಳ ಯೋಜನೆ, ಇವಿಎಂ–ವಿವಿಪ್ಯಾಟ್ ಟ್ಯಾಲಿ ಇತ್ಯಾದಿಗಳ ಮಹತ್ವದ ತೀರ್ಪುಗಳ ಭಾಗವಾಗಿದ್ದಾರೆ.

ಹಾಲಿ ಸಿಜೆಐ ಡಿ.ವೈ. ಚಂದ್ರಚೂಡ್ ಅವರು ಖನ್ನಾ ಅವರನ್ನು ತಮ್ಮ ಉತ್ತರಾಧಿಕಾರಿಯಾಗಿ ಕಳೆದ ತಿಂಗಳು ಶಿಫಾರಸ್ಸು ಮಾಡಿದ ನಂತರ ಅಕ್ಟೋಬರ್ 24 ರಂದು ಕೇಂದ್ರ ಸರ್ಕಾರ ಅವರನ್ನು ಅತ್ಯುನ್ನತ ನ್ಯಾಯಾಂಗ ಕಚೇರಿಗೆ ನೇಮಕ ಮಾಡಿತ್ತು

ನವೆಂಬರ್ 11 ರಿಂದ ಜಾರಿಗೆ ಬರುವಂತೆ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಾಧೀಶರಾಗಿ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರನ್ನು ನೇಮಿಸಲು ರಾಷ್ಟ್ರಪತಿಗಳು ಸಂತೋಷಪಟ್ಟಿದ್ದಾರೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವಾಲಯ ಹೊರಡಿಸಿದ ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ಸುಪ್ರೀಂ ಕೋರ್ಟ್ ಕಾನೂನು ಸೇವಾ ಸಮಿತಿಯ ಅಧ್ಯಕ್ಷ ಹುದ್ದೆ ಹೊಂದಿದ್ದು, ಪ್ರಸ್ತುತ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರಾಗಿದ್ದಾರೆ ಮತ್ತು ಭೋಪಾಲ್‌ನ ರಾಷ್ಟ್ರೀಯ ನ್ಯಾಯಾಂಗ ಅಕಾಡೆಮಿಯ ಆಡಳಿತ ಸಲಹೆಗಾರರ ಸದಸ್ಯರಾಗಿದ್ದಾರೆ. ಈ ಹಿಂದೆ ಜನವರಿ 2019 ರವರೆಗೆ ದೆಹಲಿ ಹೈಕೋರ್ಟ್‌ನಲ್ಲಿ ನ್ಯಾಯಾಧೀಶರಾಗಿ ಸೇವೆ ಸಲ್ಲಿಸಿದ್ದಾರೆ. ದೆಹಲಿ ಹೈಕೋರ್ಟ್ ನ್ಯಾಯಾಧೀಶರಾಗಿ ದೆಹಲಿ ಜುಡಿಶಿಯಲ್ ಅಕಾಡೆಮಿ, ಜಿಲ್ಲಾ ನ್ಯಾಯಾಲಯದ ಮಧ್ಯಸ್ಥಿಕೆ ಕೇಂದ್ರಗಳ ಅಧ್ಯಕ್ಷ, ನ್ಯಾಯಾಧೀಶ ಹುದ್ದೆಯನ್ನು ಹೊಂದಿದ್ದರು.

ಮೇ 1960 ರಲ್ಲಿ ಜನಿಸಿದ ಅವರು ದೆಹಲಿ ವಿಶ್ವವಿದ್ಯಾಲಯದ ಕ್ಯಾಂಪಸ್ ಕಾನೂನು ಕೇಂದ್ರದಿಂದ ಕಾನೂನು ಪದವಿ ಪಡೆದಿದ್ದಾರೆ. 1983 ರಲ್ಲಿ ದೆಹಲಿಯ ಬಾರ್ ಕೌನ್ಸಿಲ್‌ನಲ್ಲಿ ವಕೀಲರಾಗಿ ನೋಂದಣಿಯಾಗಿದ್ದು, ಪ್ರಾಥಮಿಕವಾಗಿ ದೆಹಲಿ ಹೈಕೋಟ್‌ನಲ್ಲಿ ತೆರಿಗೆ, ಮಧ್ಯಸ್ಥಿಕೆ, ವಾಣಿಜ್ಯ ಕಾನೂನು, ಪರಿಸರ ಕಾನೂನು, ವೈದ್ಯಕೀಯ ನಿರ್ಲಕ್ಷ್ಯ ಕಾನೂನು ಮತ್ತು ಕಂಪನಿ ಕಾನೂನನ್ನು ಅಭ್ಯಾಸ ಮಾಡಿದ್ದಾರೆ. ಸುದೀರ್ಘ ಕಾಲ ಆದಾಯ ತೆರಿಗೆ ಇಲಾಖೆಯ ಹಿರಿಯ ಸ್ಥಾಯಿ ವಕೀಲರಾಗಿ ಕಾರ್ಯನಿರ್ವಹಿಸಿದ್ದಾರೆ. 2004 ರಲ್ಲಿ ದೆಹಲಿ ಸರ್ಕಾರದ ಸ್ಥಾಯಿ ಸಲಹೆಗಾರರಾಗಿ (ಸಿವಿಲ್) ನೇಮಕಗೊಂಡಿದ್ದ ಅವರು, ದೆಹಲಿ ಹೈಕೋರ್ಟ್‌ನಲ್ಲಿ ಹೆಚ್ಚುವರಿ ಪಬ್ಲಿಕ್ ಪ್ರಾಸಿಕ್ಯೂಟರ್ ಆಗಿ ಮತ್ತು ಅಮಿಕಸ್ ಕ್ಯೂರಿ (ನ್ಯಾಯಾಲಯದ ಸ್ನೇಹಿತ) ಆಗಿ ಹಲವಾರು ಕ್ರಿಮಿನಲ್ ಪ್ರಕರಣಗಳಲ್ಲಿ ಹಾಜರಾಗಿ, ವಾದಿಸಿದ್ದಾರೆ.

## ಕುರಾಖೋವ್ ನಗರವನ್ನು ಸುತ್ತುವರಿದ ರಷ್ಯನ್ ಪಡೆ

**ಉಕ್ರೇನ್, ನ.10:** ಯುದ್ಧಪೀಡಿತ ಉಕ್ರೇನ್‌ನ ಪೂರ್ವ ಗಡಿ ಮುಂಚೂಣಿಯಲ್ಲಿರುವ ಕುರಾಖೋವ್ ನಗರವನ್ನು ಮೂರು ಕಡೆಗಳಿಂದಲೂ ರಷ್ಯನ್ ಪಡೆಗಳು ಸುತ್ತುವರಿದಿದ್ದು, ಭಗ್ನಗೊಂಡಿರುವ ನಗರದ ಮಧ್ಯಭಾಗದಿಂದ ಕೇವಲ 3 ಕಿ.ಮೀ. ದೂರದಲ್ಲಿವೆ. ಉಕ್ರೇನ್ ಪಡೆಗಳು ಆಕ್ರಮಣಕಾರಿ ರಷ್ಯನ್ ಪಡೆಗಳ ಮೇಲೆ ಭೀಕರ ದಾಳಿಯನ್ನು ಡೆಸುವ ಸಾಧ್ಯತೆ ಇದೆಯೆನ್ನಲಾಗಿದೆ.

ಆದಾಗ್ಯೂ ನಗರದಲ್ಲಿ ಇನ್ನೂ 700ರಿಂದ 1 ಸಾವಿರದಷ್ಟು ನಿವಾಸಿಗಳು ಉಳಿದುಕೊಂಡಿದ್ದು, ಅವರಲ್ಲಿ ಹೆಚ್ಚಿನವರು ಅಪಾರ್ಟ್‌ಮೆಂಟ್ ಕಟ್ಟಡಗಳ ತಳ ಅಂತಸ್ತಿನಲ್ಲಿ ವಾಸವಾಗಿದ್ದು ನೀರು, ವಿದ್ಯುತ್ ಇಲ್ಲದೆ ಸಂಕಷ್ಟಕ್ಕೀಡಾಗಿದ್ದಾರೆ.

ರಷ್ಯನ್ ಪಡೆಗಳು ನಿರಂತರವಾದ ಫಿರಂಗಿ, ರಾಕೆಟ್ ಲಾಂಚರ್ ಗಳು, ವೈಮಾನಿಕ ಬಾಂಬ್‌ಗಳು ಹಾಗೂ ಡ್ರೋನ್ ಗಳ ಮೂಲಕ ಕುರಾಖೋವ್ ಮೇಲೆ ಪ್ರಹಾರ ನಡೆಸುತ್ತಿವೆ. ಡೊನ್‌ಬಾಸ್ ಪ್ರಾಂತದ ಪಶ್ಚಿಮಾಭಿಮುಖವಾದ ಎಲ್ಲಾ ಪ್ರದೇಶಗಳನ್ನು ವಶಪಡಿಸಿಕೊಳ್ಳುವ ಕಾರ್ಯಾಚರಣೆಯನ್ನು ಅದು ಮುಂದುವರಿಸಿದೆ. ಕುರಾಖೋವ್ ನಲ್ಲಿ ಯುದ್ಧ ಸನ್ನಿವೇಶವು ಅತ್ಯಂತ ಸವಾಲುದಾಯಕವಾಗಿದೆಯೆಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿ ಸ್ವತಃ ಒಪ್ಪಿಕೊಂಡಿದ್ದಾರೆ.

ರಷ್ಯನ್ ಸೇನೆಯ ದಾಳಿಯಿಂದಾಗಿ ನಗರದ ಆಸ್ಪತ್ರೆಗಳು, ಶಿಶುವಿಹಾರಗಳು, ಜಲಸಂಸ್ಕರಣ ಘಟಕ, ನಿರಾಶ್ರಿತರ ಕೇಂದ್ರ, ಅಂಚೆ ಕಚೇರಿ, ಸಾಂಸ್ಕೃತಿಕ ಕೇಂದ್ರಗಳೆಲ್ಲವೂ ನಾಶವಾಗಿದ್ದು, ಬಾಂಬ್ ದಾಳಿಗೆ ಅಹುತಿಯಾದ ಕಟ್ಟಡಗಳ ಅವಶೇಷಗಳಿಂದ ಹೊಗೆ ಅಗಸದೆತ್ತರಕ್ಕೆ ವ್ಯಾಪಿಸಿರುವ ನೋಟವು ಸಾಮಾನ್ಯವಾಗಿದೆ ಯೆಂದು ವರದಿಗಳು ತಿಳಿಸಿವೆ.

## ಆಸ್ಟ್ರೇಲಿಯಾ, ನ್ಯೂಜಿಲೆಂಡ್ ಜನಸಂಖ್ಯೆಗಿಂತ ಹೆಚ್ಚು ಜನರನ್ನು 24 ಗಂಟೆಯಲ್ಲಿ ಸಾಗಿಸಿದ ಭಾರತೀಯ ರೈಲ್ವೆ!

**ಹುಬ್ಬಳ್ಳಿ, ನ.10: ಭಾರತೀಯರ ಹೆಮ್ಮೆಯ ರೈಲ್ವೆ ಇಲಾಖೆ ದಾಖಲೆಯೊಂದನ್ನು ನಿರ್ಮಿಸಿದೆ. 24 ಗಂಟೆಗಳಲ್ಲಿ ಆಸ್ಟ್ರೇಲಿಯಾ ಮತ್ತು ನ್ಯೂಜಿಲೆಂಡ್ ಜನಸಂಖ್ಯೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಪ್ರಯಾಣಿಕರನ್ನು ಸಾಗಿಸೋ ಮೂಲಕ ದಾಖಲೆ ನಿರ್ಮಿಸಿದೆ. ಅ.1 ರಿಂದ ನವೆಂಬರ್ 5 ರವರೆಗೆ ಭಾರತೀಯ ರೈಲ್ವೆ ವಿಶೇಷ ರೈಲುಗಳ ಮೂಲಕ 65 ಲಕ್ಷ ಪ್ರಯಾಣಿಕರಿಗೆ ಸೇವೆ ಕಲ್ಪಿಸಿದೆ. ಇದೇ ಅವಧಿಯಲ್ಲಿ 7.5 ಲಕ್ಷ ಪ್ರಯಾಣಿಕರು ವಿಶೇಷ ರೈಲುಗಳ ಮೂಲಕ ಬಿಹಾರ, ಪೂರ್ವ ಉತ್ತರ ಪ್ರದೇಶ ಮತ್ತು ಜಾರ್ಖಂಡ್‌ಗೆ ಪ್ರಯಾಣಿಸಿದ್ದಾರೆ.**

**ಅತಿಹೆಚ್ಚು ಒಂದು ದಿನದ ಪ್ರಯಾಣಿಕರ ಅಂಕಿಅಂಶ:**

**ನ.4 ರಂದು 120.72 ಲಕ್ಷ (19.43 ಲಕ್ಷ ಕಾಯ್ದಿರಿಸಿದ ಮತ್ತು 101.29 ಲಕ್ಷ ಕಾಯ್ದಿರಿಸದ ಉಪನಗರೇತರ) ಪ್ರಯಾಣಿಕರನ್ನು ಸಾಗಿಸಲಾಗಿದೆ. ಇದು ಪ್ರಸಕ್ತ ವರ್ಷದ ಅತಿ ಹೆಚ್ಚು ಒಂದು ದಿನದ ಪ್ರಯಾಣಿಕರ ಅಂಕಿ – ಅಂಶವಾಗಿದೆ.**

## ನಿತ್ಯ ಪಂಚಾಂಗ 11.11.2024 ಸೋಮವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ದಕ್ಷಿಣಾಯನ-ಶರದ್ ಋತು,
ಚಾಂದ್ರಮಾನ, ಆಶ್ವಯುಜ ಕಾರ್ತಿಕ ಶುದ್ಧ

ದಶಮಿ, ಶತಭಿಷ ನಕ್ಷತ್ರ,
ಘೂವಾಧಭಾದ್ರಾ, ಕುಣಿಗಲ್
ಅಟವೀಶ್ವರ ಪುಣ್ಯತಿಥಿ,
ಪೋಧತ್ತ ಆಳ್ವಾರ್ ತಿರುನಕ್ಷತ್ರ

| ದಿನ | ರಾಹುಕಾಲ | ಯಮಗಂಡ | ಗುಳಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ವಿಧಾನಸೌಧ ಆವರಣದಲ್ಲಿ ನಾಡದೇವತೆ ಭುವನೇಶ್ವರಿ ಪ್ರತಿಮೆ ಸ್ಥಾಪನೆ: ಸಿಎಂ ಘೋಷಣೆ

**ಬೆಂಗಳೂರು, ನ.10–** ವಿಧಾನಸೌಧ ಆವರಣದಲ್ಲಿ 25 ಅಡಿ ಎತ್ತರದ ನಾಡದೇವತೆ ತಾಯಿ ಭುವನೇಶ್ವರಿ ಪ್ರತಿಮೆಯನ್ನು ಸ್ಥಾಪಿಸುವುದಾಗಿ ಸಿಎಂ ಸಿದ್ದರಾಮಯ್ಯ ಘೋಷಿಸಿರುವುದು ಕನ್ನಡಿಗರಿಗೆ ಹೆಮ್ಮೆ ತಂದಿದೆ. ಆದರೆ, ಈ ಪ್ರತಿಮೆಯನ್ನು ವಿಧಾನಸೌಧ ಹಿಂಭಾಗದ ಬದಲು ಮುಂಭಾಗದಲ್ಲಿ ಪ್ರತಿಷ್ಠಾಪಿಸಬೇಕೆಂದು 'ನೈಜ ಹೋರಾಟಗಾರರ ವೇದಿಕೆ' ಸರ್ಕಾರವನ್ನು ಒತ್ತಾಯಿಸಿದೆ.



ವಿಕಾಸಸೌಧ ಹಾಗೂ ವಿಧಾನಸೌಧ ಮಧ್ಯೆ ಪ್ರತಿಷ್ಠಾಪಿಸಿರುವ ಮಹಾತ್ಮ ಗಾಂಧಿ ಪ್ರತಿಮೆಯು ಸಾರ್ವಜನಿಕರ ಗಮನ ಸೆಳೆಯುತ್ತಿದೆ. ಅಂಬೇಡ್ಕರ್, ಜವಹರಲಾಲ್ ನೆಹರು, ನಾಡಪ್ರಭು ಕೆಂಪೇಗೌಡ ಹಾಗೂ ಜಗದ್ಗುರು ಬಸವಣ್ಣ ಅವರ ಪ್ರತಿಮೆಯನ್ನು ವಿಧಾನಸೌಧ ಮುಂಭಾಗದಲ್ಲಿ ಪ್ರತಿಷ್ಠಾಪಿಸಲಾಗಿದೆ. ಹಾಗಾಗಿ, ಕನ್ನಡಿಗರ ಹೆಮ್ಮೆಯ ಪ್ರತಿಕವಾದ ಭುವನೇಶ್ವರಿ ಪ್ರತಿಮೆಯನ್ನು ವಿಧಾನಸೌಧದ ಮೆಟ್ಟಿಲುಗಳ ಮುಂಭಾಗದ ಜಾಗದಲ್ಲೇ ಪ್ರತಿಷ್ಠಾಪಿಸಬೇಕು. ವಿಧಾನಸೌಧದ ಹಿಂಭಾಗದಲ್ಲಿ ಪ್ರತಿಷ್ಠಾಪಿಸಿದರೆ ನ್ಯಾಯ ಸಮ್ಮತವಲ್ಲ ಮತ್ತು ಇದು ಕನ್ನಡಿಗರಿಗೆ ಮಾಡುವ ದ್ರೋಹವಾಗಲಿದೆ.

ವಿಧಾನಸೌಧಕ್ಕೆ ಬರುವವರಿಗೆ ಪ್ರತಿಮೆ ಸಮರ್ಪಕವಾಗಿ ಕಾಣುವುದಿಲ್ಲ ಎಂದು ವೇದಿಕೆ ಅಧ್ಯಕ್ಷ ಎಚ್. ಎಂ. ವೆಂಕಟೇಶ ಹೇಳಿದ್ದಾರೆ.

ದೆಹಲಿ ಮೂಲದ ಕಲಾವಿದರಿಗೆ ಪ್ರತಿಮೆ ನಿರ್ಮಾಣದ ಗುತ್ತಿಗೆ ಕೊಟ್ಟಿರುವುದು ಸರಿಯಲ್ಲ. ರಾಜ್ಯದಲ್ಲಿ ಸಾಕಷ್ಟು ಒಳ್ಳೆಯ ಕಲಾವಿದರಿದ್ದು, ಪ್ರತಿಮೆ ನಿರ್ಮಾಣ ಕಾರ್ಯವನ್ನು ಕನ್ನಡಿಗರಿಗೆ ನೀಡಬೇಕಿತ್ತು ಎಂದರು.

# ಉಪಚುನಾವಣಾ ಫಲಿತಾಂಶ ಬಂದ ನಂತರ ಎಲ್ಲ ಆರೋಪಗಳಿಗೆ ಉತ್ತರ-ಯಡಿಯೂರಪ್ಪ

**ಹಾವೇರಿ, ನ.10–** ಉಪ ಚುನಾವಣೆಯಲ್ಲಿ ಶಿಗ್ಗಾವಿ ಸೇರಿದಂತೆ ಮೂರು ಕ್ಷೇತ್ರದಲ್ಲಿ ಬಿಜೆಪಿ ಹಾಗೂ ಪ್ರಧಾನಿ ನರೇಂದ್ರ ಮೋದಿ ಪರವಾದ ಗಾಳಿ ಇದೆ. ಮೂರು ಕ್ಷೇತ್ರದಲ್ಲಿ ಬಿಜೆಪಿ ಗೆದ್ದರೆ, ಸಿದ್ದರಾಮಯ್ಯ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುತ್ತೀರಾ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಪ್ರಶ್ನಿಸಿದ್ದಾರೆ.

ಶಿಗ್ಗಾವಿ ಸವಣೂರು ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಪರವಾಗಿ ಇಂದು ಹುಲಗೂರು, ತಡಸ್ ಗ್ರಾಮಗಳಲ್ಲಿ ರೋಡ್ ಶೋ ನಡೆಸಿ ಚುನಾವಣಾ ಪ್ರಚಾರ ಮಾಡಿದರು.ಈ ಸಂದರ್ಭದಲ್ಲಿ ಮಾತನಾಡಿದ ಅವರು, ಶಿಗ್ಗಾವಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಭರತ ಬೊಮ್ಮಾಯಿ 50000 ಮತಗಳ ಅಂತರದಿಂದ ಗೆಲ್ಲುವುದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ. ಸೂರ್ಯ ಚಂದ್ರ ಇರುವುದು ಎಷ್ಟು ಸತ್ಯವವೋ ಭರತ್ ಬೊಮ್ಮಾಯಿ ಗೆಲುವು ಅಷ್ಟೇ ಸತ್ಯ ಎಂದು ಹೇಳಿದರು.ಈ ಉಪ ಚುನಾವಣೆಯಲ್ಲಿ ಬಿಜೆಪಿ ಮೂರು ಕ್ಷೇತ್ರದಲ್ಲಿ ಗೆಲ್ಲಲಿದೆ. ಮೂರು ಕ್ಷೇತ್ರ ಗೆದ್ದರೆ ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜಿನಾಮೆ ಕೊಡ್ತಿರಾ ಎಂದು ಪ್ರಶ್ನಿಸಿದರು.



ಮೂರು ಕ್ಷೇತ್ರದಲ್ಲಿ ಬಿಜೆಪಿ ಗಾಳಿ ಬೀಸುತ್ತಿದೆ. ಎಲ್ಲ ಕಡೆ ಬಿಜೆಪಿ, ಪ್ರಧಾನಿ ನರೇಂದ್ರ ಮೋದಿ ಗಾಳಿ ಬೀಸುತ್ತಿದೆ. ನಾನು ಮುಖ್ಯಮಂತ್ರಿಂ ಯಾಗಿದ್ದಾಗ ರೈತರಿಗೆ ಕೇಂದ್ರದ ಕಿಸಾನ್ ಸಮ್ಮಾನ ಯೋಜನೆ ಜೊತೆಯಲ್ಲಿ ನಾನು 4000 ರೂ. ಕೊಡುತ್ತಿದ್ದೆ. ಅದನ್ನು ಯಾಕೆ ನಿಲ್ಲಿಸಿದ್ದೀರಿ ಹೇಳಿ, ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದೂವರೆ ವರ್ಷವಾಯಿತು. ಇದುವರೆಗೂ ಒಂದು ಕಿಲೋ ಮೀಟರ್ ರಸ್ತೆ ಮಾಡಿದ್ದೀರಾ, ಒಂದೇ ಒಂದು ಗುಂಡಿ ಮುಚ್ಚಿಲ್ಲ. ನಿಮ್ಮ ರಾಜಕೀಯ ದೊಂಬರಾಟ ಉಪ ಚುನಾವಣೆ ಮುಗಿದ ಮೇಲೆ ಕೊನೆಯಾಗಲಿದೆ ಎಂದು ಹೇಳಿದರು.

ನೀವೆಲ್ಲ ಅಣ್ಣ ತಮ್ಮಂದಿರು ತಾಯಂದಿರು ನಮ್ಮ ಅಭ್ಯರ್ಥಿ ಭರತ್ ಬೊಮ್ಮಾಯಿಯನ್ನು ದೊಡ್ಡ ಅಂತರದಿಂದ ಗೆಲ್ಲಿಸುವಂತೆ ಮನವಿ ಮಾಡಿದರು.ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಕೇಂದ್ರ ಸಚಿವ ಪ್ರಲ್ಹಾದ ಜೋಷಿ, ಮಾಜಿ ಸಚಿವರಾದ ಸಿ.ಸಿ.ಪಾಟೀಲ್, ರಾಜು ಗೌಡ ಸೇರಿದಂತೆ ಅನೇಕ ನಾಯಕರು ಹಾಜರಿದ್ದರು.

# ವಕ್ಫ್ ತಿದ್ದುಪಡಿ ಕಾಯ್ದೆಯನ್ನು ಸಂಸತ್‌ನಲ್ಲಿ ಮಂಡನೆ: ವಿ. ಸೋಮಣ್ಣ

**ಬೆಂಗಳೂರು, ನ.10–** ತಿಂಗಳಾಂತ್ಯದಿಂದ ಆರಂಭವಾಗಲಿರುವ ಸಂಸತ್ತಿನ ಜಂಟಿ ಅಧಿವೇಶನದಲ್ಲಿ ವಕ್ಫ್ ತಿದ್ದುಪಡಿ ಕಾಯ್ದೆಯನ್ನು ಕೇಂದ್ರ ಸರ್ಕಾರ ಸಂಸತ್‌ನಲ್ಲಿ ಮಂಡಿಸಲಿದೆ ಎಂದು ಕೇಂದ್ರ ಸಚಿವ ವಿ. ಸೋಮಣ್ಣ ಹೇಳಿದ್ದಾರೆ.



ಚನ್ನಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಕ್ಫ್ ಆಸ್ತಿ ಸಂಬಂಧ ಉಂಟಾಗಿರುವ ಎಲ್ಲ ವಿವಾದಗಳಿಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ, ಕಾಯ್ದೆಗೆ ತಿದ್ದುಪಡಿ ಮಾಡುವ ಮೂಲಕ ಎಲ್ಲವನ್ನು ಸರಿಪಡಿಸಲಿದೆ ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಅಭಿವೃದ್ಧಿಯನ್ನು ಕಡೆಗಣಿಸಿದೆ.

ಇದರಿಂದಾಗಿ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಸದ್ಯ ಜಾರಿಯಲ್ಲಿರುವ ಖಾತರಿ ಯೋಜನೆಗಳನ್ನು ಸ್ಥಗಿತಗೊಳಿಸಲಿದೆ ಎಂದು ತಿಳಿಸಿದರು. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಎನ್ ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರಿಗೆ ಉತ್ತಮ ಸ್ಪಂದನೆ ವ್ಯಕ್ತವಾಗಿದೆ.

ಈ ಚುನಾವಣೆಯಲ್ಲಿ ಅವರು ಗೆಲುವು ಸಾಧಿಸುವುದು ಖಚಿತ. ಅದೇ ರೀತಿ ಇನ್ನುಳಿದ ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ತಿಳಿಸಿದರು.

# ಭತ್ತ ಖರೀದಿ ಕೇಂದ್ರ ಆರಂಭಿಸಿ

**ಬೆಂಗಳೂರು, ನ.10–** ಭತ್ತದ ಖರೀದಿ ಕೇಂದ್ರಗಳನ್ನು ಆರಂಭಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಕಂಪ್ಲಿ ಕ್ಷೇತ್ರದ ಶಾಸಕ ಗಣೇಶ್ ಹಾಗೂ ರೈತ ಮುಖಂಡರು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಭತ್ತ ಖರೀದಿ ಕೇಂದ್ರಗಳನ್ನು ಆರಂಭಿಸುವಂತೆ ಮನವಿ ಮಾಡಿದ್ದಾರೆ.



ಬಳ್ಳಾರಿ, ಹೊಸಪೇಟೆ, ರಾಯಚೂರು, ಯಾದಗಿರಿ ಭಾಗದಲ್ಲಿ ಭತ್ತದ ಕೊಯ್ಲು ಕೆಲವೇ ದಿನಗಳಲ್ಲಿ ಆರಂಭವಾಗಲಿದೆ. ಅಲ್ಲದೆ ಭತ್ತದ ಬೆಲೆ ಕುಸಿದಿರುವುದರಿಂದ ಭತ್ತದ ಖರೀದಿ ಕೇಂದ್ರಗಳನ್ನುಆರಂಭಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ರೈತರು ಆಗ್ರಹಿಸಿದ್ದರು.

ಈ ವೇಳೆ ಅಧಿಕಾರಿಗಳೊಂದಿಗೆ ದೂರವಾಣಿಯಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಈ ಕೂಡಲೇ ಭತ್ತದ ಖರೀದಿ ಕೇಂದ್ರಗಳನ್ನು ಆರಂಭಿಸುವಂತೆ ಸೂಚಿಸಿದ್ದಾರೆ. ಬೆಂಬಲ ಬೆಲೆ ಖರೀದಿ ಕೇಂದ್ರಗಳು ಶುರುವಾಗಿದೆ, ಬೆಲೆ ಕುಸಿದು ರೈತರಿಗೆ ಸಂಕಷ್ಟ ಎದುರಾಗಿದೆ. ಹೀಗಾಗಿ ತಕ್ಷಣವೇ ಖರೀದಿ ಕೇಂದ್ರಗಳನ್ನು ಆರಂಭಿಸಬೇಕು. ಜನವರಿವರೆಗೆ ಕಾಯಬೇಡಿ ಎಂದು ಸೂಚನೆ ನೀಡಿದ್ದಾರೆ.

# ಎಚ್.ಡಿ.ಕುಮಾರಸ್ವಾಮಿ ವಿರುದ್ಧ ಚೆಲುವರಾಯಸ್ವಾಮಿ ಕಿಡಿ

**ರಾಮನಗರ, ನ.10–**ಸಚಿವ ಚಲುವರಾಯಸ್ವಾಮಿ ಹಾಗೂ ಕಾಂಗ್ರೆಸ್ ಮುಖಂಡ ಕೀಲಾರಿ ಜಯರಾಮ ನಡುವೆ ಗಲಾಟೆ ವಿಚಾರ ಭಾರೀ ಚರ್ಚೆಗೆ ಗ್ರಾಸವಾಗಿದೆ.

ವರ್ಗಾವಣೆ ಹಣ ಹಂಚಿಕೆ ಮಾಡುವ ವಿಚಾರಕ್ಕೆ ಚಲುವರಾಯ ಸ್ವಾಮಿ ಮೇಲೆ ಹಲ್ಲೆ ನಡೆದಿದೆ ಎಂದು ಕೇಂದ್ರ ಸಚಿವ ಎಚ್ಡಿ ಕುಮಾರಸ್ವಾಮಿ ಆರೋಪ ಮಾಡಿ ದ್ದಾರೆ. ಇದು ರಾಜ್ಯ ರಾಜಕಾರಣದಲ್ಲಿ ಸಂಚಲನಕ್ಕೆ ಕಾರಣವಾಗಿದೆ. ಇದರ ಬೆನ್ನಲ್ಲೇ ಇದಕ್ಕೆ ಸ್ವತಃ ಚಲುವರಾಯಸ್ವಾಮಿ ಪ್ರತಿಕ್ರಿಯಿಸಿದ್ದು, ನಾನು ಎಂಗೇಜ್ಮೆಂಟ್ ಹೋಗಿದ್ದೆ. ಅಲ್ಲೇನು ಗಲಾಟೆ ನಡೆದಿಲ್ಲ, ಜಯರಾಮ್‌ಗೆ ನೀವು ಕೇಳಿ. ಅಂಥಾದ್ದೇನು ನಡೆದಿಲ್ಲ, ವರ್ಗಾವಣೆ ವಿಚಾರರ ಇಟ್ಟುಕೊಂಡು ಅವರು ಬಂದಿಲ್ಲ. ಚಪಲಕ್ಕೆ ಹೇಳುತ್ತಾರೋ ಗೊತ್ತಿಲ್ಲ ಎಂದು ಎಚ್ಡಿಕೆಗೆ ಟಾಂಗ್ ಕೊಟ್ಟರು.



ರಾಮನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಚಲುವರಾಯಸ್ವಾಮಿ, ಅದೇನಾದ್ರೂ ಇದ್ದರೆ ಕುಮಾರಸ್ವಾಮಿ ಹಾಕೋದಕ್ಕೆ ಹೇಳಿ. ಚಪಲಕ್ಕೆ ಹೇಳ್ತಾರೋ ಗೊತ್ತಿಲ್ಲ. ಸಿದ್ದಲಿಂಗೇಗೌಡ ದುಡ್ಡಿನ ವಿಚಾರ ಹೇಳೋದಕ್ಕೆ ಹೇಳಿ ಮೊದಲು. ಕುಮಾರಸ್ವಾಮಿ ತನ್ನ ಮಗನ ಚುನಾವಣೆ ನಿಲ್ಲಿಸಿದ್ರೂ ಚುನಾವಣೆ ಬಿಟ್ಟು ಚಲುವರಾಯಸ್ವಾಮಿ ಮೇಲೆ ಅವರ ಗಮನ. ಡಿಕೆ ಶಿವಕುಮಾರ್ ಹೇಳಿದ ಹಾಗೆ ಬೆಳಗೆದ್ದರೆ ಮಲಗಿದ್ದರೆ ಮಾತಾಡದೇ ಹೋದ್ರೆ ನಿದ್ದೆ ಬರಲ್ಲ. ನನ್ನ ಹೆಸರು ತೆಗೆದುಕೊಳ್ಳುತ್ತಾರೆ ಎಂದು ಕುಮಾರಸ್ವಾಮಿ ವಿರುದ್ಧ ಕಿಡಿಕಾರಿದರು.

ಮೈಸೂರಿನ ಹೋಟೆಲ್‌ನಲ್ಲಿ ರಾಜ್ಯದ ಸಚಿವ, ಶಾಸಕರು, ಮುಖಂಡರು ಶುಕ್ರವಾರ ರಾತ್ರಿ ಸಭೆ ಸೇರಿದ್ದರು ಎನ್ನಲಾಗಿದೆ. ಮೇಲ್ಮನೆ ಚುನಾವಣೆ ವೇಳೆ ಮುಖಂಡರೊಬ್ಬರಿಗೆ ಹಣದ ಭರವಸೆ ಕೊಡಲಾಗಿತ್ತು. ಆದರೆ ಪೂರ್ತಿ ಕೊಟ್ಟಿರಲಿಲ್ಲ ಎಂದು ಹೇಳಲಾಗಿದೆ. ಶುಕ್ರವಾರದ ಸಭೆ ವೇಳೆ ಆ ವ್ಯಕ್ತಿ ಹಣಕ್ಕೆ ಬೇಡಿಕೆ ಇಟ್ಟಾಗ ಮಾತಿನ ಚಕಮಕಿ ಆಗಿ ಸಚಿವರಿಂದ ಕಪಾಳಮೋಕ್ಷ ನಡೆಯಿತೆನ್ನಲಾಗಿದೆ.

ಕೆರಳಿದ ಮುಖಂಡ ಕೂಡ ಸಚಿವರ ಕೆನ್ನೆಗೆ ನಾಲ್ಕು ಬಾರಿಸಿದಾಗ ಶಾಸಕರು, ಇತರರು ಸೇರಿ ಆ ವ್ಯಕ್ತಿಗೆ ಥಳಿಸಿದರು ಎಂದು ಹೇಳಲಾಗಿದೆ. ಈ ವೇಳೆ ಕೆಲವರಿಂದ ಮೊಬೈಲ್‌ನಲ್ಲಿ ದೃಶ್ಯ ಚಿತ್ರೀಕರಣ. ಅದನ್ನು ಬಳಿಕ ಮುಖಂಡರು ಸೇರಿ ಅಳಿಸಿ ಹಾಕಿಸಿದರು ಎನ್ನಲಾಗಿದೆ.

ಈ ವಿಚಾರ ಕುಮಾರ ಸ್ವಾಮಿಗೆ ಗೊತ್ತಾಗಿ ಅದನ್ನು ಅವರು ಮಾಧ್ಯಗಳ ಎದುರು ಬಹಿರಂಗವಾಗಿ ಹೇಳಿದ್ದಾರೆ. ಈ ಸರ್ಕಾರದಲ್ಲಿ ವರ್ಗಾವಣೆ ದಂಧೆ ನಡೆಯುತ್ತಿದೆ. ಈ ದಂಧೆ ವಿಚಾರವಾಗಿಯೇ ಮೈಸೂರಿನಲ್ಲಿ ಸಚಿವರು, ಮತ್ತಿತರರು ಹೊಡೆದಾಡಿಕೊಂಡಿದ್ದಾರೆ ಎನ್ನುವ ಮಾಹಿತಿ ಇದೆ. ಒಬ್ಬ ಸಚಿವರನ್ನು ಬಹಿರಂಗವಾಗಿ ಹೊಡೆದಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದರು. ಕುಮಾರಸ್ವಾಮಿ ಅವರು ಪ್ರಸ್ತಾಪಿಸಿದ್ದ ಈ ವಿಚಾರ ರಾಜ್ಯ ರಾಜಕೀಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

## ನಿಧನ ವಾರ್ತೆ

# ಡಾನ್ ಬಾಸ್ಕೋ ಸಭಾಂಗಣದ ವ್ಯವಸ್ಥಾಪಕ ಬೋನಿಫಾಸ್ ಪಿಂಟೋ

**ಮಂಗಳೂರು, ನ.10–** ಖ್ಯಾತ ಸಾಂಸ್ಕೃತಿಕ ಸಂಘಟಕ ಮತ್ತು ಕೊಂಕಣಿ ನಾಟಕ ಸಭಾ ಸಂಸ್ಥೆ ಹಾಗೂ ಮಂಗಳೂರಿನ ಹೆಸರಾಂತ ಡಾನ್ ಬಾಸ್ಕೋ ಸಭಾಂಗಣದ ದೀರ್ಘಕಾಲದ ವ್ಯವಸ್ಥಾಪಕ ಬೋನಿಫಾಸ್ ಪಿಂಟೋ (62) ಅಲ್ಪಾವಧಿಯ ಆರೋಗ್ಯ ಸಮಸ್ಯೆಯಿಂದ ಇಂದು ಮಧ್ಯಾಹ್ನ ಕೊನೆಯುಸಿರೆಳೆದರು.



ಬೋನಿಫಾಸ್ ಪಿಂಟೋ ಅವರು ತಮ್ಮ ವೃತ್ತಿಜೀವನದ ಅವಧಿಯಲ್ಲಿ 28 ವರ್ಷಗಳ ಕಾಲ ಕೆಎನ್‌ಎಸ್‌ಗೆ ವ್ಯವಸ್ಥಾಪಕರಾಗಿ ಸೇವೆ ಸಲ್ಲಿಸಿದ್ದಾರೆ.

ಅವರು ತಮ್ಮ ಸಂಘಟನಾ ಚಾತುರ್ಯತೆ, ಸಮಯಪ್ರಜ್ಞೆ ಮತ್ತು ಸರಳ ಸ್ವಭಾವದಿಂದಾಗಿ ಜನರ ಮನ್ನಣೆ ಗಳಿಸಿದ್ದರು. ಸ್ಪರ್ಧೆಗಳ ಆಯೋಜನೆ, ರಂಗಭೂಮಿ ವಿನ್ಯಾಸ ಮತ್ತು ರಂಗಭೂಮಿಯ ವಸ್ತ್ರವಿನ್ಯಾಸ ಹಾಗೂ ನಿರ್ವಹಣೆಯಲ್ಲಿ ವಿಶೇಷ ಪರಿಣಿತಿ ಹೊಂದಿದವರಾಗಿ ದ್ದರು. ಮೃತರು ರೀಟಾ ಪಿಂಟೋ ಮತ್ತು ದಿವಂಗತ ಸಿಪ್ರಿಯನ್ ಪಿಂಟೋ ಅವರು ಪುತ್ರರಾಗಿದ್ದು, ಜಿನ್ನಾ, ಲೋನಾ, ಡಯಾನಾ, ಆಶಾ ಅವರ ಸಹೋದರಿಯರನ್ನು ಅಗಲಿದ್ದಾರೆ.

ಇನ್ನು ಬೋನಿಫೇಸ್ ಪಿಂಟೋ ಅವರ ಪಾರ್ಥಿವ ಶರೀರವನ್ನು ನ.11ರಂದು ಡಾನ್ ಬಾಸ್ಕೋ ಹಾಲ್‌ನಲ್ಲಿ ಮಧ್ಯಾಹ್ನ 2.15ಕ್ಕೆ ಮತ್ತು ಜೆಪ್ಪು ಚರ್ಚ್‌ನಲ್ಲಿ 3.30ಕ್ಕೆ ಸಾರ್ವಜನಿಕ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಬಳಿಕ ಸಂಜೆ 4 ಗಂಟೆಗೆ ಅಂತ್ಯಕ್ರಿಯೆ ನಡೆಯಲಿದೆ.

# ಉಪಚುನಾವಣೆ: ನಾಯಕತ್ವ ಮೇಲೆ ಪ್ರಭಾವ ಬೀರದು: ಲಕ್ಷ್ಮಿ ಹೆಬ್ಬಾಳ್ಕರ್

**ಬೆಂಗಳೂರು, ನ.10–** ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಫಲಿತಾಂಶ ರಾಜ್ಯ ನಾಯಕತ್ವ ಮೇಲೆ ಯಾವುದೇ ಪರಿಣಾಮ ಬೀರದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ.



ಮಾಧ್ಯಮದವರೊಂದಿಗೆ, ರಾಜ್ಯ ಸರ್ಕಾರ ಸುಭದ್ರವಾಗಿದೆ. ಸರ್ಕಾರವನ್ನು ಅಸ್ಥಿರಗೊಳಿಸಲು ಪ್ರತಿಪಕ್ಷ ನಾಯಕರಿಂದ ಸಾಧ್ಯವಿಲ್ಲ. ಉಪಚುನಾವಣೆಯ ಮೂರು ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿಗಳು ಗೆಲುವು ದಾಖಲಿಸಲಿದ್ದಾರೆ. ಗ್ಯಾರಂಟಿ ಯೋಜನೆಗಳು ಅಭ್ಯರ್ಥಿಗಳ ಗೆಲುವಿಗೆ ಸಹಾಯ ಮಾಡಲಿವೆ ಎಂದು ಹೇಳಿದ್ದಾರೆ.

ಕೋವಿಡ್ ಅವಧಿಯಲ್ಲಿ ನಡೆದಿರುವ ಭಾರೀ ಭ್ರಷ್ಟಾಚಾರ ಜನರಿಗೆ ಗೊತ್ತಾಗಿದೆ. ಹಗರಣಕ್ಕೆ ಸಂಬಂಧಿಸಿ ಸರ್ಕಾರ ಈಗಾಗಲೇ ದಾಖಲೆ ಬಿಡುಗಡೆ ಮಾಡಿದೆ. ಭ್ರಷ್ಟಾಚಾರ ನಡೆದಿರುವ ಕುರಿತು ಮೈಕೆಲ್ ಡಿ'ಕುನ್ಹಾ ಆಯೋಗ ಕೂಡ ವರದಿ ನೀಡಿದೆ ಎಂದು ತಿಳಿಸಿದ್ದಾರೆ.ಕೋವಿಡ್ ನಿರ್ವಹಣೆಯಲ್ಲಿ10 ಸಾವಿರ ಕೋಟಿ ಹಗರಣ ನಡೆದಿರುವುದಾಗಿ ಸ್ವತಃ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರೇ ಹೇಳಿದ್ದಾರೆ.

ಈ ಕುರಿತು ಸರ್ಕಾರ ನಡೆಸುತ್ತಿರುವ ತನಿಖೆ ಮುಂದುವರಿದ ಭಾಗವಷ್ಟೇ ಎಂದು ಹೇಳಿದ್ದಾರೆ.ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಿಗೆ ರಾಜ್ಯದ ಮಹಿಳೆಯರು ಹೋದ ಕಡೆಯಲ್ಲೆಲ್ಲಾ ಧನ್ಯತಾ ಭಾವ ತೋರುತ್ತಿದ್ದಾರೆ.

ಗೃಹಲಕ್ಷ್ಮೀ ಯೋಜನೆಯಡಿ 1 ಕೋಟಿ 28 ಲಕ್ಷ ಜನ ಫಲಾನುಭವಿಗಳಿದ್ದು, ಎಲ್ಲರಿಗೂ ಸಮರ್ಪಕ ಹಣ ತಲುಪುತ್ತಿದೆ. ಆದರೆ, 82 ಸಾವಿರ ಮಹಿಳೆಯರಿಗೆ ಕೆಲ ಕಾರಣಗಳಿಂದ ಹಣ ತಲುಪಿಲ್ಲ. ಅದರಲ್ಲಿ ನಮ್ಮ ತಪ್ಪಿಲ್ಲ. ಮಾನದಂಡಗಳಿಗೆ ಒಳಪಡದವರಿಗೆ ಹಣ ನೀಡಲು ಸಾಧ್ಯವಿಲ್ಲ ಎಂದು ಹಿಂಬರಹ ಸಹ ನೀಡಿದ್ದೇವೆ ಎಂದು ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

# 3 ತಿಂಗಳ ಕಾಲಮಿತಿಯಲ್ಲಿ ಯಾವುದೇ ಹುದ್ದೆಗೆ ನೇಮಕಾತಿ ಪ್ರಕ್ರಿಯೆ ನಡೆಸದಿರಲು ಮಾದಾರ ಚನ್ನಯ್ಯ ಸ್ವಾಮೀಜಿ ಆಗ್ರಹ

**ದಾವಣಗೆರೆ, ಟಿ.10–** ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ಜಾರಿಗೊಳಿಸುವ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಕೂಡಲೇ ಆಯೋಗ ರಚಿಸಿ ಮೂರು ತಿಂಗಳ ಕಾಲಮಿತಿಯಲ್ಲಿ ನಿರ್ಧಾರ ಕೈಗೊಳ್ಳಬೇಕು. ಅಲ್ಲಿಯವರೆಗೆ ಸರ್ಕಾರದ ಯಾವುದೇ ಹುದ್ದೆಗೆ ನೇಮಕಾತಿ ಪ್ರಕ್ರಿಯೆ ನಡೆಸಬಾರದು.



ಪ್ರಕಟಿಸಿದ ಅಧಿಸೂಚನೆ ಕೂಡ ಹಿಂಪಡೆಯಬೇಕು ಎಂದು ಮಾದಿಗ ಸಮುದಾಯದ ಮಠಾಧೀಶರು ಒತ್ತಾಯಿಸಿದ್ದಾರೆ. ಒಳಮೀಸಲಾತಿಗೆ ಮೂರು ದಶಕಗಳಿಂದ ನಡೆಯುತ್ತಿರುವ ಹೋರಾಟ ನಿರ್ಣಾಯಕ ಹಂತ ತಲುಪಿದೆ. ಇಷ್ಟವಿಲ್ಲದಿದ್ದರೂ ಮತ್ತೊಂದು ಆಯೋಗ ರಚಿಸುವ ಸರ್ಕಾರದ ನಿರ್ಧಾರವನ್ನು ಸಮುದಾಯ ಒಪ್ಪಿಕೊಂಡಿದೆ. ಇತ್ತ ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್ಸಿ) ಆರೋಗ್ಯ ಇಲಾಖೆ ಸೇರಿ ಸರ್ಕಾರದ ಹಲವು ಹುದ್ದೆಗಳ ನೇಮಕಾತಿಗೆ ಪ್ರಕ್ರಿಯೆ ಆರಂಭಿಸಿದೆ. ಈ ನೇಮಕಾತಿ ಪ್ರಕ್ರಿಯೆ ಕೂಡಲೇ ಸ್ಥಗಿತಗೊಳ್ಳಬೇಕು ಎಂದು ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಭಾನುವಾರ ಪತ್ರಿಕಾಗೋಷ್ಠಿಯಲ್ಲಿ ಆಗ್ರಹಿಸಿದರು.

ದತ್ತಾಂಶ ಸಂಗ್ರಹಿಸುವ ನೆಪದಲ್ಲಿ ಆಯೋಗ ರಚಿಸಿ ಕಾಲಾಹರಣ ಮಾಡಬಾರದು ಎಂಬ ಕೋರಿಕೆ ಸಮುದಾಯದ್ದಾಗಿತ್ತು. ಆದರೆ, ರಾಜ್ಯ ಸರ್ಕಾರ ಆಯೋಗ ರಚಿಸಲು ಈಗಾಗಲೇ ತೀರ್ಮಾನಿಸಿದೆ. ವರದಿ ಸಿದ್ಧಪಡಿಸಲು ಮೂರು ತಿಂಗಳ ಗಡುವು ನೀಡುವುದಾಗಿ ಮುಖ್ಯಮಂತ್ರಿ ಮಾಹಿತಿ ನೀಡಿದ್ದಾರೆ. ಕೂಡಲೇ ಆಯೋಗ ರಚಿಸಿ ವಿಳಂಬ ಮಾಡದೇ ವರದಿ ಪಡೆದು ತೀರ್ಮಾನ ಕೈಗೊಳ್ಳಬೇಕು' ಎಂದರು.'ಬಡತನ, ಹಸಿವು, ದೌರ್ಜನ್ಯವನ್ನು ಅನುಭವಿಸುತ್ತಿರುವ ಮಾದಿಗ ಸಮುದಾಯ ನಿರಂತರವಾಗಿ ಶೋಷಣೆ ಅನುಭವಿಸಿದೆ. ರಾಜಕೀಯ, ಆರ್ಥಿಕ, ಶೈಕ್ಷಣಿಕ, ಔದ್ಯೋಗಿಕ ಕ್ಷೇತ್ರದಲ್ಲಿ ಸಮುದಾಯಕ್ಕೆ ಅನ್ಯಾಯವಾಗಿದೆ. ವಂಚನೆಗೆ ಒಳಗಾದ ಮಾದಿಗ ಸಮುದಾಯಕ್ಕೆ ಸರಿಯಾದ ಪಾಲು ಸಿಕ್ಕಾಗ ಸಶಕ್ತಗೊಳ್ಳಲು ಸಾಧ್ಯವಾಗಲಿದೆ. ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು, ಶಿಕ್ಷಣ ಪಡೆಯಲು ಒಳಮೀಸಲು ಅತ್ಯಗತ್ಯವಾಗಿದೆ ಎಂದು ಆದಿಜಾಂಬವ ಮಠದ ಷಡಕ್ಷರಮುನಿ ಸ್ವಾಮೀಜಿ ಅಭಿಪ್ರಾಯಪಟ್ಟರು. ರಾಜ್ಯ ಪೌರಕಾರ್ಮಿಕರ ಸಂಘದ ಅಧ್ಯಕ್ಷ ಎಲ್.ಎಂ.ಹನುಮಂತಪ್ಪ, ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ರವಿ ನಾರಾಯಣ, ಸಮುದಾಯದ ಮುಖಂಡರಾದ ಬಿ.ಎಂ.ರಾಮಸ್ವಾಮಿ, ನಿರಂಜನಮೂರ್ತಿ, ರಾಜಣ್ಣ, ಎಸ್. ಮಲ್ಲಿಕಾರ್ಜುನ್ ಹಾಜರಿದ್ದರು.

# 15 ದಿನಗಳಲ್ಲಿ ಹೊಸ ತಿರುವು ಪಡೆಯಲಿರುವ ಸರ್ಕಾರ: ವಿಜಯೇಂದ್ರ ವಿರುದ್ಧ ಪ್ರಿಯಾಂಕ್ ಖರ್ಗೆ ವಾಗ್ದಾಳಿ

**ಬೆಂಗಳೂರು, ನ.10–** 15 ದಿನದಲ್ಲಿ ಸಿಎಂ ರಾಜೀನಾಮೆ ಕೊಡಬೇಕು ಎಂದು ವಿಜಯೇಂದ್ರ ಹೇಳುತ್ತಾರೆ. 15 ದಿನದಲ್ಲಿ ಏನೇನು ತಿರುವು ಪಡೆಯುತ್ತೆ ಗೊತ್ತಾಗುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ನಿನ್ನೆ ಮಾಧ್ಯಮಗಳಲ್ಲಿ ನಿವೃತ್ತ ನ್ಯಾಯಮೂರ್ತಿ ಮೈಕಲ್ ಡಿ.ಕುನ್ಹಾ ವರದಿಯ ಕೆಲವು ಅಂಶಗಳನ್ನು ಪ್ರಕಟಣೆ ಮಾಡಿದ್ದಾರೆ. ಅಂದಿನ ಬಿಜೆಪಿ ಸರ್ಕಾರ ಕೊರೊನಾ ನಿರ್ವಹಣೆ ಮಾಡೋದನ್ನು ಬಿಟ್ಟು, ಜನರ ಜೀವನ ಉಳಿಸೋದನ್ನು ಬಿಟ್ಟು ಹಣ ಮಾಡಿದೆ. ಈಗ ಗೊತ್ತಾಗಿದೆ ತಾಲಿ ಬಜಾವೋ, ದೀಪ್ ಜಲಾವ್ ಇವೆಲ್ಲಾ ಮಾಡ್ತಿದ್ದು ಭ್ರಷ್ಟಾಚಾರ, ಹತ್ಯಾಕಾಂಡ ಮುಚ್ಚಿಹಾಕೋದಕ್ಕೆ. ಸರ್ಕಾರವನ್ನು ಜನ ನಂಬಿದ್ರು. ಸರ್ಕಾರ ಏನು ಹೇಳ್ತಿದ್ರು ಎಲ್ಲಾ ಮಾಡ್ತಿದ್ರು ಜನ. ಔಷಧ, ವ್ಯಾಕ್ಸಿನ್, ಬೆಡ್ ಹಂಚಿಕೆ, ಮಾಸ್ಕ್ ವಿತರಣೆ, ಪಿಪಿಇ ಕಿಟ್ ಖರೀದಿಯನ್ನು ಸರ್ಕಾರ ಮಾಡ್ತು. ಇದೆಲ್ಲಾ ಮಾಡಿಸುತ್ತಿದ್ದದ್ದು ತನಿಖೆಯಲ್ಲಿ ಗೊತ್ತಾಗ್ತಿದೆ ಎಂದು ಹೇಳಿದರು.

"ಬಿಜೆಪಿಯವರು ಹೆಣದ ಮೇಲೆ ಹಣ ಮಾಡ್ತಿದ್ದಾರೆ ಎಂದು ರಿಪೋರ್ಟ್‌ನಲ್ಲಿ ಗೊತ್ತಾಗಿದೆ. ಪ್ರಧಾನಿಯವರು ರೂ/700 ಕೋಟಿ ಹಗರಣ ಆಗಿದೆ ಅಂತ ಆರೋಪ ಮಾಡ್ತಿದ್ದಾರೆ. ನಮ್ಮ ತೆರಿಗೆ ಬೇಕು. ಸಂಪನ್ಮೂಲ ಬೇಕು. ಮತ್ತೆ ಅವಮಾನ ಮಾಡ್ತಿರಾ. ಅವರ ಸರ್ಕಾರ ಇದ್ದಾಗ ಏನಾಯ್ತು. ಇದಕ್ಕೆ ಅವರು ಉತ್ತರ ಕೊಡಬೇಕು. ಡಿಮಾನಿಟೈಸೇಷನ್ ಸಮಯದಲ್ಲಿ ಬಾಡಿಗೆ ಭಾಷಣಕಾರರು ಹೇಳಿದ್ದು ಗೊತ್ತಿದ್ಯಾ. ಕೋವಿಡ್ ವೇಳೆ ಡಿಹೆಚ್ ಬಿ ಗ್ಲೋಬಲ್ ಹಾಂಕಾಂಗ್ ಕಂಪನಿಗೆ ಒಂದು ಲಕ್ಷ ಪಿಪಿ ಇ ಕಿಟ್ ಕೊಡಿ ಎಂದು ಅಂದಿನ ಸಿಎಂ ಯಡಿಯೂರಪ್ಪ ಆದೇಶ ಮಾಡಿದ್ದಾರೆ" ಎಂದು ದೂರಿದರು.

"ಖರೀದಿಯಾದ 7 ದಿನದ ಒಳಗೆ ಡಿಲಿವರಿ ಕೊಡಬೇಕು. ಇಲ್ಲವಾದ್ರೆ ಪೆನಾಲ್ಟಿ ಹಾಕುತ್ತೇವೆ ಎಂಬ ಷರತ್ತಿಗೆ ಅವರು ಒಪ್ಪಿದ್ದಾರೆ. 10.04.2020 ರಂದು ಮತ್ತೆ ಡಿ ಹೆಚ್ ಬಿ ಗ್ಲೋಬಲ್‌ನಲ್ಲಿ ಒಂದು ಲಕ್ಷ ಪಿಪಿಇ ಕಿಟ್ ಆರ್ಡರ್ ಮಾಡ್ತಾರೆ. 2104.53 ರೂ. ಒಂದು ಕಿಟ್‌ಗೆ ವೆಚ್ಚವಾಗುತ್ತೆ. 10.04.2020ರಲ್ಲೇ ಅವತ್ತಿನ ದಿನ ಬಿಗ್ ಫಾರ್ಮಸೆಟಿಕಲ್ಗೂ ಕಿಟ್ ಬೇಕು ಅಂತ ಆರ್ಡರ್ ಮಾಡುತ್ತಾರೆ. ಇದಕ್ಕೆ ತಲಾ 2049.54 ರೂ. ಪಿಪಿಇ ಕಿಟ್ಗೆ ಫಿಕ್ಸ್ ಮಾಡ್ತಾರೆ. ಅದೇ ದಿನ ಡೆಲಿವರಿ ಕಂಡಿಷನ್ನ್ಗೆ ಆರ್ಡರ್ ಕೊಡ್ತಾರೆ. ಯಡಿಯೂರಪ್ಪ ಮೂರು ಲಕ್ಷ ಪಿಪಿಇ ಕಿಟ್‌ಗೆ 62.57 ಕೋಟಿ ರೂ. ದರ ನಿಗದಿ ಮಾಡ್ತಾರೆ. ಖರೀದಿ ಆದ ತಕ್ಷಣ ಬೇರೆ ಬೇರೆ ಹಣ ನಿಗದಿ ಮಾಡಿದ್ದರು" ಎಂದು ಆರೋಪಿಸಿದರು.

ನಿಮ್ಮ ಘನತೆಗೆ ತಕ್ಕಂತೆ ಮಾತನಾಡಿ: "ಕಾಂಗ್ರೆಸ್‌ನಲ್ಲಿ ಕೆಪಿಸಿಸಿಯಲ್ಲಿ ಡಿಸಿಎಂ, ಸಿಎಂ ನಡುವೆ ಏನು ನಡೆಯುತ್ತೆ ಅಂತಾ ಪ್ರಧಾನಿಗೆ ಗೊತ್ತಾಗುತ್ತೆ. ಆರೋಪ ಮಾಡಿದ್ದಾರಲ್ಲ ತೋರಿಸಿ ಎಂದು ಚಾಲೆಂಜ್ ಮಾಡುತ್ತೇನೆ. ನಿಮ್ಮ ಘನತೆಗೆ ತಕ್ಕಂತೆ ಮಾತನಾಡಿ. ಸುಳ್ಳಿನ ಕಾರ್ಖಾನೆ ಮಾಲೀಕರಲ್ಲ ನಾವು. ವರದಿಯನ್ನು ನಾನು ಅಧ್ಯಯನ ಮಾಡಿದ್ದೇನೆ. ಯಾವ ರೀತಿ ಯಡಿಯೂರಪ್ಪ, ಶ್ರೀರಾಮುಲು ಹೆಣದ ಮೇಲೆ ಹಣ ಮಾಡಿದ್ರು ಅಂತ ಸಾಕ್ಷಿಯಿದೆ. ಚೀನಾ ಹಾಂಕಾಂಗ್ ಕಂಪನಿಯ ಬಿಗ್ ಫಾರ್ಮಸಿ ಹೇಳಿದ ಹಾಗೆ ಹಣ ಫಿಕ್ಸ್ ಮಾಡಿದ್ದರು" ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.



ಜಯದೇವ ಬೇರೆ ಬೇರೆ ಇಲಾಖೆಯಿಂದ ಎಷ್ಟು ಪಿಪಿಇ ಕಿಟ್ ತಗೊಂಡಿದ್ದಾರೆ ಅನ್ನೋದು ಇನ್ನೂ ಹೊರಬಂದಿಲ್ಲ. ಚೈನಾದಿಂದ ಏನೂ ತರಬಾರದು ಅಂತ ಪ್ರಧಾನಿ ಹೇಳ್ತಾರೆ. ಕೇಂದ್ರ ಸರ್ಕಾರ ನೀತಿ ಉಲ್ಲಂಘಿಸಿ ಚೈನಾದಿಂದ ತಂದಿದ್ದು ದೇಶದ್ರೋಹ ಅಲ್ವಾ ಎಂದು ಪ್ರಶ್ನಿಸಿದರು.

**ಬಿಜೆಪಿ ಸರ್ಕಾರ ಡೆತ್ ರಿಪೋರ್ಟ್‌ನ್ನು ಮುಚ್ಚಿಟ್ಟಿದೆ:** "ನಾವೇನಾದ್ರು ತರಿಸಿದ್ರೆ ಏನು ಅಂತಿದ್ರಿ. ಇಲ್ಲೇ ಸಿಗುವಾಗ ಚೈನಾದಿಂದ ತರುವ ಅವಶ್ಯಕತೆ ಏನಿತ್ತು. ಬಿಜೆಪಿಯವರ ನಿರ್ಲಕ್ಷ್ಯದಿಂದ ಜನ ಸತ್ತಿರೋದು. ಕೊರೊನಾದಿಂದಲ್ಲ. ಅಂದಿನ ಬಿಜೆಪಿ ಸರ್ಕಾರ ಡೆತ್ ರಿಪೋರ್ಟ್ನ್ನು ಮುಚ್ಚಿಟ್ಟಿದೆ. 1.23 ಲಕ್ಷ ಜನ ತೀರಿ ಹೋಗಿದ್ದವರ ವರದಿಯನ್ನು ಸಲ್ಲಿಸಿಲ್ಲ. ರಾಜ್ಯ ಸರ್ಕಾರ ಮರಣ ಹೊಂದಿದ ಮಾಹಿತಿಯನ್ನು ತಪ್ಪಾಗಿ ಕೊಟ್ಟಿದೆ. ಯಾರದಪ್ಪ ಮಾಹಿತಿ ಇದು, ಮೋದಿ ಮಾಮಂದು ಅಲ್ವಾ. ಕರ್ನಾಟಕದಲ್ಲಿ ಹತ್ಯಾಕಾಂಡ ನಡೆದಿದೆ. ದುಡ್ಡಿನ ಆಸೆಯಿಂದ ಲಕ್ಷಾಂತರ ಜನ ಸತ್ತಿದ್ದಾರೆ. ಇದರ ಅಂಕಿ-ಅಂಶ ಕೇಂದ್ರ ಸರ್ಕಾರ ಕೊಟ್ಟಿದೆ. ಮೋದಿಯವರ ಮಾಹಿತಿ ಇದು. ಕಳಪೆ ಇಂಜೆಕ್ಷನ್, ಕಳಪೆ ಪಿಪಿಇ ಕಿಟ್ ಇದಕ್ಕೆ ಏನು ಹೇಳ್ತಿರಾ" ಎಂದು ಟೀಕಿಸಿದರು.

ಚೀನಾಕ್ಕೆ ಹೋಗುವ ಅವಶ್ಯಕತೆ ಏನಿತ್ತು "ವರದಿಯಲ್ಲಿ ಪ್ರೂವ್ ಆಗಿದ್ಯಲ್ಲಾ. ಯಡಿಯೂರಪ್ಪ ಅವರ ಮೇಲೆ ಏನು ಕ್ರಮ ತೆಗೆದುಕೊಳ್ತಿರಾ ಮೋದಿಯವರೇ. ಮೋದಿಯವರು ಮೇಕ್ ಇನ್ ಇಂಡಿಯಾ ಆಗಬೇಕು ಅಂತಾರೆ. ಆದ್ರೆ ಬಿಜೆಪಿಯವರು ಇದನ್ನು ಹಾಳು ಮಾಡ್ತಾರೆ. ದೇಶದಲ್ಲೆ ಲೋಕಲ್ ಮಾರ್ಕೆಟ್‌ನಲ್ಲಿ ಪಿಪಿಇ ಕಿಟ್ ಇದ್ರು ಯಡಿಯೂರಪ್ಪ ಅವರು ಏಕೆ ಚೀನಾದಿಂದ ತರಿಸಿದ್ರು. 18 ಲಕ್ಷ ಪಿಪಿಇ ಕಿಟ್ ಕರ್ನಾಟಕದಲ್ಲಿ ಸಿಗುತ್ತಿರುವಾಗ ಚೀನಾಕ್ಕೆ ಹೋಗುವ ಅವಶ್ಯಕತೆ ಏನಿತ್ತು. ಮನುಷ್ಯರಾ ನೀವು ನಾಚಿಕೆ ಆಗಬೇಕು ನಿಮಗೆ. ಸಂದಿಗ್ಧ ಸ್ಥಿತಿಯಲ್ಲಿ ದುಡ್ಡು ಬೇಕಿತ್ತಾ ನಿಮಗೆ" ಎಂದು ಪ್ರಶ್ನಿಸಿದರು.

ಜನರ ಬಲಿ ತಗೊಂಡಿರೋದಕ್ಕೆ ಉತ್ತರ ಕೊಡಬೇಕು : "ಕರ್ನಾಟಕದ ಬಗ್ಗೆ ಮೋದಿಯವರಿಗೆ ಗೌರವ ಇದ್ರೆ ರಾಜ್ಯಾಧ್ಯಕ್ಷರು ಅಪ್ಪಾಜಿನ ಕೂಡಲೇ ತೆಗೆಯಬೇಕು. ಮಹಾರಾಷ್ಟ್ರದಲ್ಲಿ ನಮಗೆ ಅವಮಾನ ಮಾಡ್ತಿರಾ. ಮಹಾರಾಷ್ಟ್ರ ಬಿಜೆಪಿ ಮೇಲೆ ಕಾನೂನು ಹೋರಾಟಕ್ಕೆ ಚರ್ಚೆ ಮಾಡುತ್ತಿದ್ದೇವೆ. ಸಿಎಂ, ಡಿಸಿಎಂ, ಖರ್ಗೆ ಕುಟುಂಬದಲ್ಲಿ ಏನಾಗ್ತಿದೆ ಗೊತ್ತಿದೆ ನಿಮಗೆ. ಇದು ಗೊತ್ತಾಗಲ್ವಾ. ಕೋವಿಡ್ ಅಕ್ರಮ ಬಗ್ಗೆ ಟ್ರೈಲರ್ ನಾವು ತೋರಿಸ್ತಿದ್ದೇವೆ. ಇದು ಹೇಗೆ ಹೊರಗೆ ಬಂತೋ ಗೊತ್ತಿಲ್ಲ. ಇದಕ್ಕೆ ಉತ್ತರ ಕೊಡಬೇಕು ಬಿಜೆಪಿಯವರು. ಜನರ ಬಲಿ ತಗೊಂಡಿರೋದಕ್ಕೆ ಉತ್ತರ ಕೊಡಬೇಕು. ಲಾಜಿಕಲ್ ಎಂಡ್ಗೆ ತಗೊಂಡು ಹೋಗುತ್ತೇವೆ" ಎಂದು ಖರ್ಗೆ ಹೇಳಿದರು.

ಕಾನೂನಾತ್ಮಕ ಹೋರಾಟ ಮಾಡುತ್ತೇವೆ ಅಷ್ಟೇ : ಮುಡಾ ಹಗರಣದಿಂದ ಆಚೆ ಬರೋದಕ್ಕೆ ಈ ರೀತಿ ಪ್ಲಾನ್ ಮಾಡ್ತಿದೆ ಎಂಬ ವಿಜಯೇಂದ್ರ ಆರೋಪದ ವಿಚಾರವಾಗಿ ಪ್ರತಿಕ್ರಿಯಿಸಿ, ಅದು ಪ್ರಕರಣ, ಹಗರಣ ಅಲ್ಲ. ಐಟಿ, ಇಡಿ, ಸಿಬಿಐ ತನಿಖೆ ಮಾಡ್ತಿದೆ. ನಿಮ್ಮ ಕೈಯಲ್ಲೇ ಇದ್ಯಲ್ಲಾ ಮಾಡ್ಲಿ. ಯಾರು ಬೇಡ ಅಂದಿದ್ದು. ಬರೀ ನೋಟಿಸ್ ಕೊಡಿಸೋದೆ ಮಾಡ್ತಿದ್ದಾರಲ್ಲ. ಅಂಕಿ-ಅಂಶಗಳ ಬಗ್ಗೆ ಮಾತಾಡಿದ್ದಾರಾ. ಉಡಾಫೆ ಉತ್ತರ ಕೊಡಬೇಡಿ. ಹೆದರಿಕೆ, ಬೆದರಿಕೆ ಹಾಕುವುದಿಲ್ಲ. ಕಾನೂನಾತ್ಮಕ ಹೋರಾಟ ಮಾಡುತ್ತೇವೆ ಅಷ್ಟೇ. ಯಡಿಯೂರಪ್ಪ ಇರಬಹುದು, ಬೊಮ್ಮಾಯಿ ಇರಬಹುದು. ಪ್ರಿಯಾಂಕ್ ಖರ್ಗೆ, ಡಿಸಿಎಂ, ಸಿಎಂಗೆ ಉತ್ತರ ಕೊಡಬೇಕಿಲ್ಲ. ಜನರಿಗೆ ಕೊಡಿ ಎಂದು ಒತ್ತಾಯಿಸಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

### ಮಹಿಳೆಯರಿಗೆ ಮೂರು ಸಾವಿರ, ನಿರುದ್ಯೋಗಿಗಳಿಗೆ ನಾಲ್ಕು ಸಾವಿರ

# ಜಾತಿಗಣತಿಯ ಭರವಸೆ ನೀಡಿದ ಮಹಾ ವಿಕಾಸ್ ಅಘಾಡಿ



**ಮುಂಬೈ, ನ. 10 :** ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಅಧಿಕಾರಕ್ಕೆ ಬಂದರೆ ರಾಜ್ಯದಲ್ಲಿ ಜಾತಿ ಗಣತಿ ನಡೆಸುವುದಾಗಿ ಮಹಾರಾಷ್ಟ್ರದ ವಿರೋಧ ಪಕ್ಷವಾದ ಮಹಾ ವಿಕಾಸ್ ಅಘಾಡಿ ಭರವಸೆ ನೀಡಿದೆ. ಮೈತ್ರಿಕೂಟದ ಚುನಾವಣಾ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ರಾಜ್ಯದಲ್ಲಿ ಪ್ರಸ್ತುತ ಇರುವ ಶೇಕಡಾ 50 ರಷ್ಟು ಮೀಸಲಾತಿ ಮಿತಿಯನ್ನು ಹೆಚ್ಚಿಸುವುದಾಗಿ ಘೋಷಿಸಿದರು.

ನಾವು ಮಹಾರಾಷ್ಟ್ರದಲ್ಲಿ ಜಾತಿ ಗಣತಿಯನ್ನು ನಡೆಸುತ್ತೇವೆ ಮತ್ತು ತಮಿಳುನಾಡಿನಂತೆ ಶೇಕಡಾ 50 ರಷ್ಟು ಮೀಸಲಾತಿಯ ಮಿತಿಯನ್ನು ಹೆಚ್ಚಿಸುತ್ತೇವೆ. ಜಾತಿ ಜನಗಣತಿಯು ಜನರನ್ನು ವಿಭಜಿಸಲು ಉದ್ದೇಶಿಸಿಲ್ಲ, ಆದರೆ ವಿವಿಧ ಸಮುದಾಯಗಳು ಹೇಗೆ ಸ್ಥಾನ ಪಡೆದಿವೆ ಎಂಬುದನ್ನು ಅರ್ಥಮಾಡಿಕೊಳ್ಳಲು ಅವರು ಹೆಚ್ಚಿನ ಪ್ರಯೋಜನಗಳನ್ನು ನೀಡಲು ಮಾಡಲಾಗುತ್ತದೆ ಎಂದು ಅವರು ಹೇಳಿದರು.

ಒಕ್ಕೂಟವು ಕೃಷಿ, ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ ಮತ್ತು ಆರೋಗ್ಯದಂತಹ ಕ್ಷೇತ್ರಗಳಲ್ಲಿ ಐದು ಖಾತರಿಗಳನ್ನು ಒದಗಿಸುತ್ತದೆ. ಮಹಾರಾಷ್ಟ್ರದ ಪ್ರಗತಿ ಮತ್ತು ಅಭಿವೃದ್ಧಿಗೆ ನಾವು ಐದು ಆಧಾರ ಸ್ತಂಭಗಳನ್ನು ಹೊಂದಿದ್ದೇವೆ. ನಮ್ಮ ಐದು ಭರವಸೆಗಳು ಕುಟುಂಬಗಳ ಉನ್ನತಿಗೆ ಸಹಾಯ ಮಾಡುತ್ತವೆ ಮತ್ತು ಪ್ರತಿ ಕುಟುಂಬವು ಒಂದು ವರ್ಷದಲ್ಲಿ ಸುಮಾರು 3.5 ಲಕ್ಷ ರೂಪಾಯಿಗಳ ಪರಿಹಾರವನ್ನು ಪಡೆಯುತ್ತದೆ ಎಂದು ಖರ್ಗೆ ವಿವರಿಸಿದರು.

ಚುನಾವಣಾ ಪ್ರಣಾಳಿಕೆಯಲ್ಲಿನ ಪ್ರಮುಖ ಭರವಸೆಗಳಲ್ಲಿ ಮಹಿಳೆಯರಿಗೆ ಪ್ರತಿ ತಿಂಗಳು 3,000 ರೂ.ಗಳನ್ನು ಒದಗಿಸುವ ಮಹಾಲಕ್ಷ್ಮಿ ಯೋಜನೆ ಸೇರಿವೆ. ಪ್ರಸ್ತುತ ಲಡ್ಕಿ ಬೆಹ್ನಾ ಯೋಜನೆಗೆ ಪ್ರತಿಬಿಂಬಿಸುತ್ತದೆ, ಇದು ರೂ 1,500 ನೀಡುತ್ತದೆ. ಒಮ್ಮೆ ಆಯ್ಕೆಯಾದ ನಂತರ ಅದನ್ನು 2,100 ರೂ.ಗೆ ಹೆಚ್ಚಿಸುವುದಾಗಿ ಮಹಾಯುತಿ ಭರವಸೆ ನೀಡಿತ್ತು. ಇದಕ್ಕೆ ಸ್ಪರ್ಧೆಯಾಗಿ ಮಹಾ ವಿಕಾಸ್ ಅಘಾಡಿ 3000 ಘೋಷಿಸಿದೆ.

ರಾಜಸ್ಥಾನದ ಅಶೋಕ್ ಗೆಹ್ಲೋಟ್ ಸರ್ಕಾರ ಘೋಷಿಸಿದಂತೆಯೇ 25 ಲಕ್ಷ ರೂಪಾಯಿಗಳ ಆರೋಗ್ಯ ವಿಮಾ ಯೋಜನೆಯನ್ನು ಮಹಾರಾಷ್ಟ್ರದಲ್ಲಿ ಜಾರಿಗೊಳಿಸಲಾಗುವುದು ಎಂದು ಖರ್ಗೆ ಹೇಳಿದರು. ಪ್ರಣಾಳಿಕೆಯಲ್ಲಿ ಉಚಿತ ಔಷಧ ನೀಡುವ ಭರವಸೆಯೂ ಸೇರಿದೆ. ಪ್ರಣಾಳಿಕೆಯಲ್ಲಿ 3 ಲಕ್ಷದವರೆಗಿನ ಕೃಷಿ ಸಾಲ ಮನ್ನಾವನ್ನು ಖಾತರಿಪಡಿಸುತ್ತದೆ. ಪದವೀಧರರು ಅಥವಾ ಡಿಪ್ಲೊಮಾ ಹೊಂದಿರುವ ನಿರುದ್ಯೋಗಿ ಯುವಕರಿಗೆ ತಿಂಗಳಿಗೆ 4,000 ರೂ ನೀಡುವ ಭರವಸೆ ನೀಡಿದೆ.



ಚನ್ನಪಟ್ಟಣ ಉಪಚುನಾವಣೆಯ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಜೆಡಿಎಸ್ ಮುಖಂಡ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಭಾನುವಾರ ಚನ್ನಪಟ್ಟಣದಲ್ಲಿ ಪ್ರಚಾರ ನಡೆಸಿದರು.

# ಮುಡಾ ಹಗರಣ : ಬಿಗ್ ಟ್ವಿಸ್ಟ್



**ಮೈಸೂರು, ನ. 10 :** ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ದೂರುದಾರ ಸ್ನೇಹಮಯಿ ಕೃಷ್ಣ ಅವರು ಇದೀಗ ಮತ್ತೊಂದು ಸಾಕ್ಷಿ ಕೊಟ್ಟಿದ್ದು, ಪ್ರಕರಣಕ್ಕೆ ಬಿಗ್ ಟ್ವಿಸ್ಟ್ ಸಿಕ್ಕಿದೆ. ಸಿಎಂ ಸಿದ್ದರಾಮಯ್ಯ ಪತ್ನಿ ವಿಚಾರದಲ್ಲಿ ತಹಶೀಲ್ದಾರ್ ಹಣ ಪಾವತಿಸಿದ್ದಾರೆ. ಮುದ್ರಾಂಕ ಶುಲ್ಕವನ್ನು ತಹಶೀಲ್ದಾರ್ ಅವರೇ ಪಾವತಿ ಮಾಡಿದ್ದಾರೆ ಎಂದು ಮತ್ತೊಂದು ಕ್ರಯಪತ್ರದ ಉದಾಹರಣೆ ನೀಡಿ ಆರೋಪಿಸಿದ್ದಾರೆ.

ಸ್ನೇಹಮಯಿ ಕೃಷ್ಣ ಅವರು ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಪೋಸ್ಟ್ ಮಾಡಿದ್ದು, ಮುಡಾ ಪ್ರಕರಣದಲ್ಲಿ ತಮ್ಮ ಪ್ರಭಾವ ಬೀರಿಲ್ಲ ಎಂದು ಹೇಳುವ ಸಿದ್ದರಾಮಯ್ಯನವರಿಗೆ, ನಿಮ್ಮ ಪ್ರಭಾವ ಬೀರಿದೆ ಎಂಬುದಕ್ಕೆ ಮತ್ತೊಂದು ಸಾಕ್ಷಿ ಕೊಡುತ್ತಿದ್ದೇನೆ, ಕ್ರಯಪತ್ರ ನೊಂದಣಿ ಮಾಡಿಸಿಕೊಳ್ಳುವವರು ನೊಂದಣಿಗೆ ಸಂಬಂಧಿಸಿದ ಶುಲ್ಕಗಳನ್ನು ಪಾವತಿ ಮಾಡಬೇಕು, ಅದೇ ರೀತಿ ಎನ್. ಮಂಜುನಾಥ್ ರವರು ಮುದ್ರಾಂಕ ಶುಲ್ಕ ಪಾವತಿ ಮಾಡಿದ್ದಾರೆ. ಆದರೆ ಸಿದ್ದರಾಮಯ್ಯನವರ ಪತ್ನಿ ಪಾರ್ವತಿರವರ ಕ್ರಯಪತ್ರ ಗಮನಿಸಿ, ಮುಡಾದ ವಿಶೇಷ ತಹಸೀಲ್ದಾರ್ ಮುದ್ರಾಂಕ ಶುಲ್ಕ ಪಾವತಿ ಮಾಡಿದ್ದಾರೆ ಎಂಬುದು ಖಚಿತವಾಗಿ ತಿಳಿದುಬರುತ್ತದೆ.

# ವಕ್ಫ್ ಬೋರ್ಡ್ ಆಧುನಿಕ ಭಸ್ಮಾಸುರ್ : ಸಿ.ಟಿ. ರವಿ



**ಚಿಕ್ಕಮಗಳೂರು, ನ. 10 :** ಆಧುನಿಕ ಭಸ್ಮಾಸುರನನ್ನ ನಾಶ ಮಾಡಲು ಇಡೀ ಹಿಂದೂ ಸಮಾಜವೇ ಒಂದಾಗಬೇಕು ಎಂದು ಸಿ.ಟಿ. ರವಿ ಹೇಳಿದ್ದಾರೆ. ಈ ಸಂಬಂಧ ಧರ್ಮ ಸಭೆಯಲ್ಲಿ ಮಾತನಾಡಿದ ಅವರು, ಆಧುನಿಕ ಭಸ್ಮಾಸುರನನ್ನ ನಾಶ ಮಾಡೋದಕ್ಕೆ ಒಬ್ಬ ಮೋಹಿನಿ ಸಾಲಲ್ಲ, ಇಡೀ ಹಿಂದೂ ಸಮಾಜವೇ ಒಂದಾಗಬೇಕು ಎಂದು ದತ್ತಮಾಲಾ ಧರ್ಮ ಸಭೆಯಲ್ಲಿ ವಕ್ಫ್ ವಿರುದ್ಧ ಸಿ.ಟಿ. ರವಿ ಕಿಡಿಕಾರಿದ್ದಾರೆ. ವಕ್ಫ್ ಬೋರ್ಡ್ ಅನ್ನೋದು ಆಧುನಿಕ ಭಸ್ಮಾಸುರ. ವೋಟಿನ ಆಸೆಗೆ ಅವರಿಗೆ ನಮ್ಮವರೇ ವರ ಕೊಟ್ಟರು. ಹಿಂದಿನ ಭಸ್ಮಾಸುರನಂತೆ ಇಂದಿನ ಭಸ್ಮಾಸುರ ಎಲ್ಲರ ತಲೆ ಮೇಲೆ ಕೈ ಇಡಲು ಬಂದಿದ್ದಾನೆ.

ಭಗವಂತ ಮತ್ತೊಮ್ಮೆ ಮೋಹಿನಿ ರೂಪದಲ್ಲಿ ಭಸ್ಮಾಸುರನನ್ನ ನಾಶ ಮಾಡಬೇಕಾದ ಅವಶ್ಯಕತೆ ಇದೆ. ಆ ಭಸ್ಮಾಸುರ ವರ ಕೊಟ್ಟ ಶಿವನನ್ನೇ ಅಟ್ಟಿಸಿಕೊಂಡು ಹೋದನಂತೆ. ಆಗ ವಿಷ್ಣು ಮೋಹಿನಿ ರೂಪ ತಾಳಿ ಭಸ್ಮಾಸುರನನ್ನ ನಾಶ ಮಾಡಿದ ಕಥೆ ಕೇಳಿದ್ದೇವೆ. ಆಧುನಿಕ ಭಸ್ಮಾಸುರನನ್ನ ನಾಶ ಮಾಡೋದಕ್ಕೆ ಒಬ್ಬ ಮೋಹಿನಿ ಸಾಲಲ್ಲ, ಇಡೀ ಹಿಂದೂ ಸಮಾಜವೇ ಒಂದಾಗಬೇಕು ಎಂದು ಹರಿಹಾಯ್ದರು.

ವಕ್ಫ್ ಬೋರ್ಡಿಗೆ ಪರಮಾಧಿಕಾರವಿದೆ, ದೇಶ-ಜಗತ್ತಿನ ಯಾವ ಆಸ್ತಿಯನ್ನಾದರೂ ನಮ್ಮದು ಅನ್ನಬಹುದು. ಒಮ್ಮೆ ಘೋಷಣೆ ಮಾಡಿಕೊಂಡರೆ ಅಲ್ಲಾಗೆ ಸೇರಿದ್ದು ಅಂತಾರೆ. ಬಲಿ ಚಕ್ರವರ್ತಿ ವಿಷ್ಣುವಿನ ಅವತಾರದ ವಾಮನನಿಗೆ ಆ ಕಾಲದಲ್ಲೇ ದಾನ ಕೊಟ್ಟಿದ್ದಾನೆ. ಮತ್ತೆ ದಾನ ಕೊಡಬೇಕು ಅಂದರೆ ವಿಷ್ಣುವಿನ ಅವತಾರದ ವಾಮನನೇ ಬಂದು ಕೊಡಬೇಕು. ಇಡೀ ಭೂಮಂಡಲವೇ ಮಹಾ ವಿಷ್ಣುಗೆ ಸೇರಿದ್ದು. ಮಹಾವಿಷ್ಣು ಎಲ್ಲಿವರೆಗೆ ಇನ್ನೊಬ್ಬರಿಗೆ ಭೂಮಿ ಕೊಡಲ್ವೋ ಅಲ್ಲಿವರೆಗೂ ಅದು ಸನಾತನ ಧರ್ಮೀಯರದ್ದು. ಸನಾತನ ಧರ್ಮದಿಂದ ದೂರ ಹೋದವರಿಗೆ ಭೂಮಿ ಮೇಲೆ ಬದುಕುವ ಹಕ್ಕಿದೆ ಅಷ್ಟೆ. ದಶಾವತಾರ, ದೇವನೊಬ್ಬ ನಾಮ ಹಲವು, ಬಹುದೇವತಾರಾಧನೆ ಬಗ್ಗೆ ನಂಬಿಕೆ ಇಟ್ಟಿದ್ದಾರೋ ಅವರಿಗೆ ಮಾತ್ರ ವಾರಸುದಾರಿಕೆ ಇದೆ ಎಂದು ಹೇಳಿದರು.



ಶಿಗ್ಗಾಂವಿ ಉಪಚುನಾವಣೆಯ ಬಿಜೆಪಿ ಅಭ್ಯರ್ಥಿ ಪರ ಮಾಜಿ ಸಿಎಂಗಳಾದ ಬಿಎಸ್ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಶಿಗ್ಗಾಂವಿಯಲ್ಲಿ ಭಾನುವಾರ ಭರತ್ ಬೊಮ್ಮಾಯಿ ಪ್ರಚಾರ ನಡೆಸಿದರು.

### 25 ಲಕ್ಷ ಜನರಿಗೆ ಉದ್ಯೋಗ, ಮಹಿಳೆಯರಿಗೆ 2100 ರೂ.

# ಮಹಾರಾಷ್ಟ್ರ ಚುನಾವಣೆ: ಬಿಜೆಪಿ ಪ್ರಣಾಳಿಕೆ



**ಮುಂಬೈ, ನ. 10 :** ವಿಧಾನಸಭೆ ಚುನಾವಣೆಯಲ್ಲಿ ಪಕ್ಷ ಅಧಿಕಾರಕ್ಕೆ ಬಂದರೆ ಕೃಷಿ ಸಾಲ ಮನ್ನಾ ಮಾಡಲಾಗುವುದು, 25 ಲಕ್ಷ ಜನರಿಗೆ ಉದ್ಯೋಗ ನೀಡಲಾಗುವುದು, ಲಡ್ಕಿ ಬೆಹ್ನಾ ಯೋಜನೆಯಡಿ ಮಹಿಳೆಯರಿಗೆ 2100 ಮತ್ತು ರೈತರ ಖಾತೆಗೆ ನೇರ ಹಣ ವರ್ಗಾವಣೆ ಮಾಡಲಾಗುವುದು ಎಂದು ಬಿಜೆಪಿ ಭರವಸೆ ನೀಡಿದೆ.

ವಿಧಾನಸಭೆ ಚುನಾವಣೆ ಹಿನ್ನಲೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ಪ್ರಣಾಳಿಕೆ ಬಿಡುಗಡೆ ಮಾಡಲಾಯಿತು. ಉಪಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್, ರಾಜ್ಯ ಬಿಜೆಪಿ ಮುಖ್ಯಸ್ಥ ಚಂದ್ರಶೇಖರ್ ಬವಾಂಕುಲೆ, ಮುಂಬೈ ಬಿಜೆಪಿ ಅಧ್ಯಕ್ಷ ಆಶಿಶ್ ಶೇಲಾರ್ ಮತ್ತು ಕೇಂದ್ರ ಸಚಿವ ಪಿಯೂಷ್ ಗೋಯಲ್ ಸೇರಿದಂತೆ ಪಕ್ಷದ ಹಿರಿಯ ನಾಯಕರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅಮಿತ್ ಶಾ, ಬಿಜೆಪಿಯ ಪ್ರಣಾಳಿಕೆಯು ಮಹಾರಾಷ್ಟ್ರದ ಜನತೆಯ ಆಕಾಂಕ್ಷೆಗಳ ನಿಜವಾದ ಪ್ರತಿಬಿಂಬವಾಗಿದೆ. ಮಹಾರಾಷ್ಟ್ರ ಯಾವಾಗಲೂ ಸ್ವತಂತ್ರ ಭಾರತಕ್ಕೆ ಮತ್ತು ಸಾಮಾಜಿಕ ಸುಧಾರಣೆಗೆ ದಾರಿ ಮಾಡಿಕೊಟ್ಟಿದೆ ಮತ್ತು ಈ ರಾಜ್ಯದ ಆಕಾಂಕ್ಷೆಗಳು ಪ್ರಣಾಳಿಕೆಯಲ್ಲಿ ಪ್ರತಿಫಲಿಸುತ್ತದೆ ಎಂದರು.

ಪ್ರಣಾಳಿಕೆಯು ಮಹಾರಾಷ್ಟ್ರದ ಜನರ ನಿಜವಾದ ಅಗತ್ಯಗಳು ಮತ್ತು ಆಕಾಂಕ್ಷೆಗಳನ್ನು ಪ್ರತಿಬಿಂಬಿಸುತ್ತದೆ. ಛತ್ರಪತಿ ಶಿವಾಜಿ ಮಹಾರಾಜರು ಕೂಡ ಇಲ್ಲಿಯೇ ತಮ್ಮ ಪ್ರಯಾಣವನ್ನು ಆರಂಭಿಸಿದರು. ಈ ಪ್ರಣಾಳಿಕೆಯು ಮಹಾರಾಷ್ಟ್ರದ ಚೈತನ್ಯವನ್ನು ಬಿಂಬಿಸುತ್ತದೆ. ರೈತರನ್ನು ಗೌರವಿಸುವ ಮತ್ತು ಹೆಮ್ಮೆಯ ಭಾವನೆಯನ್ನು ಬೆಳೆಸಲು ಮಹಿಳೆಯರಿಗೆ ಅಧಿಕಾರ ನೀಡುವುದರ ಮೇಲೆ ಕೇಂದ್ರೀಕರಿಸುತ್ತದೆ. ವಿವಿಧ ಉಪಕ್ರಮಗಳ ಮೂಲಕ ಸುರಕ್ಷಿತ ಮಹಾರಾಷ್ಟ್ರವನ್ನು ಖಾತ್ರಿಪಡಿಸುವ ಸರ್ಕಾರದ ಬದ್ಧತೆ ತೋರುತ್ತದೆ ಎಂದು ಅವರು ಹೇಳಿದರು.

ಬಿಜೆಪಿಯ ನಿಜವಾದ ಸ್ಪರ್ಧೆ ಮಹಾ ವಿಕಾಸ್ ಅಘಾಡಿ ಮೈತ್ರಿಯೊಂದಿಗೆ. ವೀರ್ ಸಾವರ್ಕರ್ ಬಗ್ಗೆ ಸಕಾರಾತ್ಮಕವಾಗಿ ಮಾತನಾಡಲು ರಾಹುಲ್ ಗಾಂಧಿಯನ್ನು ಮನವೊಲಿಸಲು ನಿಮ್ಮಗೆ ಸಾಧ್ಯವೇ? ಅಥವಾ ಬಾಳಾಸಾಹೇಬ್ ಠಾಕ್ರೆ ಬಗ್ಗೆ ಮೆಚ್ಚುಗೆಯ ಮಾತುಗಳನ್ನಾಡಲು ಕಾಂಗ್ರೆಸ್ ನಾಯಕರಿಂದ ಸಾಧ್ಯವೇ ಎಂದು ಉದ್ಧವ್‌ಠಾಕ್ರೆ ಅವರಿಗೆ ಅಮಿತ್ ಶಾ ಪ್ರಶ್ನಿಸಿದರು.

ಉಪಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್, ಅಭಿವೃದ್ಧಿ ಹೊಂದಿದ ಭಾರತದ ದೃಷ್ಟಿಯು ಮಹಾರಾಷ್ಟ್ರಕ್ಕೆ ನಮ್ಮ ಮಾರ್ಗಸೂಚಿಯಾಗಿದೆ. ನಾವು ಬಿಜೆಪಿಯ ಸಾಧನೆಗಳು ಮತ್ತು ಚಾಲ್ತಿಯಲ್ಲಿರುವ ಯೋಜನೆಗಳ ವರದಿ ಕಾರ್ಡ್ ಅನ್ನು ಸಿದ್ಧಪಡಿಸಿದ್ದೇವೆ ಮತ್ತು ಮಹಾರಾಷ್ಟ್ರದ ಜನರು ಬಿಜೆಪಿ ಮತ್ತು ಮಹಾಯುತಿ ಮೈತ್ರಿಯನ್ನು ನಂಬುತ್ತಾರೆ ಎಂಬ ವಿಶ್ವಾಸವಿದೆ. ನಾವು ಮಾಡಿದ 25 ಪ್ರಮುಖ ಭರವಸೆಗಳಲ್ಲಿ ಲಡ್ಕಿ ಬೆಹೆನ್ ಯೋಜನೆಗಳು ಮತ್ತು ಕೃಷಿ ಸಾಲ ಮನ್ನಾ ಸೇರಿವೆ ಎಂದರು.

ಭವಂತರ್ ಯೋಜನೆಯು ರೈತರಿಗೆ ಉತ್ತಮ ಬೆಲೆಯಲ್ಲಿ ಒಳಹರಿವು ಖರೀದಿಸಲು ಅಧಿಕಾರ ನೀಡುತ್ತದೆ ಮತ್ತು ಮಾದರಿ ನೀತಿ ಸಂಹಿತೆ ಕೊನೆಗೊಂಡ ನಂತರ ಹಣವನ್ನು ನೇರವಾಗಿ ರೈತರ ಖಾತೆಗಳಿಗೆ ವರ್ಗಾಯಿಸಲಾಗುತ್ತದೆ. ಹೆಚ್ಚುವರಿಯಾಗಿ, ಕೈಗೆಟುಕುವಿಕೆಯನ್ನು ಖಚಿತಪಡಿಸಿಕೊಳ್ಳಲು ಜೀವ ಉಳಿಸುವ ಔಷಧಿಗಳು ಮತ್ತು ವೈದ್ಯಕೀಯ ಸಾಧನಗಳ ಬೆಲೆಗಳನ್ನು ನಿಯಂತ್ರಿಸುತ್ತೇವೆ. ನಮ್ಮ ಉಪಕ್ರಮಗಳು 25 ಲಕ್ಷ ಜನರಿಗೆ ಉದ್ಯೋಗವನ್ನು ಸೃಷ್ಟಿಸುತ್ತವೆ ಎಂದು ಫಡ್ನವಿಸ್ ಹೇಳಿದರು.

### ಕಾಂಗ್ರೆಸ್ ನಾಯಕರು ಲೂಟಿ ಮಾಡಿಲ್ಲವೆಂದು ಯಾವ ನಾಲಿಗೆಯಿಂದ ಹೇಳುತ್ತಿದ್ದಾರೆ: ಅಶೋಕ ಪ್ರಶ್ನೆ

# ಚುನಾವಣೆಗೆ ಅಬಕಾರಿ ಹಣ ಬಳಕೆ: ಕಾಂಗ್ರೆಸ್ ವಿರುದ್ಧ ಟೀಕೆ



**ಚನ್ನಪಟ್ಟಣ, ನ.10 :** ಅಬಕಾರಿ ಇಲಾಖೆಯ ಹಗರಣದ ಬಗ್ಗೆ ದೂರು ಸಲ್ಲಿಕೆಯಾಗಿ ಜನರು ಈ ಬಗ್ಗೆ ಮಾತನಾಡುತ್ತಿದ್ದಾರೆ. ಆದರೂ ಲೂಟಿ ಮಾಡಿಲ್ಲವೆಂದು ಕಾಂಗ್ರೆಸ್ ನಾಯಕರು ಯಾವ ನಾಲಿಗೆಯಿಂದ ಹೇಳುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಪ್ರಶ್ನೆ ಮಾಡಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಬಕಾರಿ ಇಲಾಖೆಯ ಹಗರಣದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದು, ಅದು ಸುಳ್ಳು ಆರೋಪವೆಂದು ಕಾಂಗ್ರೆಸ್ ನಾಯಕರು ಹೇಳಿದ್ದಾರೆ. ಇದರ ವಿರುದ್ಧ ದೂರು ದಾಖಲಾಗುವುದರ ಜೊತೆಗೆ, ಮದ್ಯ ಮಾರಾಟಗಾರರ ಸಂಘದವರು ಕೂಡ ಇದನ್ನು ಹೇಳಿದ್ದಾರೆ.

ಮಾಧ್ಯಮಗಳಲ್ಲಿ ಕೂಡ ಇದು ವರದಿಯಾಗಿದೆ. ಜನರು ಕೂಡ ಈ ಬಗ್ಗೆ ಮಾತನಾಡುತ್ತಿದ್ದಾರೆ. ಇಷ್ಟಾದರೂ ನಾವು ಲೂಟಿ ಮಾಡಿಲ್ಲವೆಂದು ಕಾಂಗ್ರೆಸ್ ನಾಯಕರು ಯಾವ ನಾಲಿಗೆಯಿಂದ ಹೇಳುತ್ತಿದ್ದಾರೆ ಎಂದು ಪ್ರಶ್ನೆ ಮಾಡಿದರು. ಪ್ರಧಾನಿ ನರೇಂದ್ರ ಮೋದಿಯವರು ಹೇಳಿದಂತೆ ಮಹಾರಾಷ್ಟ್ರಕ್ಕೆ 700 ಕೋಟಿ ರೂ. ಹೋಗಿದೆ. 200 ಕೋಟಿ ರೂ. ರಾಜ್ಯದ ಉಪಚುನಾವಣೆಗೆ ಬಳಸಲಾಗುತ್ತಿದೆ. ಇದು ಸುಳ್ಳು ಎನ್ನುವುದಾದರೆ ದೂರು ನೀಡಿದವರ ವಿರುದ್ಧ ಕಾಂಗ್ರೆಸ್ ಸರ್ಕಾರ ದೂರು ದಾಖಲಿಸಲಿ. ಕಾಂಗ್ರೆಸ್ ಬಳಿ ಓಡಾಡುತ್ತಿರುವ ಹಣ ಅಬಕಾರಿ ಇಲಾಖೆಯಿಂದಲೇ ಬಂದಿದ್ದು, ರಾಜ್ಯ ಸರ್ಕಾರ ಚುನಾವಣೆಯ ಎಟಿಎಂ ಆಗಿದೆ ಎಂದು ದೂರಿದರು.

ಯಾರದೋ ದುಡ್ಡು ಯಲ್ಲಮ್ಮನ ಜಾತ್ರೆ ಎಂಬಂತೆ, ಸರ್ಕಾರಿ ಹಣದಲ್ಲಿ ಜಾಹೀರಾತು ನೀಡಲಾಗುತ್ತಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ರೂ. ಕೊಳ್ಳೆ ಹೊಡೆದಿರುವುದು ಸಾಬೀತಾಗಿದೆ. ಇದನ್ನು ಸ್ವತಃ ಸಿಎಂ ಒಪ್ಪಿಕೊಂಡಿದ್ದಾರೆ. ಶಾಲಾ ಮಕ್ಕಳಿಗೆ ಅಜೀಂ ಪ್ರೇಮ್ ಜಿ ಕಂಪನಿ ಮೊಟ್ಟೆ ಕೊಟ್ಟರೆ, ಅದನ್ನು ಸರ್ಕಾರ ಮಕ್ಕಳಿಗೆ ತಲುಪಿಸಿಲ್ಲ. ಈ ಸರ್ಕಾರದ ಯೋಗ್ಯತೆಯೇ ಇಷ್ಟು ಎಂದು ಆಕ್ರೋಶ ವ್ಯಕ್ತಪಡಿಸಿದರು.

**ಮುಖ್ಯಮಂತ್ರಿಯಿಂದ ಪ್ರಗತಿ ಪರಿಶೀಲನೆ:** ವಕ್ಫ್ ಬಳಿ 1.12 ಲಕ್ಷ ಎಕರೆ ಇದೆ ಎಂದು ಹೇಳಿದ್ದಾರೆ. ಇಷ್ಟು ಭೂಮಿ ಅವರ ಬಳಿ ಇದ್ದರೆ, ರಾಜ್ಯದಲ್ಲಿ ಯಾರಿಗೂ ಜಮೀನು ಇರುವುದಿಲ್ಲ. ಮುಸ್ಲಿಂ ಮುಖಂಡರೇ ವಕ್ಫ್ ಅನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ನಾಡಪ್ರಭು ಕೆಂಪೇಗೌಡರು ಅಕ್ಕಿಪೇಟೆ, ಬಳೆಪೇಟೆ ಮೊದಲಾದ ಪೇಟೆಗಳನ್ನು ನಿರ್ಮಿಸಿದ್ದರು. ಈ ಪೇಟೆಗಳು ಕೂಡ ತಮ್ಮದೇ ಎಂದು ವಕ್ಫ್ ಹೇಳುತ್ತಿದೆ. ಒಂದು ಕಡೆ ಸಿಎಂ ನೋಟಿಸ್ ಕೊಡಬೇಡಿ ಎನ್ನುತ್ತಾರೆ. ಇನ್ನೊಂದು ಕಡೆ ಭೂಮಿ ಕಬಳಿಕೆಗೆ ಪ್ರಗತಿ ಪರಿಶೀಲನಾ ಸಭೆ ಮಾಡುತ್ತಾರೆ ಎಂದು ಹೇಳಿದರು.

ರೈತರ ಪರ ಮಾತನಾಡಿದ್ದಕ್ಕೆ ಸಂಸದ ತೇಜಸ್ವಿ ಸೂರ್ಯ ವಿರುದ್ಧ ಸರ್ಕಾರ ಪ್ರಕರಣ ದಾಖಲಿಸಿದೆ. ಜೊತೆಗೆ ಕೋವಿಡ್ ಹಗರಣವೆಂದು ಸುಳ್ಳು ಆರೋಪ ಮಾಡಿ ವರದಿ ಸೃಷ್ಟಿಸಿ ಅದನ್ನು ಸೋರಿಕೆ ಮಾಡಲಾಗಿದೆ. ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಹಾಗೂ ಶ್ರೀರಾಮುಲು ವಿರುದ್ಧವೂ ಪ್ರಕರಣ ದಾಖಲಿಸಲು ಸಿದ್ಧತೆ ನಡೆಸಲಾಗಿದೆ. ಇನ್ನೂ ಪೂರ್ಣ ವರದಿ ಬಾರದೆ, ಚುನಾವಣೆಯ ಸಮಯದಲ್ಲಿ ಈ ಸುಳ್ಳು ಸೃಷ್ಟಿಸಲಾಗಿದೆ. ಕೆಂಪಣ್ಣ ಆಯೋಗ ರಚನೆಯಾಗಿ ಹತ್ತು ವರ್ಷ ಕಳೆದರೂ ಅರ್ಧ ವರದಿಯೂ ಬಂದಿಲ್ಲ. ಯಡಿಯೂರಪ್ಪ ಅವರನ್ನು ಅಪರಾಧಿ ಎಂದು ಬಿಂಬಿಸಲು ಹುನ್ನಾರ ಮಾಡಲಾಗಿದೆ. ಇವೆಲ್ಲ ದ್ವೇಷದ ರಾಜಕಾರಣ ಎಂದರು. ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ನಡೆಯುತ್ತಿಲ್ಲ. ಮೂರು, ನಾಲ್ಕು ತಿಂಗಳಿಗೆ ಒಮ್ಮೆ ಗ್ಯಾರಂಟಿ ಹಣ ಜನರಿಗೆ ದೊರೆಯುತ್ತಿದೆ. ಆದರೂ ಇಲ್ಲಿಗೆ ಬಂದು ನೋಡಿ ಎಂದು ಡಿ.ಕೆ.ಶಿವಕುಮಾರ್ ಹೇಳುತ್ತಾರೆ. ಮೊದಲು ಇಲ್ಲಿ ಯೋಜನೆಗಳನ್ನು ಸರಿಯಾಗಿ ಅನುಷ್ಠಾನ ಮಾಡಲಿ ಎಂದರು.

ನಿಖಿಲ್ ಕುಮಾರಸ್ವಾಮಿ ಅವರು ಪ್ರಧಾನಿ ನರೇಂದ್ರ ಮೋದಿಯವರ ಬೆಂಬಲದಿಂದ ಸ್ಪರ್ಧಿಸುತ್ತಿದ್ದಾರೆ. ಈಗಿನ ಸಮಯದಲ್ಲಿ ನಿಖಿಲ್ ಅವರೇ ಗೆಲ್ಲುವ ವಾತಾವರಣ ಸೃಷ್ಟಿಯಾಗಿದೆ ಎಂಬ ಮಾಹಿತಿ ಬಂದಿದೆ. ಅವರು ಗೆಲ್ಲುವುದು ಖಂಡಿತ ಎಂದರು.

### ಚನ್ನಪಟ್ಟಣ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಕಾಂಗ್ರೆಸ್ ಅಭ್ಯರ್ಥಿಯಾದ ನನ್ನನ್ನು ಬೆಂಬಲಿಸಿ: ಯೋಗೇಶ್ವರ್

# ಅಭಿವೃದ್ಧಿ ಬಗ್ಗೆ ಮಾತನಾಡಲು ಕುಮಾರಸ್ವಾಮಿ ಯಾವುದೇ ಸಾಕ್ಷಿಗುಡ್ಡೆ ಬಿಟ್ಟಿಲ್ಲ



**ಚನ್ನಪಟ್ಟಣ, ನ. 10 :** ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಅವರು ಚನ್ನಪಟ್ಟಣ ನಗರದಲ್ಲಿ ಭರ್ಜರಿ ಪ್ರಚಾರ ನಡೆಸಿದರು. ಎಲೆಕೇರಿಯಿಂದ ತೆರೆದ ವಾಹನದಲ್ಲಿ ಪ್ರಚಾರ ಆರಂಭಿಸಿದರು. ಪಟ್ಟಣದ ನಾನಾ ಭಾಗಗಳಿಗೆ ಪ್ರಚಾರಕ್ಕೆ ತೆರಳಿದ ವೇಳೆ ಮಹಿಳೆಯರು ಪೂರ್ಣ ಕುಂಭದೊಂದಿಗೆ ಬರಮಾಡಿಕೊಂಡರೆ ಕಾರ್ಯಕರ್ತರು ಪುಷ್ಪವೃಷ್ಟಿ ಮಾಡಿ ಸ್ವಾಗತಿಸಿದರು.

ಪ್ರಚಾರದ ವೇಳೆ ಮಾತನಾಡಿದ ಯೋಗೇಶ್ವರ್, ಚನ್ನಪಟ್ಟಣದ ಸರ್ವಾಂಗೀಣ ಅಭಿವೃದ್ಧಿಗೆ ಕ್ಷೇತ್ರದ ಜನತೆ ನನಗೆ ಆಶೀರ್ವದಿಸಿ ಗೆಲ್ಲಿಸುವ ಮೂಲಕ ಕಾಂಗ್ರೆಸ್ ಸರ್ಕಾರಕ್ಕೆ ಮತ್ತಷ್ಟು ಶಕ್ತಿ ತುಂಬಬೇಕು ಎಂದರು. ಅಭಿವೃದ್ಧಿ ಬಗ್ಗೆ ಮಾತನಾಡಲು ಕುಮಾರಸ್ವಾಮಿ ಯಾವುದೇ ಸಾಕ್ಷಿಗುಡ್ಡೆಯನ್ನು ಬಿಟ್ಟಿಲ್ಲ. ಮುಖ್ಯಮಂತ್ರಿ, ಶಾಸಕರಾಗಿ ಕ್ಷೇತ್ರದಲ್ಲಿ ಏನೂ ಅಭಿವೃದ್ಧಿ ಕೆಲಸ ಮಾಡಿಲ್ಲ. ಈ ತಾಲೂಕಿಗೆ ಅವರು ಅನ್ಯಾಯ ಮಾಡಿರುವುದರಿಂದ ಜನರು ಅವರ ಮಗನನ್ನು ಹೊರಕ್ಕೆ ಕಳುಹಿಸಿ ಚನ್ನಪಟ್ಟಣದ ಸ್ವಾಭಿಮಾನ ಎತ್ತಿಯಿಡಿಯಬೇಕು ಎಂದರು.

ಚನ್ನಪಟ್ಟಣದಲ್ಲಿ ಗೆದ್ದು ಹೋದವರು ಈಗ ಮಗನ ಪರ ಮತ ಕೇಳಲು ಬಂದಿದ್ದಾರೆ. ಕುಮಾರಸ್ವಾಮಿ ಅವರ ಮೇಲೆ ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿದ್ದ ಜನತೆಗೆ ಮೋಸ ಮಾಡಿದ್ದಾರೆ. ಮುಖ್ಯಮಂತ್ರಿ ಆಗಿದ್ದಾಗಲೂ ಚನ್ನಪಟ್ಟಣಕ್ಕೆ ಮೂಲಸೌಕರ್ಯ ಕಲ್ಪಿಸಲಿಲ್ಲ. ಒಳಚರಂಡಿ, ಶೌಚಾಲಯ, ಕುಡಿಯುವ ನೀರು, ಬಸ್ ನಿಲ್ದಾಣ ನಿರ್ಮಾಣ ಸಮಸ್ಯೆಗಳನ್ನು ಬಗೆಹರಿಸುವ ಬಗ್ಗೆ ಒಂದು ದಿನವೂ ಮಾತನಾಡಲಿಲ್ಲ. ಬರೀ ಕಣ್ಣೀರಾಕಿಕೊಂಡು ಭಾವನಾತ್ಮಕ ಮಾತುಗಳನ್ನಾಡಿ ವೋಟ್ ಪಡೆಯುತ್ತಿದ್ದರು ಎಂದರು.

ಆರೇಳು ವರ್ಷದಿಂದ ಕುಮಾರಸ್ವಾಮಿ ಮಾಡಿದ ಅದ್ವಾನದಿಂದ ಚನ್ನಪಟ್ಟಣ ಗಬ್ಬು ನಾರುತ್ತಿದೆ. ಅವರ ಮೇಲೆ ಜನ ರೋಸಿಹೋಗಿದ್ದಾರೆ. ಚನ್ನಪಟ್ಟಣದಲ್ಲಿ ನನ್ನ ಬಗ್ಗೆ ಉತ್ತಮ ವಾತಾವರಣ ಇದೆ. ನಾನು ಶಾಸಕ ಆಗಿದ್ದಾಗ ಕೆಲವೊಂದಿಷ್ಟು ಕೆಲಸ ಮಾಡಿದ್ದೇನೆ. ನನಗೆ ಗೆಲುವು ಸಿಗುವ ಆಶಾದಾಯಕ ವಾತಾವರಣ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನನ್ನನ್ನು ಶಾಸಕನನ್ನಾಗಿ ಆಯ್ಕೆ ಮಾಡಿದಾಗ ಈ ಜನತೆಯ ಋಣ ತೀರಿಸಲು ಕ್ಷೇತ್ರದ ಹಳ್ಳಿಗಳಿನ ಕೆರೆಗಳಿಗೆ ನೀರು ತುಂಬಿಸಿದ್ದೇನೆ. ನಿರಂತರ ಶ್ರಮದಿಂದ ಈ ಭಾಗದ ಕೆರೆಗಳಿಗೆ ನೀರು ಬಂತಿತು. ಆದರೆ ಕುಮಾರಸ್ವಾಮಿ ಮಾತಿನಿಂದ ನೀರು ತುಂಬಿಸಿದರೆ ಹೊರತು ಏನೂ ಮಾಡಲಿಲ್ಲ. ಅವರಿಗೆ ಅವರ ಮಗನಿಗೆ ಹಳ್ಳಿಗಳ ಹೆಸರು ಸರಿಯಾಗಿ ಗೊತ್ತಿಲ್ಲ ಎಂದರು.

ಬೊಂಬೆನಾಡು, ಅಕ್ಕರೆಯ ಬೀಡು ಚನ್ನಪಟ್ಟಣದ ಅಭಿವೃದ್ಧಿಗೆ ನೂರಾರು ಕನಸು ಕಟ್ಟಿಕೊಂಡಿದ್ದೇನೆ. ನನ್ನನ್ನು ಜನ ಆಯ್ಕೆ ಮಾಡಿದರೆ ಮಾದರಿ ಕ್ಷೇತ್ರವನ್ನಾಗಿ ಮಾಡುವ ಕನಸು ಕಂಡಿದ್ದೇನೆ. ಕಾಂಗ್ರೆಸ್ ಸರ್ಕಾರ ಇರುವುದರಿಂದ ಕಾಂಗ್ರೆಸ್ ಶಾಸಕ ಆಯ್ಕೆಯಾದರೆ ಕ್ಷೇತ್ರದ ಅಭಿವೃದ್ಧಿಗೆ ವೇಗ ಸಿಗಲಿದೆ. ಈಗಾಗಲೇ 500 ಕೋಟಿ ರೂ. ಅನುದಾನವನ್ನು ವಿವಿಧ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ನೀರಾವರಿ, ಕೃಷಿ, ಹೈನೋದ್ಯಮ ಇಲ್ಲಿನ ಪ್ರಮುಖ ಆದಾಯ ಮೂಲ. ರೈತಪರ ಅನೇಕ ಯೋಜನೆಗಳನ್ನು ಘೋಷಿಸಿರುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ನನಗೆ ಆಶೀರ್ವದಿಸಬೇಕು ಎಂದು ಮನವಿ ಮಾಡಿದರು.

ಚನ್ನಪಟ್ಟಣ ನಗರ ವ್ಯಾಪ್ತಿಯ ಎಲೆಕೇರಿ, ಡೂಮ್ ಲೈಟ್ ಸರ್ಕಲ್, ಹನುಮಂತನಗರ, ತಟ್ಟೆಕೆರೆ, ಪೇಟೆಚೇರಿ ವಾರ್ಡ್ ಗಳಲ್ಲಿ ಚುನಾವಣಾ ಪ್ರಚಾರ ನಡೆಸಿದರು. ಈ ಸಂದರ್ಭದಲ್ಲಿ ಸಚಿವ ಚಲುವರಾಯಸ್ವಾಮಿ, ಶಾಸಕ ಪ್ರದೀಪ್ ಈಶ್ವರ್, ಕಾಂಗ್ರೆಸ್ ಮುಖಂಡರಾದ ರಘುನಂದನ್ ರಾಮಣ್ಣ ಸೇರಿದಂತೆ ಹಲವಾರು ನಾಯಕರು, ಸ್ಥಳೀಯ ಮುಖಂಡರು ಯೋಗೇಶ್ವರ್ ಪರ ಮತಯಾಚಿಸಿದರು.

**ಸಿಎಂ, ಡಿಸಿಎಂ ರಿಂದ ಬೃಹತ್ ಸಭೆ :** ಚನ್ನಪಟ್ಟಣದಲ್ಲಿ ಸೋಮವಾರ ಬೃಹತ್ ಬಹಿರಂಗ ಸಭೆ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರು, ಶಾಸಕರು, ಮುಖಂಡರು ಈ ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಯೋಗೇಶ್ವರ್ ಹೇಳಿದರು. ಉದ್ಯಮಿಗಳ ಸಾಲ ಮನ್ನಾ ಮಾಡಿದರೆ ಸರ್ಕಾರ ದಿವಾಳಿ ಆಗುವುದಿಲ್ಲವೇ? ಬಡವರಿಗೆ ಕಾರ್ಯಕ್ರಮ ಮಾಡಿದರೆ ಸರ್ಕಾರ ದಿವಾಳಿ ಆಗುತ್ತದೆ ಅನ್ನುವ ಬಿಜೆಪಿಯವರು ಉದ್ಯಮಿಗಳ ಸಾಲವನ್ನು ಮನ್ನಾ ಮಾಡಿದಾಗ ಸರ್ಕಾರ ದಿವಾಳಿ ಆಗುವುದಿಲ್ಲವೇ ಎಂದು ಸಚಿವ ಕಿಮ್ಮನೆ ರತ್ನಾಕರ್ ಪ್ರಶ್ನಿಸಿದರು. ಯೋಗೇಶ್ವರ್ ಅವರ ಪರ ಚುನಾವಣಾ ಪ್ರಚಾರ ಸಂದರ್ಭದಲ್ಲಿ ತಾಲೂಕು ಕಾಂಗ್ರೆಸ್ ಕಚೇರಿ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಡವರ ಪರ ಕಾರ್ಯಕ್ರಮ ಮಾಡಿದರೆ ಅವರಿಗೆ ಸಹಿಸಲು ಆಗುತ್ತಿಲ್ಲ ಎಂದರು. ಕಾಂಗ್ರೆಸ್ ಸರ್ಕಾರ ಉತ್ತಮ ಆಡಳಿತ ನಡೆಸುತ್ತಿದೆ. ಉತ್ತಮ ಕಾರ್ಯಕ್ರಮಗಳನ್ನು ಜಾರಿಗೊಳಿಸುತ್ತಿರುವುದರಿಂದ ಜನ ನಮ್ಮ ಪರ ಇದ್ದಾರೆ. ಮೂರು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಗುಜರಿ ಮಾರಾಟದ ಮೂಲಕವೇ 2,364 ಕೋಟಿ ರೂ. ಗಳಿಸಿದ ಸರ್ಕಾರ: ಪ್ರಧಾನಿ ಮೋದಿ ಶ್ಲಾಘನೆ

**ನವದೆಹಲಿ, ನ. 10 :** 2021–24ರ ಅವಧಿಯಲ್ಲಿ ಕೇಂದ್ರ ಸರ್ಕಾರ ತನ್ನ ವಿಶೇಷ 'ಸ್ವಚ್ಛತಾ' ಅಭಿಯಾನದ ಮೂಲಕ ಸ್ಕ್ರ್ಯಾಪ್ ವಿಲೇವಾರಿ ಮೂಲಕ 2,364 ಕೋಟಿ ರೂಪಾಯಿ ಆದಾಯವನ್ನು ಗಳಿಸಿದೆ. ಇತ್ತೀಚೆಗೆ ಮುಕ್ತಾಯಗೊಂಡ ಸ್ವಚ್ಛತಾ ಅಭಿಯಾನದ ವೇಳೆ ಸ್ಕ್ರ್ಯಾಪ್ ವಿಲೇವಾರಿಯಿಂದ ಕೇಂದ್ರವು 650 ಕೋಟಿ ರೂ.ಗೂ ಅಧಿಕ ಆದಾಯ ಗಳಿಸಿದೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ. ಈ ಸಾಧನೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದು, ಸಾಮೂಹಿಕ ಪ್ರಯತ್ನವನ್ನು ಶ್ಲಾಘಿಸಿದ್ದಾರೆ.

ಎಕ್ಸ್ ನಲ್ಲಿ ಕೇಂದ್ರ ಸಿಬ್ಬಂದಿ ಖಾತೆ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಅವರ



ಪೋಸ್ಟ್ ಅನ್ನು ಹಂಚಿಕೊಂಡ ಮೋದಿ, "ಶ್ಲಾಘನೀಯ! ಸಮರ್ಥ ನಿರ್ವಹಣೆ ಮತ್ತು ಪೂರ್ವಭಾವಿ ಕ್ರಮದ ಮೇಲೆ ಕೇಂದ್ರೀಕರಿಸುವ ಮೂಲಕ, ಈ ಪ್ರಯತ್ನವು ಉತ್ತಮ ಫಲಿತಾಂಶಗಳನ್ನು ಸಾಧಿಸಿದೆ.

ಸಾಮೂಹಿಕ ಪ್ರಯತ್ನಗಳು ಸುಸ್ಥಿರ ಫಲಿತಾಂಶಗಳಿಗೆ ಹೇಗೆ ಕಾರಣವಾಗಬಹುದು ಎಂಬುದನ್ನು ಇದು ತೋರಿಸುತ್ತದೆ, ಸ್ವಚ್ಛತೆ ಮತ್ತು ಆರ್ಥಿಕ ವಿವೇಕ ಎರಡನ್ನೂ ಉತ್ತೇಜಿಸುತ್ತದೆ ಎಂದು ತಿಳಿಸಿದ್ದಾರೆ. ವಿಶೇಷ ಅಭಿಯಾನ 4.0 ಸ್ವಚ್ಛತಾವನ್ನು ಸಾಂಸ್ಥಿಕಗೊಳಿಸಲು ಮತ್ತು ಸರ್ಕಾರಿ ಕಛೇರಿಗಳಲ್ಲಿನ ಬಾಕಿಯನ್ನು ಕಡಿಮೆ ಮಾಡಲು ಭಾರತದ ಅತಿದೊಡ್ಡ



ವಯನಾಡ್ ಜಿಲ್ಲೆಯ ಮನಂತವಾಡಿಯಲ್ಲಿ ಭಾನುವಾರ ನಡೆದ ವಯನಾಡ್ ಲೋಕಸಭಾ ಕ್ಷೇತ್ರದ ಉಪಚುನಾವಣೆಯ ರೋಡ್ ಶೋನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕಾ ಗಾಂಧಿ ವಾದ್ರಾ.

### ಕೆನಾಡದಲ್ಲಿ ಹಿಂದೂ ದೇವಾಲಯದ ಮೇಲೆ ದಾಳಿ

# ದಾಳಿ ಖಂಡಿಸಿ ಹಿಂದೂ ಮತ್ತು ಸಿಖ್ ಕಾರ್ಯಕರ್ತರ ಪ್ರತಿಭಟನೆ

**ನವದೆಹಲಿ, ನ. 10 :** ಕೆನಡಾದ ಬ್ರಾಂಪ್ಟನ್‌ನಲ್ಲಿರುವ ಹಿಂದೂ ದೇವಾಲಯದ ಮೇಲೆ ಖಾಲಿಸ್ತಾನ್ ಪರ ಗುಂಪು ನಡೆಸಿದ ದಾಳಿಯನ್ನು ಖಂಡಿಸಿ ಹಿಂದೂ ಮತ್ತು ಸಿಖ್ ಕಾರ್ಯಕರ್ತರು ಭಾನುವಾರ ನವದೆಹಲಿಯ ಕೆನಡಾದ ಹೈಕಮಿಷನ್ ಹೊರಗೆ ಪ್ರತಿಭಟನೆ ನಡೆಸಿದರು.




ವಿವಿಧ ಹಿಂದೂ ಸಂಘಟನೆಗಳಿಂದ ಪ್ರತಿಭಟನೆಗೆ ಕರೆ ನೀಡಿದ ಹಿನ್ನಲೆ ಚಾಣಕ್ಯಪುರಿಯ ರಾಜತಾಂತ್ರಿಕ ಎನ್‌ಕ್ಲೇವ್‌ನಲ್ಲಿರುವ ಕೆನಡಾದ ಹೈಕಮೀಷನ್ ಎದುರು ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನೆ ಹಿನ್ನಲೆ ರಾಯಭಾರ ಕಚೇರಿ ಮುಂದೆ ಭದ್ರತೆಯನ್ನು ಹೆಚ್ಚಿಸಲಾಯಿತು. ದೆಹಲಿ ಪೊಲೀಸರು ಹೆಚ್ಚಿನ ಸಂಖ್ಯೆಯ ಸಿಬ್ಬಂದಿಯನ್ನು ನಿಯೋಜಿಸಿದ್ದರು.

ಹೈಕಮಿಷನ್ವರೆಗೂ ಮೆರವಣಿಗೆ ನಡೆಸುತ್ತಿದ್ದ ಹಿಂದೂ ಸಿಖ್ ಗ್ಲೋಬಲ್ ಫೋರಂನ ಹಲವಾರು ಕಾರ್ಯಕರ್ತರು, ಪೊಲೀಸ್ ಬ್ಯಾರಿಕೇಡ್ ಏರಲು ಪ್ರಯತ್ನಿಸಿದರು ಮತ್ತು ಅವುಗಳನ್ನು ಉರುಳಿಸಿದರು. ಭಾರತೀಯರು ಮತ್ತು ಸಿಖ್ಖರು ಒಗ್ಗಟ್ಟಾಗಿದ್ದಾರೆ, ಕೆನಡಾದಲ್ಲಿ ದೇವಸ್ಥಾನಗಳನ್ನು ಅವಮಾನಿಸುವುದನ್ನು ಭಾರತೀಯರು ಸಹಿಸುವುದಿಲ್ಲ ಎಂಬ ಬರಹಗಳಿರುವ ಘೋಷಣಾ ಫಲಕಗಳನ್ನು ಎತ್ತಿ ತೋರಿಸಿದರು.

ನವೆಂಬರ್ 4 ರಂದು ಕೆನಡಾದ ಬ್ರಾಂಪ್ಟನ್‌ನಲ್ಲಿರುವ ದೇವಾಲಯದ ಹೊರಗೆ ಹೆಚ್ಚಿನ ಸಂಖ್ಯೆಯ ಖಾಲಿಸ್ತಾನಿ ಬೆಂಬಲಿಗರು ಹಿಂದೂ ಭಕ್ತರ ಮೇಲೆ ಹಲ್ಲೆ ನಡೆಸಿದ್ದರು. ಈ ಘಟನೆಯು ಉದ್ದೇಶಪೂರ್ವಕ ದಾಳಿ ಮತ್ತು ಹೇಡಿತನದ ಪ್ರಯತ್ನ ಎಂದು ಪ್ರಧಾನಿ ನರೇಂದ್ರ ಮೋದಿ ಖಂಡಿಸಿದ್ದರು. ದಾಳಿಯ ನಂತರ, ಬ್ರಾಂಪ್ಟನ್ ದೇವಾಲಯದ ಹೊರಗೆ ಬೃಹತ್ ಪ್ರತಿಭಟನೆಗಳು ಭುಗಿಲೆದ್ದವು.

# ಜಾರ್ಖಂಡ್ ಚುನಾವಣೆ: ರಾಂಚಿಯಲ್ಲಿ ಪ್ರಧಾನಿ ಮೋದಿ ರೋಡ್ ಶೋ

**ರಾಂಚಿ, ನ. 10 :** ಇದೇ 13 ರಿಂದ ನವೆಂಬರ್ 20ರವರೆಗೆ ಎರಡು ಹಂತಗಳಲ್ಲಿ ನಡೆಯಲಿರುವ ಜಾರ್ಖಂಡ್ ರಾಜ್ಯದ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾನುವಾರ ಸಂಜೆ ರಾಂಚಿಯಲ್ಲಿ ರೋಡ್ ಶೋ ನಡೆಸಿದರು.



ಹೂವುಗಳು ಮತ್ತು ಕಟೌಟ್ಗಳಿಂದ ಅಲಂಕರಿಸಲ್ಪಟ್ಟ ಕೇಸರಿ ಬಣ್ಣದ ತೆರೆದ ವಾಹನದ ಮೇಲೆ ನಿಂತಿದ್ದ ಪ್ರಧಾನಿ, ರಸ್ತೆಯ ಇಕ್ಕೆಲಗಳಲ್ಲಿ ಸೇರಿ ಘೋಷಣೆ ಕೂಗುತ್ತಿದ್ದ ಜನಸಮೂಹದತ್ತ ಕೈಬೀಸಿದರು. ಇದು ಮೋದಿ ರಾಂಚಿಯಲ್ಲಿ ನಡೆಸಿದ ಎರಡನೇ ರೋಡ್ ಶೋ ಆಗಿದೆ. ಈ ಹಿಂದೆ ಮೇ 3ರಂದು ರೋಡ್ ಶೋ ನಡೆಸಿದ್ದರು.

ಒಟಿಸಿ ಮೈದಾನದಲ್ಲಿ ಬಿಗಿ ಭದ್ರತೆ ಮತ್ತು ಭಾರಿ ಪೊಲೀಸ್ ನಿಯೋಜನೆಯ ನಡುವೆ ಪ್ರಾರಂಭವಾದ ರೋಡ್ ಶೋ ನ್ಯೂ ಮಾರ್ಕೆಟ್ ಚೌಕ್ನಲ್ಲಿ ಮುಕ್ತಾಯವಾಯಿತು. ಮಕ್ಕಳಿಂದ ಹಿಡಿದು ದೊಡ್ಡವರವರೆಗೆ ಜನರು ತಮ್ಮ ಮೊಬೈಲ್‌ನಲ್ಲಿ ರೋಡ್ಶೋ ಕ್ಷಣಗಳನ್ನು ಸೆರೆಹಿಡಿಯುವ ಮೂಲಕ ತಮ್ಮ ಉತ್ಸಾಹವನ್ನು ವ್ಯಕ್ತಪಡಿಸಿದರು.

ರೋಡ್‌ಶೋ ಹಿನ್ನೆಲೆಯಲ್ಲಿ ರಾಂಚಿಯಲ್ಲಿ ಬೆಳಗ್ಗೆ 6 ರಿಂದ ರಾತ್ರಿ 11ರವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು, ಹೆಚ್ಚುವರಿಯಾಗಿ, ಎಲ್ಲಾ ಸಣ್ಣ ಮತ್ತು ದೊಡ್ಡ ಸರಕು ವಾಹನಗಳ ಪ್ರವೇಶವನ್ನು ರಾಜ್ಯ ರಾಜಧಾನಿಯಲ್ಲಿ ಮಧ್ಯಾಹ್ನ 2 ರಿಂದ ರಾತ್ರಿ 8 ರ ನಡುವೆ ನಿರ್ಬಂಧಿಸಲಾಗಿದೆ. ಜಿಲ್ಲಾಡಳಿತ ಬಿರ್ಸಾ ಮುಂಡಾ ವಿಮಾನ ನಿಲ್ದಾಣ ಮತ್ತು ಸಹಜಾನಂದ್ ಚೌಕ್ ನಡುವಿನ 200 ಮೀಟರ್ ವ್ಯಾಪ್ತಿಯೊಳಗೆ ಹಾರಾಟ–ನಿಷೇಧ ವಲಯ ಎಂದು ಘೋಷಿಸಿದೆ. ರೋಡ್ ಶೋ ಅವಧಿಯವರೆಗೆ ಈ ಪ್ರದೇಶದಲ್ಲಿ ಡ್ರೋನ್‌ಗಳು, ಪ್ಯಾರಾಗ್ಲೈಡಿಂಗ್ ಮತ್ತು ಬಿಸಿ ಗಾಳಿಯ ಬಲೂನ್‌ಗಳನ್ನು ನಿಷೇಧಿಸಲಾಗಿದೆ. ರೋಡ್ ಶೋಗೆ ಮುನ್ನಾ ಬೊಕಾರೊ ಮತ್ತು ಗುಮ್ಲಾದಲ್ಲಿ ನಡೆದ ಎರಡು ಚುನಾವಣಾ ರ್‍ಯಾಲಿಗಳನ್ನುದ್ದೇಶಿಸಿ ಮಾತನಾಡಿದ ಮೋದಿ, ರಾಜ್ಯದಲ್ಲಿ ಸರ್ವತೋಮುಖ ಅಭಿವೃದ್ಧಿಯ ಭರವಸೆ ನೀಡಿದ್ದರು.

# ಬುಲ್ಡೋಜರ್ ನ್ಯಾಯ ಒಪ್ಪಲು ಅಸಾಧ್ಯ ಸಿಜೆಐ ಚಂದ್ರಚೂಡ್ ಅಂತಿಮ ತೀರ್ಪು

**ನವದೆಹಲಿ, ನ. 10 :** ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿದ್ದ ಡಿ.ವೈ. ಚಂದ್ರಚೂಡ್ ಅವರು ನಿವೃತ್ತಿಯಾಗಿದ್ದಾರೆ. ತನ್ನ ಅಂತಿಮ ತೀರ್ಪಿನಲ್ಲಿ ಅವರು ನಾಗರಿಕರ ಧ್ವನಿಯನ್ನು ಬೆದರಿಕೆಗಳ ಮೂಲಕ ಹತ್ತಿಕ್ಕಬಾರದು ಮತ್ತು ಕಾನೂನು ಅನ್ವಯಿಸುವ ಸಮಾಜದಲ್ಲಿ ಬುಲ್ಡೋಜರ್ ನ್ಯಾಯ ಒಪ್ಪಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ನಾಗರಿಕರ ಮನೆಯ ಸುರಕ್ಷತೆ ಮತ್ತು ಭದ್ರತೆ ರಕ್ಷಣೆಗೆ ಅರ್ಹವಾದ ಮೂಲಭೂತ ಹಕ್ಕುಗಳಾಗಿವೆ ಎಂದು ಅವರು ಒತ್ತಿ ಹೇಳಿದರು.



ಆಪಾದಿತ ಅಕ್ರಮ ಅತಿಕ್ರಮಣಗಳು ಅಥವಾ ನಿರ್ಮಾಣಗಳ ವಿರುದ್ಧ ಕ್ರಮ ಕೈಗೊಳ್ಳುವ ಮೊದಲು ಕಾರ್ಯವಿಧಾನದ ಸುರಕ್ಷತೆಗಳನ್ನು ಅನುಸರಿಸಲು ಮತ್ತು ಸರಿಯಾದ ಪ್ರಕ್ರಿಯೆಯನ್ನು ಖಚಿತಪಡಿಸಿಕೊಳ್ಳಲು ರಾಜ್ಯವು ಬದ್ಧವಾಗಿರಬೇಕು ಎಂದು ಹೇಳಿದರು.

ಬುಲ್ಡೋಜರ್ ಮೂಲಕ ನ್ಯಾಯ ನೀಡುವಿಕೆ ಯಾವುದೇ ನಾಗರಿಕ ವ್ಯವಸ್ಥೆ ಮತ್ತು ನ್ಯಾಯಶಾಸ್ತ್ರದಲ್ಲಿ ಇರದ ವಿಚಾರ. ರಾಜ್ಯದ ಯಾವುದೇ ವಿಭಾಗ ಅಥವಾ ಅಧಿಕಾರಿಯಿಂದ ಕಾನೂನುಬಾಹಿರ ನಡವಳಿಕೆಯನ್ನು ಅನುಮತಿಸಿದರೆ, ನಾಗರಿಕರ ಆಸ್ತಿಗಳನ್ನು ನೆಲಸಮ ಮಾಡುವುದು ಬಾಹ್ಯ ಕಾರಣಕ್ಕಾಗಿ ಆಯ್ದ ಪ್ರತೀಕಾರವಾಗಿ ನಡೆಯುತ್ತದೆ ಎಂಬ ಗಂಭೀರ ಅಪಾಯವಿದೆ ಎಂದು ಚಂದ್ರಚೂಡ್ ಹೇಳಿದರು.

ಉತ್ತರ ಪ್ರದೇಶದ ಮಹಾರಾಜಗಂಜ್ ನಲ್ಲಿ 2019ರಲ್ಲಿ ಮನೆಯೊಂದನ್ನು ನೆಲಸಮ ಮಾಡಿ ಪ್ರಕರಣದ ವಿಚಾರಣೆ ನಡೆಸಿದ ಅವರು ಈ ಅಭಿಪ್ರಾಯ ವ್ಯಕ್ತಪಡಿಸಿದರು. ಮನೆಗಳನ್ನು ಮತ್ತು ಆಸ್ತಿಗಳನ್ನು ನೆಲಸಮ ಮಾಡುವ ಬೆದರಿಕೆಯೊಡ್ಡಿ ನಾಗರಿಕರ ಧ್ವನಿ ಅಡಗಿಸಲು ಸಾಧ್ಯವಿಲ್ಲ. ಮನುಷ್ಯನ ಅತ್ಯಂತ ಸುರಕ್ಷತೆ ಆತನ ಮನೆಯಾಗಿರುತ್ತದೆ ಎಂದರು.

# ಕಾಲೇಜುಗಳ ಗೇಟ್‌ಗೆ ಕೇಸರಿ ಬಣ್ಣ: ರಾಜಸ್ಥಾನ ಸರ್ಕಾರದ ಆದೇಶಕ್ಕೆ ಕಾಂಗ್ರೆಸ್ ಖಂಡನೆ

**ಜೈಪುರ್, ನ. 10 :** ವಿದ್ಯಾರ್ಥಿಗಳ ಅಧ್ಯಯನದಲ್ಲಿ ಶಾಂತಿಯುತ ಮತ್ತು ಸಕಾರಾತ್ಮಕ ವಾತಾವರಣ ನಿರ್ಮಿಸುವ ಕಾರಣ ನೀಡಿ, ರಾಜ್ಯಾದ್ಯಂತ ಸರ್ಕಾರಿ ಕಾಲೇಜುಗಳ ಗೇಟ್‌ಗಳಿಗೆ ಕೇಸರಿ ಬಣ್ಣ ಬಳಿಯಲು ರಾಜಸ್ಥಾನ ಸರ್ಕಾರ ಆದೇಶ ಹೊರಡಿಸಿದೆ. ಕಾಯಕಲ್ಪ ಯೋಜನೆಯಡಿ 10 ವಿಭಾಗಗಳ ಒಟ್ಟು 20 ಕಾಲೇಜುಗಳಲ್ಲಿ ಪ್ರಾಯೋಗಿಕವಾಗಿ ಈ ಆದೇಶವನ್ನು ಜಾರಿಗೊಳಿಸಲಾಗುವುದು ಎಂದು ರಾಜಸ್ಥಾನದ ಕಾಲೇಜು ಶಿಕ್ಷಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.




ಕಾಲೇಜುಗಳ ಶೈಕ್ಷಣಿಕ ವಾತಾವರಣ ಮತ್ತು ಸನ್ನಿವೇಶಗಳು ಕಾಲೇಜು ಪ್ರವೇಶಿಸಿದ ತಕ್ಷಣ ವಿದ್ಯಾರ್ಥಿಗಳು ಸಕಾರಾತ್ಮಕ ಭಾವನೆಯನ್ನು ಹೊಂದಬೇಕು. ಉನ್ನತ ಶಿಕ್ಷಣದ ಬಗ್ಗೆ ಸಮಾಜಕ್ಕೆ ಉತ್ತಮ ಸಂದೇಶ ರವಾನೆಯಾಗಬೇಕು. ಆದ್ದರಿಂದ ಸಕಾರಾತ್ಮಕ, ಸ್ವಚ್ಛತೆಯನ್ನು ಸೃಷ್ಟಿಸಲು ಕಾಲೇಜುಗಳನ್ನು ಪುನರುಜ್ಜೀವನಗೊಳಿಸಬೇಕು. ಕಾಲೇಜುಗಳಲ್ಲಿ ಆರೋಗ್ಯಕರ ಮತ್ತು ಶೈಕ್ಷಣಿಕ ವಾತಾವರಣ ಎಂದು ಪ್ರಕಟಣೆ ತಿಳಿಸಿದೆ.

ಏಷ್ಯನ್ ಪೇಂಟ್ಸ್‌ನ ವೈಟ್ ಗೋಲ್ಡ್ ಮತ್ತು ಆರೆಂಜ್ ಬ್ರೌನ್ ಬಣ್ಣಗಳನ್ನು ಬಳಸಿ 20 ಕಾಲೇಜುಗಳಲ್ಲಿನ ಗೇಟ್‌ಗಳನ್ನು ಪೇಂಟಿಂಗ್ ಅನ್ನು ಏಳು ದಿನಗಳಲ್ಲಿ ಪೂರ್ಣಗೊಳಿಸಬೇಕು ಎಂದು ಅದು ಹೇಳಿದೆ. ಕಾಲೇಜುಗಳು ಗೇಟ್‌ಗಳ ಚಿತ್ರಗಳನ್ನು ಚಿತ್ರಿಸಿದ ನಂತರ ಶಿಕ್ಷಣ ಇಲಾಖೆಗೆ ಕಳುಹಿಸಬೇಕು ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

ಕಾಂಗ್ರೆಸ್ ಈ ಆದೇಶವನ್ನು ಟೀಕಿಸಿತು ಮತ್ತು ಅದನ್ನು ಶಿಕ್ಷಣದ ಕೇಸರಿಕರಣ ಎಂದು ಕರೆದಿದೆ. ಕಾಂಗ್ರೆಸ್ ವಿದ್ಯಾರ್ಥಿ ಘಟಕ, ನ್ಯಾಷನಲ್ ಸ್ಟೂಡೆಂಟ್ಸ್ ಯೂನಿಯನ್ ಆಫ್ ಇಂಡಿಯಾದ ರಾಜ್ಯಾಧ್ಯಕ್ಷ ವಿನೋದ ಜಾಖರ್ ಮಾತನಾಡಿದ ಅವರು, ರಾಜ್ಯದಲ್ಲಿ ಸಾವಿರಾರು ಉಪನ್ಯಾಸಕರ ಹುದ್ದೆಗಳು ಖಾಲಿಯಿದ್ದರೂ ಕಾಲೇಜುಗಳಲ್ಲಿ ಕಟ್ಟಡಗಳಿಲ್ಲ, ಬೆಂಚುಗಳಿಲ್ಲ, ಸರ್ಕಾರ ರಾಜಕೀಯಕ್ಕಾಗಿ ಸಾರ್ವಜನಿಕ ಹಣವನ್ನು ಖರ್ಚು ಮಾಡುತ್ತಿದ್ದಾರೆ ಎಂದು ಆರೋಪಿಸಿದೆ.

# ನಾಚಿಕೆ ಇಲ್ಲದ ನಿತೀಶ್ ಮುಸ್ಲಿಮರ ಬೆನ್ನಿಗೆ ಇರಿದಿದ್ದಾರೆ

**ರಾಮಗಢ, ನ. 10 :** ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಒಬ್ಬ ನಾಚಿಕೆ ಇಲ್ಲದ ವ್ಯಕ್ತಿ, ಮುಸ್ಲಿಮರ ಬೆನ್ನಿಗೆ ಇರಿದಿದ್ದಾರೆ ಎಂದು ಜನ ಸುರಾಜ್ ಪಕ್ಷದ ಸಂಸ್ಥಾಪಕ ಪ್ರಶಾಂತ್ ಕಿಶೋರ್ ಕಿಡಿಕಾರಿದ್ದಾರೆ. 4 ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಪ್ರಚಾರದಲ್ಲಿ ನಿತೀಶ್ ಅಲ್ಪಸಂಖ್ಯಾತ ಸಮುದಾಯದ ಓಲೈಕೆಗೆ ಮುಂದಾಗಿರುವ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಅವರು, ನಿಜ, ಬೆನ್ನಿಗೆ ಚೂರಿಯಿಂದ ಇರಿಯುವ ಮೂಲಕ ಮುಸ್ಲಿಮರಿಗಾಗಿ ಅವರು ಬಹಳಷ್ಟನ್ನು ಮಾಡಿದ್ದಾರೆ ಎಂದು ಪ್ರಚಾರದ ವೇಳೆ ಪ್ರಶಾಂತ್ ವ್ಯಂಗ್ಯ ಮಾಡಿದ್ದಾರೆ.




2015ರಲ್ಲಿ ಮುಸ್ಲಿಮರ ಅಭೂತಪೂರ್ವ ಬೆಂಬಲ ಪಡೆದು ಗೆದ್ದ ನಿತೀಶ್, ಎರಡು ವರ್ಷಗಳ ಬಳಿಕ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡರು ಎಂದು ದೂರಿದ್ದಾರೆ. ಅಲ್ಲದೆ, ಮುಸ್ಲಿಮರ ವಿರುದ್ಧವಾದ ಕಾನೂನುಗಳನ್ನು ಬೆಂಬಲಿಸಿದ್ದಾರೆ ಎಂದು ದೂರಿದ್ದಾರೆ.

ನಿತೀಶ್ ಕುಮಾರ್ ಒಬ್ಬ ನಾಚಿಕೆ ಇಲ್ಲದ ವ್ಯಕ್ತಿಯಾಗಿದ್ದು, ಅವರ ಬಗ್ಗೆ ಜನರಿಗೆ ಅಸಹ್ಯ ಉಂಟಾಗಿದೆ. ಅವರನ್ನು ಅಧಿಕಾರದಿಂದ ಕಿತ್ತೊಗೆಯಲು ಹಾತೊರೆಯುತ್ತಿದ್ದಾರೆ ಎಂದಿದ್ದಾರೆ. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ 'ಬಟೆಂಗೆ ಥೋ ಕಟೆಂಗೆ ಘೋಷವಾಕ್ಯದ ಬಗ್ಗೆ ಪ್ರತಿಕ್ರಿಯಿಸಿದ ಪ್ರಶಾಂತ್, ಇದು ಹಿಂದೂಗಳಲ್ಲಿ ಅಸುರಕ್ಷಿತ ಭಾವನೆ ಮೂಡಿಸುವ ಮತ್ತು ಚುನಾವಣಾ ಲಾಭ ಮಾಡಿಕೊಳ್ಳುವ ಬಿಜೆಪಿಯ ಹಳೆ ಕಾರ್ಯತಂತ್ರ. ಮೋದಿ ಪ್ರಧಾನಿ ಆದಾಗಿನಿಂದ ಬಿಹಾರದಲ್ಲಿ ಎಷ್ಟು ಕಾರ್ಖಾನೆ ಸ್ಥಾಪಿಸಿದ್ದಾರೆ ಎಂದು ಬಿಜೆಪಿ ಜನರಿಗೆ ಹೇಳಲಿ ಎಂದು ಗುಡುಗಿದ್ದಾರೆ.

# ಥಾಯ್ಲೆಂಡ್ ಪ್ರವಾಸೋದ್ಯಮ ಬ್ರಾಂಡ್ ಅಂಬಾಸಿಡರ್ ಆಗಿ ನಟ ಸೋನು ಸೂದ್

**ಮುಂಬೈ, ನ. 10 :** ಬಾಲಿವುಡ್ ನಟ ಸೋನುಸೂದ್ ಬಗ್ಗೆ ವಿಶೇಷವಾಗಿ ಹೇಳಲು ಏನೂ ಇಲ್ಲ. ಸಿನಿಮಾಗಳಲ್ಲಿ ವಿಲನ್ ಆಗಿ ನಟಿಸುವ ಇವರು ನಿಜ ಜೀವನದಲ್ಲಿ ಅನೇಕರಿಗೆ ಹೀರೋ ಆಗಿದ್ದಾರೆ. ಕರೋನಾ ಸಂಕಷ್ಟದ ಸಮಯದಲ್ಲಿ ಅವರು ಮಾಡಿದ ಕೆಲಸಗಳ ಬಗ್ಗೆ ಎಷ್ಟು ಹೇಳಿದರೂ ಸಾಲದು. ಇಂದಿಗೂ ನಿರ್ಗತಿಕರಿಗೆ ಸಹಾಯ ಮಾಡುತ್ತಿದ್ದಾರೆ. ಇತ್ತೀಚೆಗೆ, ಸೋನು ಸೂದ್ ಅವರನ್ನು ಥೈಲ್ಯಾಂಡ್ ಪ್ರವಾಸೋದ್ಯಮ ಬ್ರಾಂಡ್ ಅಂಬಾಸಿಡರ್ ಮತ್ತು ಸಲಹೆಗಾರರನ್ನಾಗಿ ನೇಮಿಸಲಾಗಿದೆ.



ಈ ವಿಷಯವನ್ನು ಸೋನು ಸೂದ್ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಥೈಲ್ಯಾಂಡ್ ಪ್ರವಾಸೋದ್ಯಮ ಬ್ರಾಂಡ್ ಅಂಬಾಸಿಡರ್ ಮತ್ತು ಸಲಹೆಗಾರರಾಗಿ ನೇಮಕಗೊಂಡಿರುವುದು ನನಗೆ ಬಹಳ ಗೌರವವಾಗಿದೆ ಎಂದು ಅವರು ಹೇಳಿದರು. ಅವರು ತಮ್ಮ ಕುಟುಂಬದೊಂದಿಗೆ ತಮ್ಮ ಮೊದಲ ಅಂತರರಾಷ್ಟ್ರೀಯ ಪ್ರವಾಸಕ್ಕಾಗಿ ಥಾಯ್ಲೆಂಡ್ಗೆ ಹೋಗಿದ್ದಾರೆ ಎಂದು ಹೇಳಿದರು.

ಈಗ ಈ ದೇಶದ ಪ್ರವಾಸೋದ್ಯಮ ಬ್ರಾಂಡ್ ಅಂಬಾಸಿಡರ್ ಆಗಿ ನೇಮಕಗೊಂಡಿರುವುದು ಸಂತಸ ತಂದಿದೆ.

ಥಾಯ್ಲೆಂಡ್ನ ಶ್ರೀಮಂತ ಸಾಂಸ್ಕೃತಿಕ ಪರಂಪರೆ, ಸುಂದರ ಸ್ಥಳಗಳು ಮತ್ತು ಪ್ರಕೃತಿ ಸೌಂದರ್ಯದ ಬಗ್ಗೆ ತಿಳಿಸಲು ಮತ್ತು ಸಲಹೆ ನೀಡಲು ಕಾಯುತ್ತಿದ್ದೇನೆ ಎಂದು ಹೇಳಿದರು.

# ಭಯೋತ್ಪಾದಕರೊಂದಿಗೆ ಗುಂಡಿನ ಚಕಮಕಿ ಗಾಯಗೊಂಡ ಸೇನಾ ಪ್ಯಾರಾಟ್ರೂಪರ್‌ಗಳು

**ಶ್ರೀನಗರ, ನ. 10 :** ಜಮ್ಮು ಮತ್ತು ಕಾಶ್ಮೀರದ ಕಿಶ್ತ್ವಾರ್ನ ಅರಣ್ಯ ಚಾಸ್ ಪ್ರದೇಶದಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಮೂವರು ಭಾರತೀಯ ಸೇನಾ ಪ್ಯಾರಾಟ್ರೂಪರ್‌ಗಳು ಗಾಯಗೊಂಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಶ್ರೀನಗರದ ಹರ್ವಾನ್ ಪ್ರದೇಶದಲ್ಲಿ ಮತ್ತೊಂದು ಎನ್‌ಕೌಂಟರ್ ನಡೆದಿದೆ.




ಇದೇ ಪ್ರದೇಶದಲ್ಲಿ ನ. 18 ರಂದು ಇಬ್ಬರು ವಿಲೇಜ್ ಡಿಫೆನ್ಸ್ ಗಾರ್ಡ್‌ಗಳನ್ನು ಕೊಂದ ಶಂಕಿತ ಗಡಿಯಾಚೆಗಿನ ಭಯೋತ್ಪಾದಕ ಗುಂಪುಗಳ ಸದಸ್ಯರು ಎನ್‌ಕೌಂಟರ್‌ನಲ್ಲಿ ಸಿಕ್ಕಿಬಿದ್ದಿದ್ದಾರೆ ಎಂದು ನಂಬಲಾಗಿದೆ. ಭಾರತೀಯ ಸೇನೆಯು 11 ರಾಷ್ಟ್ರೀಯ ರೈಫಲ್ಸ್ ಜೊತೆಗೆ ಭಯೋತ್ಪಾದಕರ ವಿರುದ್ಧ ಬೃಹತ್ ಕಾರ್ಯಾಚರಣೆಯನ್ನು ಪ್ರಾರಂಭಿಸಿದ ನಂತರ ಗುಂಡಿನ ಚಕಮಕಿ ಪ್ರಾರಂಭವಾಯಿತು.

ಶ್ರೀನಗರದಲ್ಲಿ ಭಯೋತ್ಪಾದಕರ ಉಪಸ್ಥಿತಿಯ ಬಗ್ಗೆ ಮಾಹಿತಿ ಪಡೆದ ನಂತರ ಪ್ರಾರಂಭವಾದ ಕಾರ್ಡನ್ ಮತ್ತು ಸರ್ಚ್ ಕಾರ್ಯಾಚರಣೆಯಲ್ಲಿ ದಚಿಗಮ್ ಮತ್ತು ನಿಶಾತ್ನ ಮೇಲ್ಭಾಗದ ನಡುವಿನ ಅರಣ್ಯ ಪ್ರದೇಶದಲ್ಲಿ ಬೆಳಿಗ್ಗೆ 9 ಗಂಟೆ ಸುಮಾರಿಗೆ ಗುಂಡಿನ ಚಕಮಕಿ ನಡೆಯಿತು. ಇದುವರೆಗೆ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

ಭಯೋತ್ಪಾದಕರ ಉಪಸ್ಥಿತಿಯ ಬಗ್ಗೆ ನಿರ್ದಿಷ್ಟ ಗುಪ್ತಚರ ಆಧಾರದ ಮೇಲೆ ಶ್ರೀನಗರದ ಜಬರ್ವಾನ್ ಅರಣ್ಯ ಪ್ರದೇಶದಲ್ಲಿ ಜಂಟಿ ಪೊಲೀಸ್ ಮತ್ತು ಭದ್ರತಾ ಪಡೆಗಳ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು. ಕಾರ್ಯಾಚರಣೆಯ ಸಮಯದಲ್ಲಿ ಗುಂಡಿನ ಚಕಮಕಿ ನಡೆಯಿತು. ಹೆಚ್ಚಿನ ವಿವರಗಳನ್ನು ನೀಡಲಾಗುವುದು ಎಂದು ಎಂದು ಸೇನೆ ಟ್ವೀಟ್ ಮಾಡಿದೆ. ಜಮ್ಮು ಮತ್ತು ಕಾಶ್ಮೀರವು ಇತ್ತೀಚಿನ ವಾರಗಳಲ್ಲಿ ಅನೇಕ ಗುಂಡಿನ ಚಕಮಕಿಗಳು ಮತ್ತು ಭಯೋತ್ಪಾದಕ ದಾಳಿಗಳಿಗೆ ಸಾಕ್ಷಿಯಾಗಿದೆ, ಇದರ ಪರಿಣಾಮವಾಗಿ ಹಲವಾರು ಭಯೋತ್ಪಾದಕರು ಮತ್ತು ಭದ್ರತಾ ಸಿಬ್ಬಂದಿಗಳು ಸಾವನ್ನಪ್ಪಿದ್ದಾರೆ.

# ದೇಶದ ಭವಿಷ್ಯಕ್ಕೆ ಇತಿಹಾಸ ಬಹಳ ಮುಖ್ಯ : ಸಂಸದ ತೇಜಸ್ವಿ ಸೂರ್ಯ



**ಬೆಂಗಳೂರು, ನ. 10 :** 60 ವರ್ಷದ ಇತಿಹಾಸವುಳ್ಳ ವಕ್ಫ್ ಬೋರ್ಡ್, 1000 ವರ್ಷದ ಇತಿಹಾಸವುಳ್ಳ ನಮ್ಮ ದೇವಲಾಯ, ಕಲ್ಯಾಣಿ, ಪುಷ್ಕರಣಿಗಳನ್ನು ತನ್ನ ವಶಕ್ಕೆ ಪಡೆಯಲು ಹುನ್ನಾರ ನಡೆಸಿರುವುದು ಇತಿಹಾಸದ ದುರಂತಕ್ಕೆ ಸಾಕ್ಷಿ ಎಂದು ಸಂಸದ ತೇಜಸ್ವಿ ಸೂರ್ಯ ಆರೋಪಿಸಿದ್ದಾರೆ. ಡಾ.ವಿಕ್ರಮ್ ಸಂಪತ್ ಅವರ ಟಿಪ್ಪು ಸುಲ್ತಾನ್ ಐತಿಹಾಸಿಕ ಕಾದಂಬರಿ ಬಿಡುಗಡೆ ಮಾಡಿ ಮಾತನಾಡಿದರು. ದೇಶದ ಭವಿಷ್ಯಕ್ಕೆ ಇತಿಹಾಸ ಬಹಳ ಮುಖ್ಯ. ಈ ನಿಟ್ಟಿನಲ್ಲಿ ಇತಿಹಾಸಕಾರರು, ಸಮಾಜ ವಿಜ್ಞಾನದ ಬರಹಗಾರರ ಕೊಡುಗೆ ಅಮೂಲ್ಯವಾಗಿದೆ.

ಸಂಸ್ಕೃತಿ, ಪರಂಪರೆ, ಇತಿಹಾಸದ ಸತ್ಯವನ್ನು ಕತೆ, ಕಾದಂಬರಿಗಳ ಮೂಲಕ ಮುಂದಿನ ಪೀಳಿಗೆಗೆ ಕೊಡುವ ಕೆಲಸ ಅಗತ್ಯವಾಗಿದೆ. ಅಂತಹ ಜವಾಬ್ದಾರಿಯುತ ಕೆಲಸವನ್ನು ವಿಕ್ರಮ ಸಂಪತ್ ಕಳೆದ ಹಲವು ವರ್ಷಗಳಿಂದ ಮಾಡುತ್ತಾ ಬಂದಿದ್ದು, ಅದರ ಭಾಗವಾಗಿ ಸುಮಾರು ಸಾವಿರ ಪುಟದ ಟಿಪ್ಪು ಸುಲ್ತಾನ್ ಕಾದಂಬರಿ ಭಾನುವಾರ ಪ್ರಕಟವಾಗಿದೆ. ಟಿಪ್ಪು ಸುಲ್ತಾನ್ ಇತಿಹಾಸ ನಮಗೆ ಯಾಕೆ ಬೇಕು ಎಂಬ ಪ್ರಶ್ನೆ ಸಹಜವಾಗಿ ಮೂಡಬಹುದು. ಔರಂಗಜೇಬ್ ಮರಣಹೊಂದಿ 400 ವರ್ಷವಾದರೂ ಈಗಲೂ ರೈತರ ಜಮೀನು ವಶಪಡಿಸಿಕೊಳ್ಳುತ್ತಿದ್ದಾನೆಂದು ಹೈದ್ರಾಬಾದ್ ರೈತರು ಸಂಸತ್ತಿನ ಜಂಟಿ ಸಮಿತಿ (ಜೆಪಿಸಿ) ಮುಂದೆ ದೂರು ನೀಡಿದರು.

ವಕ್ಫ್ ವಿವಾದಕ್ಕೆ ಸಂಬಂಧಪಟ್ಟಂತೆ ಇತ್ತೀಚೆಗೆ ರಾಜ್ಯಕ್ಕೆ ಭೇಟಿ ನೀಡಿದ ಜೆಪಿಸಿ ಮುಂದೆ ಹಾವೇರಿಯ ರೈತರೊಬ್ಬರು ತಮ್ಮ ಮಗ ತಮ್ಮ ಜಮೀನಿನಲ್ಲಿ ವಕ್ಫ್ ಹೆಸರು ಉಲ್ಲೇಖಗೊಂಡಿದ್ದರಿಂದ ಸಾಲ, ಸಹಾಯಧನಗಳ ಸೌಲಭ್ಯದಿಂದ ವಂಚಿರಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ದೂರು ನೀಡಿದ್ದಾರೆ. ಆದರೆ ಸರ್ಕಾರ ಮಾತ್ರ ಪೋಷಕರು ಹೇಳಿಕೆಯನ್ನು ಮರೆಮಾಚಿ ಪ್ರತ್ಯೇಕ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಎಫ್ಐಆರ್‌ನಲ್ಲಿ ನಮೂದಿಸಿದೆ. ಇಂತಹ ಸಮಾಜ ವಿರೋಧಿ ಬೆಳವಣಿಗೆಗಳ ಬಗ್ಗೆ, ಇತಿಹಾಸದಲ್ಲಿ ನಡೆದಿರುವ ಅನ್ಯಾಯಗಳ ಬಗ್ಗೆ ಹೊಸ ಪೀಳಿಗೆಗೆ ತಿಳಿಸುವುದಕ್ಕೆ ಐತಿಹಾಸಿಕ ಕಾದಂಬರಿಗಳು ಅವಶ್ಯಕವೆಂದು ತೇಜಸ್ವಿ ಸೂರ್ಯ ಪ್ರತಿಪಾದಿಸಿದರು. ಸಮಾರಂಭದಲ್ಲಿ ನೃತ್ಯನಿರ್ದೇಶಕಿ ಮಧು ನಟರಾಜ್, ಲೇಖಕ ಡಾ.ವಿಕ್ರಮ್ ಸಂಪತ್, ಓಲಾ ಸಂಸ್ಥೆ ಮುಖ್ಯಸ್ಥ ಭಾವೀಶ್ ಅಗರವಾಲ್ ಮತ್ತಿತರರಿದ್ದರು.



ನಗರದಲ್ಲಿ ಭಾನುವಾರ ನಡೆದ ವಿಶ್ವ ಸಾರ್ವಜನಿಕ ಸಾರಿಗೆ ದಿನದ ಸ್ವಚ್ಛತೆ ಮತ್ತು ಹಸಿರು ನಮ್ಮ ಬೆಂಗಳೂರಿಗಾಗಿ ಸಾರ್ವಜನಿಕ ಸಾರಿಗೆಯನ್ನು ಉತ್ತೇಜಿಸಲು ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಭಾಗವಹಿಸಿದ್ದರು.

# ಭ್ರಷ್ಟ ಸರ್ಕಾರದ ವಿರುದ್ಧ ಜನರ ಆಕ್ರೋಶ: ಬಿ.ಎಸ್. ಯಡಿಯೂರಪ್ಪ



**ಬೆಂಗಳೂರು ನ. 10 :** ನಾನು ಶಿಗ್ಗಾಂವಿ, ಚನ್ನಪಟ್ಟಣ ಪ್ರವಾಸ ಮಾಡಿದ್ದೇನೆ. ಅಲ್ಲೆಲ್ಲಾ ಬಿಜೆಪಿ ಅಲೆಯಿದೆ. ಸಿಎಂಗೆ ಸೋಲಿನ ಭಯವುಂಟಾಗಿ ನಾಲ್ಕೈದು ದಿನ ಸಂಡೂರಿನಲ್ಲೇ ಬೀಡುಬಿಟ್ಟಿದ್ದರು. ಎಷ್ಟೇ ಪ್ರಯತ್ನ ಮಾಡಿದರೂ ಈ ಬಾರಿ ಕಾಂಗ್ರೆಸ್‌ಗೆ ಸೋಲು ಖಚಿತ ಎಂದು ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ. ಎಸ್.ಯಡಿಯೂರಪ್ಪ ಹೇಳಿದರು.

ನಗರದ ವಿಮಾನ ನಿಲ್ದಾಣದಲ್ಲಿಂದು ಮಾತನಾಡಿದ ಅವರು, ಭ್ರಷ್ಟ ಸರ್ಕಾರದ ವಿರುದ್ಧ ಜನರು ಆಕ್ರೋಶಗೊಂಡಿದ್ದಾರೆ. ನಿಶ್ಚಿತವಾಗಿ ಮೂರು ಕ್ಷೇತ್ರಗಳಲ್ಲಿ ನಾವು ದೊಡ್ಡ ಅಂತರದಿಂದ ಗೆಲ್ಲುತ್ತೇವೆ. ಭ್ರಷ್ಟಾಚಾರದಲ್ಲಿ ಸಿಲುಕಿದ ಕಾರಣಕ್ಕೆ ಜನ ಹೇಗೆ ತಿರುಗಿ ಬಿದ್ದಿದ್ದಾರೆ ಎನ್ನುವುದು ಫಲಿತಾಂಶ ಬಂದ ನಂತರ ಸಿಎಂಗೆ ಅರ್ಥವಾಗಲಿದೆ ಎಂದರು. ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಮೂರು ಕ್ಷೇತ್ರಗಳಲ್ಲಿ ಸೋಲುವುದು ಖಚಿತವಾಗಿದ್ದರಿಂದ, ಕೋವಿಡ್ ಸಂದರ್ಭದಲ್ಲಿ ಬಿಜೆಪಿ ಹಗರಣ ನಡೆಸಿದೆ ಎಂದು ಆರೋಪ ಮಾಡುತ್ತಿದ್ದಾರೆ. ಫಲಿತಾಂಶದ ನಂತರ ಈ ಎಲ್ಲ ಆರೋಪಗಳಿಗೆ ಉತ್ತರ ಸಿಗಲಿದೆ. ಆಗ ಮುಖ್ಯಮಂತ್ರಿ ಸಿದ್ದರಾಮಯ್ಯ ಯಾವ ಹೇಳಿಕೆ ನೀಡುತ್ತಾರೆ ಎಂದು ನೋಡೋಣ ಎಂದು ಟಾಂಗ್ ನೀಡಿದರು.

ಶಿಗ್ಗಾಂವಿಯಲ್ಲಿ ಸಿಎಂ ಮೂರು, ನಾಲ್ಕು ದಿನ ಇದ್ದು ಪ್ರಚಾರ ನಡೆಸಿದರೂ ನಿರೀಕ್ಷಿತ ಜನ ಬೆಂಬಲ ಸಿಕ್ಕಿಲ್ಲ. ಹಣ ಕೊಟ್ಟು ಬನ್ನಿ ಎಂದರೂ ಜನ ಬರಲಿಲ್ಲ. ಇದರಿಂದ ಹತಾಶರಾಗಿ ಏನೇನೋ ಹೇಳಿಕೆ ನೀಡುತ್ತಿದ್ದಾರೆ. ಅಬಕಾರಿ ಇಲಾಖೆಯೊಂದರಲ್ಲಿಯೇ ಎಷ್ಟು ಲೂಟಿ ಆಗಿದೆ ಎಂದು ಗುತ್ತಿಗೆದಾರರೇ ಹೇಳುತ್ತಿದ್ದಾರೆ ಎಂದು ಟೀಕಿಸಿದರು.

# ಸಚಿವ ಜಮೀರ್ ಅಹಮದ್‌ರನ್ನು ಅಲದಮರಕ್ಕೆ ನೇಣುಹಾಕಿ: ಮುತಾಲಿಕ್



**ಚಿಕ್ಕಮಗಳೂರು, ನ. 10 :** ಸಚಿವ ಜಮೀರ್ ಅಹಮದ್ರನ್ನು ಗಡಿಪಾರು ಮಾಡ್ಬೇಕು, ಸಚಿವ ಸ್ಥಾನದಿದ ಕಿತ್ತಾಕಬೇಕು ಎಂದು ಮಾತಾಡುತ್ತಿದ್ದಾರೆ. ಅದೆಲ್ಲ ಬೇಡ ಯಾವುದಾದರೂ ಆಲದ ಮರಕ್ಕೆ ನೇಣು ಹಾಕಿ ಎಂದು ಶ್ರೀರಾಮ ಸೇನೆಯ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ಕಿಡಿಕಾರಿದ್ದಾರೆ.

ಚಿಕ್ಕಮಗಳೂರಿನಲ್ಲಿ ದತ್ತಮಾಲೆ ಅಭಿಯಾನದ ಧರ್ಮಸಭೆಯಲ್ಲಿ ಅವರು ಮಾತನಾಡಿದ ಅವರು ಬೆಂಗಳೂರಿನ ಚಾಮರಾಜಪೇಟೆಯಲ್ಲಿ 25,000 ಬಾಂಗ್ಲಾದೇಶಿ ಮುಸಲ್ಮಾನರಿದ್ದಾರೆ. ಅವರನ್ನು ಜಮೀರ್ ಸಾಕಿ, ಓಟರ್ ಲಿಸ್ಟ್ ತಯಾರು ಮಾಡಿದ್ದಾನೆ ಎಂದು ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿಯವರು ಜಮೀರ್ ನನ್ನು ಗಡಿಪಾರು, ಕಿತ್ತಾಕಿ, ಸಸ್ಪೆಂಡ್ ಮಾಡಿ ಅಂತಿದ್ದಾರೆ. ಗಡಿಪಾರು, ಸಸ್ಪೆಂಡ್ ಬೇಡ ಯಾವುದಾರೂ ಆಲದಮರಕ್ಕೆ ನೇಣು ಹಾಕಿ. ಜಮೀರ್ ಈ ದೇಶದಲ್ಲಿ ಇರಲು ಲಾಯಕ್ಕಿಲ್ಲ. ಯಾರ ಭೂಮಿ, ಕಟ್ಟಡ ಬೇಕೋ ಅದನ್ನು ತೆಗೆದುಕೊಂಡು ನುಂಗಿ ನೀರು ಕುಡಿಯೋಕೆ ಇದು ನಿಮ್ಮ ಅಪ್ಪಂದ ಎಂದು ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಇಸ್ಲಾಮೀಕರಣದ ಉದ್ದೇಶದಿಂದ ಭೂಮಿ ಕಬಳಿಸಿ, ಮುಸ್ಲಿಂ ಜನಸಂಖ್ಯೆಯನ್ನು ಹೆಚ್ಚಿಸಲು ಪ್ರಯತ್ನಿಸುತ್ತಿದ್ದಾರೆ. ಮುಂದೆ ಕರ್ನಾಟಕದಲ್ಲಿ ಬರೀ ನಮಾಜ್ ಮಾಡುವುದು, ಬುರ್ಖಾ ಹಾಕುವುದೇ ಆಗುತ್ತದೆ. ವಕ್ಫ್ ಆಸ್ತಿ ವಿಷಯವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು. ರಾಜ್ಯದಾದ್ಯಂತ 9. 40 ಲಕ್ಷ ಎಕರೆ ಜಾಗ ವಕ್ಫ್ ಮಂಡಳಿಗೆ ಸೇರಿದೆ. ಹೀಗಾಗಿ ಕೇಂದ್ರ ಸರ್ಕಾರವು ವಕ್ಫ್ ಕಾಯ್ದೆ ತಿದ್ದುಪಡಿ ಪ್ರಕ್ರಿಯೆ ಆರಂಭಿಸಿದೆ. ಅದಕ್ಕೆ ನಮ್ಮ ಸಂಪೂರ್ಣ ಬೆಂಬಲವಿದೆ ಎಂದರು.

# ಝೇಂಕಾರ ಬ್ರ್ಯಾಂಡ್ ಹೆಸರು ಮುನ್ನೆಲೆಗೆ



**ಬೆಂಗಳೂರು, ನ. 10 :** ಕರ್ನಾಟಕದಲ್ಲಿ ಜೇನುತುಪ್ಪವನ್ನು ಜನಪ್ರಿಯಗೊಳಿಸಲು ಹಾಗೂ ಜೇನು ಕೃಷಿಕರ ಆರ್ಥಿಕ ಮಟ್ಟ ಹೆಚ್ಚಿಸಲು ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಜೇನುತುಪ್ಪಕ್ಕೆ ತೋಟಗಾರಿಕೆ ಇಲಾಖೆಯು 'ಝೇಂಕಾರ' ಬ್ರ್ಯಾಂಡ್ ಹೆಸರನ್ನು ಮುನ್ನೆಲೆಗೆ ತಂದಿದೆ.

ಈ ಬ್ರ್ಯಾಂಡ್ ಹೆಸರಿನ ಜತೆಗೆ ಜೀವನೋಲ್ಲಾಸಕ್ಕೆ ಜೇನು ಎಂಬ ಟ್ಯಾಗ್‌ಲೈನ್ ನೀಡಿ ಲೋಗೋ ಮತ್ತು ಪ್ಯಾಕಿಂಗ್ ವಿನ್ಯಾಸ ಅಭಿವೃದ್ಧಿಪಡಿಸಿ ಟ್ರೇಡ್ ಮಾರ್ಕ್ ರಿಜಿಸ್ಟ್ರಿಯಿಂದ ಅಧಿಕೃತ ಅನುಮೋದನೆ ಪಡೆಯಲಾಗಿದೆ. ತೋಟಗಾರಿಕಾ ಇಲಾಖೆಯೇ ಈ ಬ್ರ್ಯಾಂಡ್‌ನ ಮಾಲೀಕತ್ವವನ್ನು ಹೊಂದಿರುತ್ತದೆ.

ಜೇನುತುಪ್ಪ ಉತ್ಪಾದಕರು ಮತ್ತು ಸಂಗ್ರಹಕರು ಷರತ್ತು ಮತ್ತು ನಿಬಂಧನೆಗಳೊಂದಿಗೆ ಸದರಿ ಬ್ರ್ಯಾಂಡ್ ಹೆಸರು ಮತ್ತು ಲೋಗೋ ಬಳಸಿ ತಮ್ಮ ಉತ್ಪನ್ನವನ್ನು ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಇಲಾಖೆಯ ಜಾಲತಾಣ ಅಥವಾ ಅಪರ ನಿರ್ದೇಶಕರು, ತಾಳೆಬೆಳೆ ವಿಭಾಗ, ತೋಟಗಾರಿಕೆ ನಿರ್ದೇಶನಾಲಯ, ಲಾಲ್ಬಾಗ್, ಬೆಂಗಳೂರು ಹಾಗೂ ಜಿಲ್ಲಾ ತೋಟಗಾರಿಕಾ ಉಪ ನಿರ್ದೇಶಕರ ಕಚೇರಿಗಳನ್ನು ಸಂಪರ್ಕಿಸಬಹುದು ಎಂದು ಇಲಾಖಾ ಅಧಿಕಾರಿಗಳು ತಿಳಿಸಿದ್ದಾರೆ.

# ರಾಜಧಾನಿಯಲ್ಲಿ ಕನ್ನಡ ಭಾಷೆ ಬಳಕೆಗೆ ಕಾನೂನು ಜಾರಿ: ಬಿಬಿಎಂಪಿ ಮುಖ್ಯ ಆಡಳಿತಾಧಿಕಾರಿ ಹೇಳಿಕೆ

**ಬೆಂಗಳೂರು, ನ. 10 :** ನಾಮಫಲಕದಲ್ಲಿ ಕಡ್ಡಾಯವಾಗಿ ಕನ್ನಡ ಭಾಷೆ ಬಳಕೆಗೆ ಕಾನೂನು ಜಾರಿಗೆ ತರುವುದಾಗಿ ಬಿಬಿಎಂಪಿ ಮುಖ್ಯ ಆಡಳಿತಾಧಿಕಾರಿ ಎಸ್. ಆರ್.ಉಮಾಶಂಕರ್ ಘೋಷಿಸಿದ್ದಾರೆ. ಬಿಬಿಎಂಪಿ ನೌಕರರ ಕನ್ನಡ ಸಂಘ, ಪಾಲಿಕೆ ಕೇಂದ್ರ ಕಚೇರಿ ಆವರಣದಲ್ಲಿ ಬುಧವಾರ ಆಯೋಜಿಸಲಾಗಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸಾಧಕ–ಸಾಧಕಿಯರಿಗೆ ಪುನೀತ್ ರಾಜ್ಕುಮಾರ್ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು. ಕನ್ನಡಿಗರು ಕಾನೂನು ಕೈಗೆತ್ತಿಕೊಳ್ಳಬಾರದು. ನಮಗೆ ಸಹಕಾರ ನೀಡಬೇಕು. ಮುಂದಿನ ದಿನಗಳಲ್ಲಿ ಅಂಗಡಿ–ಮುಂಗಟ್ಟುಗಳಲ್ಲಿ ಅಳವಡಿಸಿರುವ ಫಲಕಗಳನ್ನು ಕನ್ನಡಕ್ಕೆ ಆದ್ಯತೆ ನೀಡಬೇಕು.

ರಾಜ್ಯದ ಸಂಸ್ಕೃತಿಯನ್ನು ಹಲವು ವಿದೇಶಿಗರು ಹೊಗಳಿದ್ದಾರೆ. ನಗರಕ್ಕೆ ಬರುವ ವಲಸಿಗರು ತಮ್ಮ ಊರಿಗೆ ವಾಪಸ್ಸು ಹೋಗುವುದಿಲ್ಲ. ಅಂತಹ ಉತ್ತಮ ವಾತವರಣವಿದೆ. ಬೆಂಗಳೂರು ಹೆಮ್ಮೆಯ ನಗರವಾಗಿ ಬೆಳೆಯುತ್ತಿದ್ದು, ಇದಕ್ಕೆ ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಪರಿಶ್ರಮವೂ ಸಾಕ್ಷಿದೆ. ಪಾಲಿಕೆಯೂ ಸಹ ಕನ್ನಡ ಸಂಸ್ಕೃತಿ, ಭಾಷೆ ಉಳಿಸುವಿಗೆ ಕೊಡುಗೆ ನೀಡುತ್ತಿದೆ ಎಂದರು.

ಪಾಲಿಕೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಮಾತನಾಡಿ, ಬಿಬಿಎಂಪಿ ಅಧಿಕಾರಿಗಳು, ನೌಕರರು ಒಂದಾಗಿ ಸಿಲಿಕಾನ್ ಸಿಟಿ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಎಲ್ಲರನ್ನು ಪ್ರೀತಿಸುವ ಗುಣವನ್ನು ಕನ್ನಡಿಗರು ಬೆಳೆಸಿಕೊಂಡಿದ್ದಾರೆ. ನಾಡಿನ ಜನರು ನನಗೆ ಹೆಚ್ಚಿನ ಸಹಕಾರ ಕೊಟ್ಟಿದ್ದಾರೆ. ನಾಮಫಲಕದಲ್ಲಿ ಕನ್ನಡ ಭಾಷೆ ಶೇ.60ರಷ್ಟು ಇರಬೇಕು.

ಅದನ್ನು ಸಮರ್ಪಕವಾಗಿ ಜಾರಿಗೆ ತರಲು ಜನರು ಸಹಕಾರ ನೀಡಬೇಕು ಎಂದರು. ವಿಶೇಷ ಆಯುಕ್ತರಾದ ಡಾ.ಕೆ.ಹರೀಶ್ ಕುಮಾರ್, ಅವಿನಾಶ್ ಮೆನನ್ ರಾಜೇಂದ್ರನ್, ಪ್ರಧಾನ ಅಭಿಯಂತರ ಪ್ರಹ್ಲಾದ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂದ ಅಧ್ಯಕ್ಷ ಎ.ಅಮೃತ್ರಾಜ್, ಬೆಂಗಳೂರು ವಕೀಲರ ಸಂದ ಅಧ್ಯ ವಿವೇಕ್ ಸುಬ್ಬಾರೆಡ್ಡಿ ಮತ್ತಿತರರಿದ್ದರು.

# ಕಸ ಸಂಗ್ರಹಕ್ಕೆ ಶುಲ್ಕ: ಸರ್ಕಾರಕ್ಕೆ ಬಿಬಿಎಂಪಿ ಪ್ರಸ್ತಾವ




**ಬೆಂಗಳೂರು, ನ. 10 :** ಬೆಂಗಳೂರು ನಗರದಲ್ಲಿ ಮನೆಯಿಂದ ಕಸ ಸಂಗ್ರಹಣೆ ಮಾಡಲು ಶುಲ್ಕ ನೀಡಬೇಕು. ಹೌದು 2025ರಿಂದ ಈ ಮಾದರಿ ಶುಲ್ಕವನ್ನು ವಸೂಲಿ ಮಾಡಲು ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿ. ಪ್ರಸ್ತಾವನೆ ಸಿದ್ಧಗೊಳಿಸಿದೆ. ಇದರಿಂದಾಗಿ ವಾರ್ಷಿಕ 600 ಕೋಟಿ ರೂ. ಹೆಚ್ಚುವರಿ ಅನುದಾನವನ್ನು ಸಂಗ್ರಹ ಮಾಡುವ ಗುರಿಯನ್ನು ಸಹ ಹಾಕಿಕೊಳ್ಳಲಾಗಿದೆ.

ಇದು ಇನ್ನೂ ಪ್ರಸ್ತಾವನೆ ಹಂತದಲ್ಲಿದ್ದು, ಅಂತಿಮ ಒಪ್ಪಿಗೆ ಸಿಕ್ಕಿಲ್ಲ. ಮನೆಯಿಂದ ಕಸ ಸಂಗ್ರಹ ಮಾಡಲು ಬಳಕೆದಾರರ ಶುಲ್ಕವನ್ನು ವಸೂಲಿ ಮಾಡುವುದು ಪ್ರಸ್ತಾವನೆಯಾಗಿದೆ. 2025–26ನೇ ಆರ್ಥಿಕ ವರ್ಷದಿಂದ ಈ ಮಾದರಿ ಶುಲ್ಕವನ್ನು 46 ಲಕ್ಷ ಮನೆಗಳಿಂದ ಸಂಗ್ರಹ ಮಾಡಲು ಪ್ರಸ್ತಾವನೆ ಸಿದ್ಧಗೊಳಿಸಲಾಗಿದೆ. ಹಲವು ದಿನಗಳಿಂದ ಕೇಳಿ ಬರುತ್ತಿದ್ದ ಈ ಮಾದರಿ ಶುಲ್ಕಕ್ಕೆ ಈಗ ಅಂತಿಮ ರೂಪ ನೀಡಿ ಪ್ರಸ್ತಾವನೆ ತಯಾರು ಮಾಡಲಾಗಿದೆ.

ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿ. ಮನೆಯಿಂದ ಕಸ ಸಂಗ್ರಹ ಮಾಡಲು ಶುಲ್ಕವನ್ನು ಸಂಗ್ರಹ ಮಾಡುವ ಪ್ರಸ್ತಾವನೆ ಸಿದ್ಧಗೊಳಿಸಿ ಸರ್ಕಾರಕ್ಕೆ ಸಲ್ಲಿಕೆ ಮಾಡಿದೆ. ಜನರು ಆಸ್ತಿ ತೆರಿಗೆ ಪಾವತಿ ಮಾಡುವಾಗಲೇ ಕಸ ನಿರ್ವಹಣಾ ಶುಲ್ಕವನ್ನು ಸೇರಿಸಿ ಸಂಗ್ರಹ ಮಾಡುವ ಪ್ರಸ್ತಾವನೆ ಇದಾಗಿದ್ದು, ಸರ್ಕಾರ ಇನ್ನೂ ಅಂತಿಮ ಒಪ್ಪಿಗೆ ನೀಡಿಲ್ಲ.ಎಷ್ಟು ಶುಲ್ಕ ಸಂಗ್ರಹ: ಕಳೆದ ಹಲವು ವರ್ಷಗಳಿಂದ ಕೇಳಿ ಬರುತ್ತಿದ್ದ ಸುದ್ದಿಗಳಿಗೆ ಈಗ ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿ. ಅಂತಿಮ ರೂಪ ನೀಡಿ ಪ್ರಸ್ತಾವನೆ ಸಲ್ಲಿಕೆ ಮಾಡಿದೆ. ನಗರದ ಶಾಸಕರು ಪ್ರತಿ ಮನೆಗೆ 200 ರೂ. ಶುಲ್ಕವನ್ನು ಸಂಗ್ರಹ ಮಾಡಬಹುದು ಎಂದು ಕಳೆದ ವರ್ಷ ಸಲಹೆಗಳನ್ನು ನೀಡಿದ್ದರು.ಈ ಪ್ರಸ್ತಾವನೆಗೆ ಅಂತಿಮ ಒಪ್ಪಿಗೆ ಸಿಗಲಿದೆ ಎಂಬ ನಿರೀಕ್ಷೆಯಲ್ಲಿ ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿ. ಇದೆ. ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಈ ಕುರಿತು ಅಂತಿಮ ತೀರ್ಮಾನವನ್ನು ಕೈಗೊಳ್ಳಬೇಕಿದೆ.

ಕಸ ಸಂಗ್ರಹ ಶುಲ್ಕ ನಿಗದಿಗೆ ಒಟ್ಟು 6 ವಿಭಾಗ ಮಾಡಲಾಗಿದೆ. ಪ್ರತಿ ತಿಂಗಳು 200 ರೂ. ನಿಂದ 400 ರೂ. ತನಕ ಶುಲ್ಕವನ್ನು ಸಂಗ್ರಹ ಮಾಡುವ ಪ್ರಸ್ತಾವನೆ ಇದಾಗಿದೆ. ಆದರೆ ಹೋಟೆಲ್, ವಾಣಿಜ್ಯ ಸಂಕೀರ್ಣ ಇವುಗಳಿಗೆ ಯಾವ ಮಾದರಿಯಲ್ಲಿ ಶುಲ್ಕ ಸಂಗ್ರಹ ಮಾಡಲಾಗುತ್ತದೆ ಎಂಬ ಬಗ್ಗೆ ಇನ್ನೂ ಖಚಿತವಾದ ಮಾಹಿತಿ ಇಲ್ಲ. ಕೇವಲ ಮನೆಯಿಂದ ಶುಲ್ಕ ಸಂಗ್ರಹ ಮಾಡುವ ಪ್ರಸ್ತಾವನೆ ಸಲ್ಲಿಕೆ ಮಾಡಲಾಗಿದೆ.ಬಿಬಿಎಂಪಿ ಕಸ ಸಂಗ್ರಹ ಶುಲ್ಕ ಸಂಗ್ರಹ ಮಾಡಲು ಘನ ತ್ಯಾಜ್ಯ ನಿರ್ವಹಣಾ ಬೈಲಾ 2019, ಬಿಬಿಎಂಪಿ ಕಾಯ್ದೆ 2020ರ ಅಡಿ ಕಾನೂನಿನ ಅಡೆತಡೆಗಳಿವೆ.

ಹಸಿರು ನ್ಯಾಯಾಧೀಕರಣದ ಆದೇಶವನ್ನು ಪಾಲಿಕೆ ಪಾಲನೆ ಮಾಡಬೇಕಿದೆ. ಆದ್ದರಿಂದ ಇದನ್ನು ಆಸ್ತಿ ತೆರಿಗೆ ಜೊತೆಯೇ ಸೇರಿಸಿ ಸಂಗ್ರಹಣೆ ಮಾಡುವ ಬಗ್ಗೆ ಚಿಂತನೆ ನಡೆದಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಒಂದು ವೇಳೆ ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿ. ಮನೆಯಿಂದ ಕಸ ಸಂಗ್ರಹ ಮಾಡಲು ಶುಲ್ಕ ಹಾಕಿದರೆ ನಗರದ ಖಾಲಿ ಸೈಟುಗಳಲ್ಲಿ ಎಲ್ಲೆಂದರಲ್ಲಿ ಜನರು ಕಸವನ್ನು ಎಸೆಯುತ್ತಾರೆ. ಈಗಲೇ ಕಸ ಸಂಗ್ರಹ ಸರಿಯಾದ ಸಮಯಕ್ಕೆ ಆಗುತ್ತಿಲ್ಲ. ಪ್ರತಿ ತಿಂಗಳು ಶುಲ್ಕ ಕಟ್ಟಿಯೂ ಸರಿಯಾಗಿ ಮನೆಗಳಿಂದ ಕಸ ಸಂಗ್ರಹ ಮಾಡದಿದ್ದರೆ ಯಾರು ಹೊಣೆ ಎಂದು ಜನರು ಪ್ರಶ್ನೆ ಮಾಡಿದ್ದಾರೆ.

# ಸಚಿವೆ ಶೋಭಾ ಕರಂದ್ಲಾಜೆ ಟೀಕೆಗೆ ಪ್ರತ್ಯುತ್ತರ: ಎಸ್.ಟಿ.ಸೋಮಶೇಖರ್



**ಬೆಂಗಳೂರು, ನ. 10 :** ಸಿಎಂ ಸಿದ್ದರಾಮಯ್ಯ ಅವರಿಗೆ ರಾತ್ರಿ 10.30ರ ನಂತರ, ಡಿಸಿಎಂ ಡಿ.ಕೆ. ಶಿವಕುಮಾರ್‌ಗೆ ಮಧ್ಯರಾತ್ರಿ ಬಿಜೆಪಿ ಶಾಸಕರು ಟಿಯಾಗುತ್ತಾರೆ. ಸಿಎಂ, ಡಿಸಿಎಂ ಅವರನ್ನು ಯಲಹಂಕ ಶಾಸಕ ಎಸ್.ಆರ್. ವಿಶ್ವನಾಥ್ 15 ನಿಮಿಷ ಹೊಗಳಿ ಮಾತನಾಡಿದ್ದಾರೆ. ಕ್ಷೇತ್ರದ ಅಭಿವೃದ್ಧಿ ಕಾರ್ಯವೋ ಕಮಿಷನ್ ಹೊಡೆಯಲಿಕ್ಕೋ ಎಂದು ಮಾಜಿ ಸಚಿವ, ಬಿಜೆಪಿ ಬಂಡಾಯ ಶಾಸಕ ಎಸ್.ಟಿ. ಸೋಮಶೇಖರ್ ಪ್ರಶ್ನಿಸಿದರು. ಸುದ್ದಿಗಾರರೊಂದಿಗೆ ಶನಿವಾರ ಮಾತನಾಡಿದ ಅವರು, ರಾಜಕೀಯ ಅಧಿಕಾರದ ಆಶ್ರಯ ಹಾಗೂ ಕಮಿಷನ್ ಗಾಗಿ ಎಸ್.ಟಿ. ಸೋಮಶೇಖರ್ ಕಾಂಗ್ರೆಸ್ ನತ್ತ ಹೋಗಿದ್ದಾರೆ ಎಂಬ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಟೀಕೆಗೆ ಪ್ರತ್ಯುತ್ತರವಾಗಿ ಹೀಗೆ ಪ್ರಶ್ನಿಸಿದರು. ಶೋಭಾ ಕರಂದ್ಲಾಜೆಯವರು ಹಿಂದೆ ರಾಜ್ಯದ ಸಚಿವರಾಗಿ ಕೆಲಸ ಮಾಡಿದ್ದಾರೆ. ಕೇಂದ್ರದಲ್ಲಿ ಎರಡನೇ ಬಾರಿ ಮಂತ್ರಿಯಾಗಿದ್ದಾರೆ. ಅವರು ಕಮಿಷನ್ ಹೊಡೆದೇ ಇಲ್ಲವಾ ಕೇಂದ್ರ ಮಂತ್ರಿಯಾಗಿ ಜವಾಬ್ದಾರಿಯಿಂದ ಮಾತನಾಡಬೇಕು. ಕ್ಷೇತ್ರಕ್ಕೆ ಕೇಂದ್ರದ ವಿಶೇಷ ಯೋಜನೆ ತಂದು ಅಭಿವೃದ್ಧಿ ಬಗೆಗಿನ ಬದ್ಧತೆ ತೋರಿಸಬೇಕು ಎಂದು ಒತ್ತಾಯಿಸಿದರು.

ಯಶವಂತಪುರ ವಿಧಾನಸಭೆ ಕ್ಷೇತ್ರದಿಂದ ಉಡುಪಿ–ಚಿಕ್ಕಮಗಳೂರು ಲೋಕಸಭೆ ಕ್ಷೇತ್ರಕ್ಕೆ ಹೋದರು. ಅಲ್ಲಿನ ಜನರು ಛೀಮಾರಿ ಹಾಕಿದ ನಂತರ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರಕ್ಕೆ ಬಂದಿದ್ದಾರೆ. ಕ್ಷೇತ್ರದಿಂದ ಕ್ಷೇತ್ರ ಸುತ್ತಾಡಿದವರು ನನ್ನ ತಾಕತ್ತನ್ನು ಪ್ರಶ್ನಿಸುತ್ತಿದ್ದಾರೆ ಎಂದು ಛೇಡಿಸಿದರು. ಯಶವಂತಪುರ ಕ್ಷೇತ್ರದ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವೆ. ಬೆಂಗಳೂರು ಉತ್ತರ ಲೋಕಸಭಾ ಸದಸ್ಯತ್ವ ರಾಜೀನಾಮೆ ನೀಡಿ ಯಶವಂತಪುರ ಕ್ಷೇತ್ರದಲ್ಲಿ ಸ್ಪರ್ಧಿಸಿ ತಾಕತ್ತು ತೋರಿಸಲಿ ಎಂದು ಎಸ್.ಟಿ. ಸೋಮಶೇಖರ್ ಸೆಡ್ಡು ಹೊಡೆದರು. ಹಿರಿಯರಾದ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಬಗ್ಗೆ ವಿಶೇಷ ಗೌರವವಿದೆ. ಆದರೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಟಾರ್ಗೆಟ್ ಮಾಡಿ ಆರೋಪ ಮಾಡುತ್ತಿದ್ದಾರೆ. ಮತ್ತೊಬ್ಬರತ್ತ ಬೊಟ್ಟು ತೋರಿಸುವ ಮುನ್ನ ಅವರ ಮೊಮ್ಮಕ್ಕಳಿಬ್ಬರು ಹಾಸನದಲ್ಲಿ ಏನು ಮಾಡಿದರೆಂಬುದನ್ನೂ ಹೇಳಲಿ ಎಂದು ಟೀಕಿಸಿದರು.

# ಬೆಂಗಳೂರಿನಲ್ಲಿ 1000 ಮಿ.ಮೀ. ದಾಖಲೆ ಮಂಜು



**ಬೆಂಗಳೂರು, ನ. 10 :** ಬೆಂಗಳೂರು ವ್ಯಾಪ್ತಿಯಲ್ಲಿ ಭಾನುವಾರ ಅತ್ಯಧಿಕ ಮಂಜಿನ ವಾತಾವರಣ ನಿರ್ಮಾಣವಾಗಿದೆ. ಇದು ದೇವನಹಳ್ಳಿಯಲ್ಲಿರುವ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ವಿವಿಧ ವಿಮಾನಗಳ ಹಾರಾಟದ ಮೇಲೆ ಪ್ರಭಾವ ಬೀರಿದೆ. ದೇವನಹಳ್ಳಿ ಸುತ್ತಮುತ್ತಲಿನ ಭಾಗದಲ್ಲಿ ಏರ್‌ಪೋರ್ಟ್ ಗೋಚರವಾಗದಷ್ಟು 50 ರಿಂದ 100 ಮಿಲಿ ಮೀಟರ್ ನಡುವೆ ಮಂಜು ದಾಖಲಾಗಿದೆ ಎಂದು ಐಎಂಡಿ ತಿಳಿಸಿದೆ.

ದೇವನಹಳ್ಳಿ ಏರ್‌ಪೋರ್ಟ್ ಭಾಗದಲ್ಲಿ ಇಂದು ಭಾನುವಾರ ನವೆಂಬರ್ 10ರ ಬೆಳಗ್ಗೆ ದಟ್ಟ ಮಂಜು ಆವರಿಸಿತ್ತು. ಇದರಿಂದ ಹಲವು 10 ವಿಮಾನಗಳ ಪ್ರಯಾಣದಲ್ಲಿ ವಿಳಂಬವಾಗಿದೆ. 06 ವಿಮಾನಗಳು ಬೆಂಗಳೂರಿಗೆ ಬಂದಿಳಿಯದೇ ಬೇರೆ ಮಾರ್ಗಗಳ ಬದಲಾವಣೆಗೊಂಡವು ಎಂದು ಕೆಐಎ ಅಧಿಕಾರಿಗಳು ತಿಳಿಸಿದ್ದಾರೆ. ಮಂಜು ಹೆಚ್ಚಿದ್ದಾಗ ಗೋಚರತೆಯ ಆಧಾರದ ಮೇಲೆ ಮಂಜಿನ ಪ್ರಮಾಣವನ್ನು ವಿಂಗಡಿಸಿ ಹೇಳಲಾಗುತ್ತದೆ. ಕೆಐಎ ಗೋಚರತೆಯು 500 ಮೀ.ಮೀ. ವರೆಗೆ ಬಿದ್ದಾಗ, 200 ಮೀ ವರೆಗೆ ಮಧ್ಯಮ, 50 ಮೀ.ಮೀ.ವರೆಗೆ ದಟ್ಟ ಎಂದು ಹೇಳಲಾಗುತ್ತದೆ. ಭಾನುವಾರ 50ರಿಂದ 1000 ಮೀ.ಮೀ.ವರೆಗೆ ಮಂಜು ದಾಖಲಾಗಿ ವಿಮಾನ ಪ್ರಯಾಣಿಕರಿಗೆ ತೊಂದರೆ ಉಂಟು ಮಾಡಿತು.

ಬೆಂಗಳೂರು ಏರ್‌ಪೋರ್ಟ್‌ನಲ್ಲಿ ಬಿದ್ದ ಈ ಮಂಜನ್ನು ವಿಕಿರಣ ಮಂಜು ಎಂದು ಕರೆಯಲಾಗಿದೆ. ಇದೇ ನವೆಂಬರ್‌ನಿಂದ ಫೆಬ್ರುವರಿವರೆಗೆ ಅಧಿಕ ಚಳಿ ಜೊತೆಗೆ ಮಂಜು ಹೆಚ್ಚಿರಬಹುದು. ನಾಲ್ಕು ತಿಂಗಳುಗಳಲ್ಲಿ ಬೆಳಗ್ಗೆ 3ಗಂಟೆಯಿಂದ 8.30 ಗಂಟೆ ತನಕ ಏರ್‌ಪೋರ್ಟ್‌ನಲ್ಲಿ ಕಡಿಮೆ ಕಳಪೆ ಗೋಚರತೆ ಕಂಡು ಬರಲಿದೆ. ಇದು ಕೆಲವೊಮ್ಮೆ ವಿಮಾನಗಳ ಕಾರ್ಯಾಚರಣೆ ಮೇಲೆ ದುಷ್ಪರಿಣಾಮ ಭೀರುತ್ತದೆ ಎನ್ನಲಾಗಿದೆ.

ಇನ್ನು ಬೆಂಗಳೂರು ಹವಾಮಾನ ಇಲಾಖೆ ಪ್ರಕಾರ, ಭಾನುವಾರ ಬೆಳಗ್ಗೆ 8.30ಕ್ಕೆ ನಗರದಲ್ಲಿ ಕನಿಷ್ಠ ತಾಪಮಾನ 19.4 ಡಿಗ್ರಿ ಸೆಲ್ಸಿಯಸ್‌ಗೆ ಇಳಿಕೆ ಆಗಿದೆ. ಇನ್ನೂ ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಹಾಗೂ ಹೆಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಕನಿಷ್ಠ ತಾಪಮಾನ ಕ್ರಮವಾಗಿ 17.9 ಮತ್ತು 18.2 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ ಎಂದು ವರದಿ ಮಾಹಿತಿ ನೀಡಿದೆ. ಐಎಂಡಿ ಪ್ರಕಾರ ಇಂದು ಅತ್ಯಧಿಕ ಮಂಜು ದಾಖಲಾಗಿದೆ. ಮುಂದಿನ ಐದು ದಿನ ಅಂದರೆ ನವೆಂಬರ್ 15ರವರೆಗೆ ಅತ್ಯಧಿಕ ಬಿಸಿಲು ಹಾಗೂ ಶುಷ್ಕ ವಾತಾವರಣ ನಿರ್ಮಾಣವಾಗಲಿದೆ ಎಂದು ಮುನ್ಸೂಚನೆ ನೀಡಿದೆ.

# ರಾಜ್ಯದ ಹೋಟಲ್‌ಗಳಿಗೆ ಫೋಸ್ಟಾಕ್ ಪ್ರಮಾಣಪತ್ರ ಕಡ್ಡಾಯ




**ಬೆಂಗಳೂರು, ನ. 10 :** ಆಹಾರ ಕಲಬೆರಕೆ ತಡೆಗೆ, ಹೋಟೆಲ್‌ಗಳಲ್ಲಿ ಗುಣಮಟ್ಟ ಆಹಾರ ಲಭ್ಯತೆ ಉದ್ದೇಶದಿಂದ ಆರೋಗ್ಯ ಇಲಾಖೆ ಅಧೀನದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ, ರಾಜ್ಯದ ಎಲ್ಲ ಬಗೆಯ ಹೋಟೆಲ್‌ಗಳು, ಬೇಕರಿಗಳು, ಆನ್‌ಲೈನ್‌ನಲ್ಲಿ ಫುಡ್ ಡೆಲಿವರಿ ಮಾಡುವ ಕಂಪನಿಗಳು ಹಾಗೂ ಪಿಜ್ಜಾ, ಬರ್ಗರ್ ಮಾರಾಟ ಮಾಡುವ ಹೋಟಲ್‌ಗಳು ಆಹಾರ ಸುರಕ್ಷತೆ ತರಬೇತಿ ಮತ್ತು ಪ್ರಮಾಣೀಕರಣ (ಫೋಸ್ಟಾಕ್) ಪತ್ರ ಪಡೆಯುವುದು ಕಡ್ಡಾಯಗೊಳಿಸಿದೆ.

ರಾಜ್ಯದಲ್ಲಿ 6 ಲಕ್ಕೂ ಅಧಿಕ ಆಹಾರ ಉದ್ದಿಮೆಗಳಿಗೆ ಪರವಾನಗಿ ನೀಡಲಾಗಿದೆ. ಅಂದಾಜು 14 ಲಕ್ಷ ಆಹಾರ ಉದ್ದಿಮೆಗಳು ಪ್ರಾಧಿಕಾರದಲ್ಲಿ ನೊಂದಾಣಿ ಮಾಡಿಕೊಂಡಿವೆ. ಸಾರ್ವಜನಿಕರಿಗೆ ಗುಣಮಟ್ಟ ಆಹಾರ ಒದಗಿಸುವುದು ಆಹಾರ ಉದ್ದಿಮೆಗಳ ಕರ್ತವ್ಯ. ಆದರೆ, ಬಹುತೇಕ ಹೋಟೆಲ್, ರಸ್ತೆಬದಿಯಲ್ಲಿ ಮಾರಾಟ ಮಾಡುವವರು ಆಹಾರ, ಸಿಹಿ, ಖಾರ ತಿನಿಸು, ಕರಿದ ಪದಾರ್ಥಗಳಲ್ಲಿ ರುಚಿ ಹೆಚ್ಚಿಸಲು, ಬಣ್ಣದಿಂದ ಆಕರ್ಷಿಸಲು ಅಪಾಯಕಾರಿ ರಾಸಾಯನಿಕ ಅಂಶ ಬಳಸಿ ಕಲಬೆರಕೆ ಆಹಾರ ಮಾರಾಟ ಮಾಡುತ್ತಿದ್ದಾರೆ. ಕಲಬೆರಕೆ ಆಹಾರ ಮತ್ತು ಗಂಭೀರ ರೋಗಗಳ ಪ್ರಮಾಣ ತಡೆಯುವ ಉದ್ದೇಶದಿಂದ ಪ್ರಾಧಿಕಾರವೂ, ಕಾನೂನಿನ ಅನ್ವಯ ಪ್ರತಿ ಆಹಾರ ಉದ್ಯಮಗಳು ಫೋಸ್ಟಾಕ್ ಪಡೆಯವಂತೆ ನಿಯಮ ಜಾರಿಗೆ ತಂದಿದೆ.

ಕಾಯ್ದೆ ಅನ್ವಯ 2006ರಿಂದ ಎಲ್ಲ ಆಹಾರ ಉದ್ದಿಮೆದಾರರು ಫೋಸ್ಟಾಕ್ ಪ್ರಮಾಣಪತ್ರ ಪಡೆಯುವುದು ಕಡ್ಡಾಯವಾಗಿದೆ. ಈ ಬಗ್ಗೆ 2017ರಲ್ಲಿ ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ.

ರಸ್ತೆ ಬದಿ ಹೋಟೆಲ್ ನಡೆಸುತ್ತಿರುವವರು ಸೇರಿ ಎಲ್ಲ ಬಗೆಯ ಹೋಟೆಲ್ ಮಾಲೀಕರು ಕಡ್ಡಾಯವಾಗಿ ಆಹಾರ ವ್ಯಾಪಾರ ನಿರ್ವಾಹಕರಿಗೆ ಫೋಸ್ಟಾಕ್ ಪತ್ರ ಪಡೆಯಬೇಕು. ಪ್ರತಿ ಆಹಾರ ವ್ಯಾಪಾರದ ಕಾರ್ಯಾಚರಣಾ ಆವರಣದ ಆಹಾರ ವಿತರಣೆಯಲ್ಲಿ ಎಲ್ಲ ಅಥವಾ ಕನಿಷ್ಠ 5 ಆಹಾರ ನಿರ್ವಾಹಕರು ಕಡ್ಡಾಯವಾಗಿ ತರಬೇತಿ ಪಡೆಯಬೇಕು.

ಪರವಾನಗಿ ಅಥವಾ ನೋಂದಣಿ ಸಂದರ್ಭದಲ್ಲಿ ಫೋಸ್ಟಾಕ್ ಪ್ರಮಾಣ ಪತ್ರವನ್ನು ಅಗತ್ಯ ದಾಖಲೆ ಎಂದು ಪರಿಗಣಿಸಲಾಗಿದೆ. ಪ್ರಮಾಣ ಪತ್ರ ನೀಡುವ ಮುನ್ನ ನಿಗದಿತ ಶುಲ್ಕ ಕಟ್ಟಿಸಿಕೊಂಡು ಕೇಂದ್ರ ಸರ್ಕಾರದ ನೋಂದಾಯಿತ ತರಬೇತಿದಾರರಿಂದ ಒಂದು ದಿನ ಗುಣಟಮಟ್ಟ ಆಹಾರ ಕುರಿತು ಸೂಕ್ತ ತರಬೇತಿ ನಡೆಸಲಾಗುತ್ತದೆ.

ಇದಾದ ಬಳಿಕ ಪರೀಕ್ಷೆ ನಡೆಸಿ ವಾರದೊಳಗೆ ಫೋಸ್ಟಾಕ್ ಪ್ರಮಾಣ ಪತ್ರ ನೀಡಲಾಗುತ್ತದೆ. ಆಯಾ ಜಿಲ್ಲೆಯ ಜಿಲ್ಲಾಧಿಕಾರಿ, ಇಲಾಖೆಗಳ ಆಯುಕ್ತರು, ಆಹಾರ ಸುರತಾಧಿಕಾರಿಗಳು ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಫೋಸ್ಟಾಕ್ ಪ್ರಮಾಣೀಕರಣ ಕಡ್ಡಾಯವಾಗಿ ಜಾರಿಗೊಳಿಸಲಾಗಿದೆ.

ಸೂಕ್ತ ತರಬೇತಿ ಪಡೆದ ನಂತರ ವ್ಯಾಪಾರ ನಡೆಸುವ ಸ್ಥಳಗಳಲ್ಲಿ ಪ್ರಮಾಣಪತ್ರವನ್ನು ಪ್ರದರ್ಶಿಸುವಂತೆ ನೋಡಿಕೊಳ್ಳಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಗ್ಲೋಬಲ್ ಇನ್ಸ್ಟಿಟ್ಯೂಟ್ ಫಾರ್ ಎಜುಕೇಶನ್ ಬೆಂಗಳೂರು ಸಂಸ್ಥೆಯನ್ನು ಅಧಿಕೃತ ಮತ್ತು ಪ್ರಮಾಣೀಕೃತವಾಗಿ ಫೋಸ್ಟಾಕ್ ಸೇವಾ ಪೂರೈಕೆದಾರೆಂದು ಗುರುತಿಸಲಾಗಿದೆ.



ಶಿಗ್ಗಾವಿ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಅಹಮದ್ ಖಾನ್ ಪರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾನುವಾರ ಸವಣೂರಿನಲ್ಲಿ ಪ್ರಚಾರ ನಡೆಸಿದರು.

# ಸಿದ್ದರಾಮಯ್ಯ ಮುಸ್ಲಿಮರಾಗಿ ಹುಟ್ಟುತ್ತಾರಂತೆ, ಅದಕ್ಕೆ ವಕ್ಫ್ ಆಸ್ತಿ ಕೊಡ್ತಾ ಇದ್ದಾರೆ: ಯತ್ನಾಳ್ ಟಾಂಗ್



**ಹಾವೇರಿ, ನ.10–** ಸಿಎಂ ಸಿದ್ದರಾಮಯ್ಯ ಅವರು ಮುಂದಿನ ಜನ್ಮದಲ್ಲಿ ಮುಸ್ಲಿಮರಾಗಿ ಹುಟ್ಟುವುದಾಗಿ ಹೇಳಿಕೊಳ್ಳುತ್ತಿದ್ದಾರೆ. ಅದಕ್ಕೆ ಈಗಲೇ ಮುಸ್ಲಿಮರಿಗೆ ಯಾರದೋ ಆಸ್ತಿಯನ್ನು ವಕ್ಫ್ ಹೆಸರಿಗೆ ಬರೆದು, ಅದನ್ನು ಮುಸ್ಲಿಮರಿಗೆ ಕೊಟ್ಟು ಈಗಲೇ ತಮ್ಮ ಮತಬ್ಯಾಂಕ್ ಗಟ್ಟಿಗೊಳಿಸಿಕೊಳ್ಳುತ್ತಿದ್ದಾರೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಲ್ ಸಿಎಂ ಗೆ ಟಾಂಗ್ ನೀಡಿದರು.

ರಾಜ್ಯದಲ್ಲಿ ಲೋಕಸಭಾ ಚುನಾವಣೆ ಬಳಿಕ ಇದೀಗ ಮೂರು ಕ್ಷೇತ್ರಗಳಿಗೆ ಉಪಚುನಾವಣೆ ಎದುರಾಗಿದೆ. ಸಂಡೂರು, ಶಿಗ್ಗಾವಿ ಹಾಗೂ ಚನ್ನಪಟ್ಟಣ ಕ್ಷೇತ್ರಗಳಿಗೆ ಚುನಾವಣೆ ಎದುರಾಗಿದೆ. ಅದರಲ್ಲೂ ವಿಶೇಷವಾಗಿ ಶಿಗ್ಗಾವಿಯಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರ ಪುತ್ರ ಭರತ್ ಬೊಮ್ಮಾಯಿ ಹಾಗೂ ಕಾಂಗ್ರೆಸ್‌ನಿಂದ ಯಾಸಿರ್ ಖಾನ್ ಪಠಾಣ್ ಕಣದಲ್ಲಿದ್ದಾರೆ. ತೀವ್ರ ಜಿದ್ದಾಜಿದ್ದಿನಿಂದ ಕೂಡಿರುವ ಕ್ಷೇತ್ರಕ್ಕೆ ಇಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಎಂಟ್ರಿಯಾಗಿದ್ದಾರೆ.

ನಿನ್ನೆಯವರೆಗೂ ವಿಜಯಪುರ ದಲ್ಲಿ ವಕ್ಫ್ ಬೋರ್ಡ್ ವಿರುದ್ಧದ ಪ್ರತಿಭಟನೆಯಲ್ಲಿದ್ದ ಶಾಸಕ ಯತ್ನಾಳ್ ಅವರು ಇಂದು ಚುನಾವಣೆಯ ಪ್ರಚಾರದ ಕೊನೆಯ ಗಳಿಗೆಯಲ್ಲಿ ಆಖಾಡಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಶಿಗ್ಗಾವಿ ತಾಲ್ಲೂಕಿನ ಎನ್‌ಎಂ ತಡಸ ಗ್ರಾಮದಲ್ಲಿ ಭರತ್ ಬೊಮ್ಮಾಯಿ ಪರ ಮತಯಾಚನೆ ಮಾಡಿದ ಅವರು, ಕಾಂಗ್ರೆಸ್ ಹಾಗೂ ಸಿಎಂ ಸಿದ್ದರಾಮಯ್ಯ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಹಿಂದೂಗಳೆಲ್ಲ ಜಾತಿ ಮಾಡುತ್ತ ಕುಳಿತರೆ ನಿಮ್ಮ ಆಸ್ತಿ ವಕ್ಫ್ ಆಸ್ತಿಯಾಗುತ್ತದೆ. ನೀವು ನಿಮ್ಮ ಮಕ್ಕಳು ಬೀದಿಪಾಲಾಗುತ್ತೀರಿ. ಆದ್ದರಿಂದ ಹಿಂದೂಗಳೆಲ್ಲ ಒಟ್ಟಾಗಿ ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿಗೆ ಮತ ನೀಡಿ. ನಮ್ಮ ಪಂಚಮಸಾಲಿ ಸಮುದಾಯಕ್ಕೆ ಬಸವರಾಜ ಬೊಮ್ಮಾಯಿ 2 ಡಿ ಮೀಸಲಾತಿ ಕೊಟ್ಟಿದ್ದಾರೆ. ಸಿದ್ದ ರಾಮಯ್ಯ ಅವರು ಅದನ್ನು ಜಾರಿ ಮಾಡುತ್ತಿಲ್ಲ, ಮೀಸಲಾತಿ ನೀಡುವಂತೆ ನಾವು ಡಿಸೆಂಬರ್‌ನಲ್ಲಿ ವಿಧಾನಸೌಧಕ್ಕೆ ಟ್ರ್ಯಾಕ್ಟರ್ ಸಮೇತ ಮುತ್ತಿಗೆ ಹಾಕುತ್ತೇವೆ.

ತಾತ್ಕಾಲಿಕ ಸುಖಕ್ಕೆ ಕಾಂಗ್ರೆಸ್ ಗ್ಯಾರಂಟಿಗಳನ್ನು ನಂಬಿ ಅವರಿಗೆ ಮತ ಹಾಕಿದರೆ, ಮುಂದೆ ಸಾಬರ ಕೈಯಲ್ಲಿ ಕಕೂಲಿ 'ಲಸಕ್ಕೆ ಹೋಗಬೇಕಾಗುತ್ತದೆ. ಸಿದ್ದರಾಮಯ್ಯ ಮುಂದಿನ ಜನ್ಮದಲ್ಲಿ ಮುಸ್ಲಿಮರಾಗಿ ಹುಟ್ಟುತ್ತಾರಂತೆ ಅದಕ್ಕಾಗಿ ಈಗಲೇ ಎಲ್ಲ ಆಸ್ತಿಯನ್ನು ವಕ್ಫ್ ಆಸ್ತಿ ಮಾಡುತ್ತಿದ್ದಾರೆ. ಆದ್ದರಿಂದ ಕಾಂಗ್ರೆಸ್ ಬಗ್ಗೆ ಎಚ್ಚರಿಕೆ ವಹಿಸಬೇಕು ಎಂದು ವಾಗ್ದಾಳಿ ನಡೆಸಿದರು.

ಹಾಲುಮತ ಸಮಾಜದಲ್ಲಿ ಹುಟ್ಟಿದ ಸಿದ್ದರಾಮಯ್ಯ ಆ ಸಮುದಾಯಕ್ಕೆ ಕಳಂಕ ತರುತ್ತಿದ್ದಾರೆ. ಅನೇಕ ಗ್ರಾಮಗಳಲ್ಲಿ ಬೀರಲಿಂಗೇಶ್ವರ ದೇವಸ್ಥಾನ ಮತ್ತು ದೇವಸ್ಥಾನದ ಹೊಲಗಳನ್ನು ವಕ್ಫ್ ಎಂದು ಬರೆಯಿಸಿ ಹಾಲುಮತದ ದೇವರನ್ನೂ ಬೀದಿಗೆ ಎಸೆಯುತ್ತಿದ್ದಾರೆ ಎಂದು ಆರೋಪಿಸಿದ ಯತ್ನಾಳ್ ಎಲ್ಲಾ ಹಿಂದೂಗಳು ಮತದಾನ ಮಾಡಿ ಎಂದು ಮನವಿ ಮಾಡಿದರು.

# ಪರಶುರಾಮನ ನಕಲಿ ಮೂರ್ತಿ ಆರೋಪದ ಪ್ರಕರಣ: ಶಿಲ್ಪಿ ಕೃಷ್ಣ ನಾಯ್ಕ ಬಂಧನ



**ಕಾರ್ಕಳ, ನ.10–** ಬೈಲೂರಿನ ಪರಶುರಾಮ ಥೀಮ್ ಪರಶುರಾಮನ ನಕಲಿ ಮೂರ್ತಿ ನಿರ್ಮಿಸಲಾಗಿದೆ ಎಂಬ ಆರೋಪದ ಪ್ರಕರಣಕ್ಕೆ ಸಂಬಂಧಿಸಿ ಶಿಲ್ಪಿ ಕೃಷ್ಣ ನಾಯ್ಕ ಅವರನ್ನು ಕೇರಳದಲ್ಲಿ ಪೊಲೀಸರು ಬಂಧಿಸಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಿಸಿ ದಂತೆ ಕೃಷ್ಣ ನಾಯ್ಕ್ ಕೋರ್ಟ್‌ನಲ್ಲಿ ನಿರೀಕ್ಷಣ ಜಾಮೀನು ಅರ್ಜಿ ಸಲ್ಲಿಸಿದ್ದರು. ಉಡುಪಿ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಗುರುವಾರ (ಜಾಮೀನು ತಿರಸ್ಕರಿಸಿ ಆದೇಶ ನೀಡಿತ್ತು. ಅನಂತರ ಪೊಲೀಸರು ಪತ್ತೆ ಕಾರ್ಯ ತೀವ್ರ ಗೊಳಿಸಿ ಹುಡುಕಾಟ ನಡೆಸಿದ್ದರು.

ಕೇರಳದ ಕಲ್ಲಿಕೋಟೆಯಲ್ಲಿ ತಲೆಮರೆಸಿಕೊಂಡಿದ್ದ ಕೃಷ್ಣ ನಾಯ್ಕ್ ಅವರನ್ನು ಪೊಲೀಸರು ಪತ್ತೆ ಮಾಡಿ ಬಂಧಿಸಲು ಯಶಸ್ವಿ ಯಾಗಿದ್ದಾರೆ. ಕೃಷ್ಣ ನಾಯ್ಕ್ 'ಕೃಷ್ ಆರ್ಟ್ ವರ್ಲ್ಡ್' ಎಂಬ ಸಂಸ್ಥೆಯ ಮೂಲಕ ಥೀಮ್ ಪಾರ್ಕ್‌ನಲ್ಲಿ ಕಂಚಿನ ಪರಶುರಾಮ ಮೂರ್ತಿಯನ್ನು ಸ್ಥಾಪಿಸಲು ಉಡುಪಿ ನಿರ್ಮಿತ ಕೇಂದ್ರದಿಂದ 1.25 ಕೋಟಿ ರೂ. ಹಣ ಪಡೆದುಕೊಂಡು ಕಾಮಗಾರಿ ನಡೆಸಿದ್ದು, ಅನಂತರ ಆರೋಪಿ ಕಂಚಿನ ಮೂರ್ತಿ ಯನ್ನು ಮಾಡದೆ ನಕಲಿ ಪರಶು ರಾಮ ಮೂರ್ತಿ ಯನ್ನು ನಿರ್ಮಿಸಿ ಸರಕಾರಕ್ಕೆ ವಂಚನೆ ಮಾಡಿರುವುದಾಗಿ ಆರೋಪಿಸಿ ನಲ್ಲೂರಿನ ಕೃಷ್ಣ ಶೆಟ್ಟಿ ಅವರು ಜೂನ್ ತಿಂಗಳಲ್ಲಿ ನೀಡಿದ ದೂರಿನಂತೆ ಕಾರ್ಕಳ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

# ಕಾಂಗ್ರೆಸ್‌ನವರದ್ದು ಹಾವು ತೋರಿಸಿ ಹೆದರಿಸುವ ಕೆಲಸ: ರಾಜುಗೌಡ ಕಿಡಿ



**ಹುಬ್ಬಳ್ಳಿ, ನ.10–** ಕೋವಿಡ್ ಸಮಯದಲ್ಲಿ ಮಾಜಿ ಸಿಎಂ ಯಡಿಯೂರಪ್ಪರು ಒಳ್ಳೆಯ ಕೆಲಸ ಮಾಡುವ ಮೂಲಕ ರಾಜ್ಯದ ಜನರ ಜೀವರಕ್ಷಣೆ ಮಾಡಿದ್ದಾರೆ. ಅವರು ಮುಖ್ಯಮಂತ್ರಿಯಾಗಿ ಇಲ್ಲದಿದ್ದರೆ ಯಾವ ಪರಿಸ್ಥಿತಿ ಬರುತ್ತಿತ್ತು. ಈಗ ಕಾಂಗ್ರೆಸ್‌ನವರು ಹಾವು ತೋರಿಸಿ ಹೆದರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಮಾಜಿ ಶಾಸಕ ರಾಜುಗೌಡ ಕುಟುಕಿದರು.

ಯಡಿಯೂರಪ್ಪ ಮತ್ತು ರಾಮುಲು ಮೇಲೆ ಕ್ರಿಮಿನಲ್ ಕೇಸ್ ವಿಚಾರವಾಗಿ ರವಿವಾರ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಬಹಳಷ್ಟು ದಿನದಿಂದ ಈ ಬೆದರಿಕೆ ಹಾಕುತ್ತಿದ್ದಾರೆ. ಕಾಂಗ್ರೆಸ್ ನವರದ್ದೆ ಸಾಕಷ್ಟು ಹಗರಣಗಳಿವೆ. ಅವರ ಕಾಟಕ್ಕೆ ಸಾಕಷ್ಟು ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಈ ರೀತಿ ಬೆದರಿಕೆ ಹಾಕಿದರೆ ಬಿಜೆಪಿ ನಾಯಕರು ಸುಮ್ಮನಾಗುತ್ತಾರೆಂದು ತಿಳಿದಿದ್ದಾರೆ ಎಂದು ಹರಿಹಾಯ್ದರು.

ಕೋವಿಡ್ ವೇಳೆ ಹಗರಣ ವಾಗಿದ್ದರೆ ಇಷ್ಟು ದಿನ ಯಾಕೆ ಸುಮ್ಮನೆ ಕುಳಿತಿದ್ದರು. ಅವರು ಅಧಿಕಾರಕ್ಕೆ ಬಂದು ಎಷ್ಟು ದಿನ ಆಯ್ತು. ಅವರದು ಸಂತೆಗಳಲ್ಲಿ ಹಾವಾಡಿಸುವಂತಾಗಿದೆ. ಹಾವು ತೋರಿಸುತ್ತೇನೆ ಎನ್ನುತ್ತಲೇ ಕೊನೆ ವರೆಗೂ ತೋರಿಸುತ್ತಿರಲಿಲ್ಲ ಹಾಗಾಗಿದೆ ಅವರ ಸ್ಥಿತಿ. ನಿಮ್ಮ ಕೈ ಯಾರು ಕಟ್ಟಿ ಹಾಕಿರುವುದು. ವಾಲ್ಮೀಕಿ ಹಗರಣದಲ್ಲಿ ಮುಖ್ಯಮಂತ್ರಿ 187ಕೋಟಿ ಅಲ್ಲಾ 87 ಕೋಟಿ ಅಂತ ಒಪ್ಪಿಕೊಂಡಿದ್ದಾರೆ. ಅವರ ಹಗರಣಗಳು ಬಹಳ ಷ್ಟಿವೆ ಬಿಜೆಪಿದೇನು ಇಲ್ಲ ಲಾಕ್ಡೌನ್ ನಲ್ಲಿ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಯಾವ ಬಿಲ್ ಪೆಂಡಿಂಗ್ ಇಟ್ಟಿರಲಿಲ್ಲ. ಈಗ ಯಾವ ಕೆಲಸವೂ ಆಗುತ್ತಿಲ್ಲ, ಎಲ್ಲಾ ಬಿಲ್ ಪೆಂಡಿಂಗ್ ಇದೆ ಎಂದರು.ವಕ್ಫ್ ನಮ್ಮ ಜಿಲ್ಲೆ ಮಾತ್ರವಲ್ಲ ಎಲ್ಲಾ ಕಡೆಗಳಲ್ಲೂ ಆಗಿದೆ. ನೋಟಿಸ್ ವಾಪಸ್ಸು ಪಡೆದಿದ್ದೇವೆ ಎನ್ನುತ್ತಾರೆ. ಆದರೆ ವಕ್ಫ್ ಎಂದು ಬಂದಮೇಲೆ ಯಾರು ಆ ಜಾಗ ಕೊಂಡುಕೊಳ್ಳುತ್ತಾರೆ ಸಿಎಂ, ಡಿಸಿಎಂ ಆದೇಶ ಮಾಡಿದರೆ ಅಧಿಕಾರಿಗಳು ಗಮನ ಹರಿಸಬೇಕು. ರಾಜಕಾರಣಿಗಳು ಅಧಿಕಾರಿಗಳಿಗೆ ಬಹಳವಾದರೆ ವರ್ಗಾವಣೆ ಮಾಡಬಹುದು ಅಷ್ಟೇ ಎಂದರು.

ಬಿಜೆಪಿಯಲ್ಲಿ ಬಣಗಳ ವಿಚಾರ ವಾಗಿ ಪ್ರತಿಕ್ರಿಯಿಸಿ, ನಮ್ಮದು ಒಬ್ಬರ ಪಕ್ಷ ಅಲ್ಲ. ಪ್ರಜಾಪ್ರಭುತ್ವ ನಂಬಿದ ಪಕ್ಷ. ಹೀಗಾಗಿ ನಾವು ನಮ್ಮ ನಾಯಕರ ಕಾಲು ನಾವೇ ಎಳಿಯುತ್ತೇವೆ. ಆದರೆ, ಕಾಂಗ್ರೆಸ್‌ನವರು ಒಬ್ಬರ ಹಿಡಿತದಲ್ಲಿದ್ದಾರೆ ಎಂದು ಕುಟುಕಿದರು. ಅಬಕಾರಿ ಇಲಾಖೆ ಹಗರಣ ವಿಚಾರ ವಾಗಿ ಪ್ರತಿಕ್ರಿಯಿ ಸುತ್ತ, ಒಂದೊಂದು ವೈನ್ ಶಾಪ್ ಇಷ್ಟು ಹಣ ಕೊಡಲೇ ಬೇಕು ಅಂದಾಗ ಅವರು ಎಲ್ಲಿಂದ ಕೊಡುತ್ತಾರೆ. ಕೊಡದಿದ್ದರೆ ವೈನ್ ಶಾಪ್ ಮೇಲೆ ದಾಳಿ ಮಾಡುತ್ತಾರೆ. ನಮಗೆ ದುಡ್ಡು ಬೇಕೇ ಬೇಕೆಂದು ಟಾರ್ಗೆಟ್ ಫಿಕ್ಸ್ ಮಾಡು ತ್ತಾರೆ. ಹೀಗೆ ಬಹಳಷ್ಟು ಜನರಿಗೆ ಕಿರುಕುಳ ಕೊಡುತ್ತಿದ್ದಾರೆ. ಶಿಗ್ಗಾವಿ ಕ್ಷೇತ್ರದ ಉಪ ಚುನಾವಣೆಗಾಗಿ ಕಾಂಗ್ರೆಸ್ ಸರ್ಕಾರವೇ ಇಲ್ಲಿ ಬಂದು ಕುಳಿತಿದೆ. ಒಂದು ಪಂಚಾಯತಿಗೆ ಒಬ್ಬ ಸಚಿವ, ಶಾಸಕ ಬಂದು ಕುಳಿತಿದ್ದಾರೆ. ಪಂಚಾಯಿತಿಗೆ ಅಲ್ಲ. ಮನೆಗೆ ಒಬ್ಬ ಮಿನಿಸ್ಟರ್ ಕೂತರು ಭರತ್ ಬೊಮ್ಮಾಯಿ ಗೆಲ್ಲುತ್ತಾರೆ. ಕಾಂಗ್ರೆಸ್‌ನವರು ಹಣದ ಹೊಳೆ ಹರಿಸುತ್ತಿದ್ದಾರೆ. ಏನೇ ಹರಸಿದರೂ ಬಿಜೆಪಿ ಗೆಲುವು ತಡೆಯಲು ಸಾಧ್ಯವಿಲ್ಲ ಎಂದರು.

# ವಕ್ಫ್ ಆಸ್ತಿ: ಹಾಲಿ–ಮಾಜಿ ಸಿಎಂಗಳ ಮಧ್ಯೆ ಜಟಾಪಟಿ



**ಹುಬ್ಬಳ್ಳಿ, ನ.10–** ಉಪ ಚುನಾವಣೆಗೆ ದಿನಗಳು ಸಮೀಪಿಸುತ್ತಿದೆ. ಈ ನಡುವೆ ಶಿಗ್ಗಾವಿ ಬಿಜೆಪಿ ಹಾಗೂ ಕಾಂಗ್ರೆಸ್‌ಗೆ ಪ್ರತಿಷ್ಠೆಯ ಕಣವಾಗಿ ಬದಲಾಗುತ್ತಿದೆ. ಹಾಲಿ ಸಿಎಂ ಹಾಗೂ ಮಾಜಿ ಸಿಎಂಗಳ ಮಧ್ಯೆ ಕಣದಲ್ಲಿ ಆರೋಪ, ಪ್ರತ್ಯಾರೋಪಗಳ ಸುರಿಮಳೆ ಕೇಳಿ ಬಂದಿತ್ತು. ವಕ್ಫ್ ಆಸ್ತಿ ವಿಚಾರ ಸದ್ದಿನ ನಡುವೆ, ಕ್ಷೇತ್ರದಲ್ಲಿ ಕಾಂಗ್ರೆಸ್ ಹಣ ಹಂಚಿಕೆಗೆ ಬಗ್ಗೆ ಮಾತನಾಡಿದ್ದ ಸಂಸದ ಬಸವರಾಜ ಬೊಮ್ಮಾಯಿ ಹಾಗೂ ಕಾಂಗ್ರೆಸ್ ಸರ್ಕಾರದ ಮಧ್ಯೆ ನೇರ ಪೈಪೋಟಿ ಉಂಟಾಗಿದೆ.

ಉಪ ಚುನಾವಣೆ ಬಿಜೆಪಿ ವರ್ಸಸ್ ಬೊಮ್ಮಾಯಿ, ಸರ್ಕಾರದಿಂದ ಲೂಟಿ ಮಾಡಿದ ಹಣವನ್ನು ಇಲ್ಲಿ ಹಂಚುತ್ತಿದ್ದಾರೆ. ಹಾನಗಲ್ ರೈತ ಆತ್ಮಹತ್ಯೆ ಮಾಡಿಕೊಂಡುವುದನ್ನು ಬಿಜೆಪಿ ರಾಜಕಾರಣ ಮಾಡುತ್ತಿದೆ. ಹೀಗೆಂದು ಕಾಂಗ್ರೆಸ್ ಆರೋಪಿಸಿದ್ದಕ್ಕೆ ಬೊಮ್ಮಾಯಿ ಅವರು ಪ್ರತಿಕ್ರಿಯಿಸಿದರು.

ರೈತನ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದೆ. ಅದನ್ನು ತೆಗೆಸಲು ಆ ರೈತ ನಾಲ್ಕರಿಂದ ಐದು ವರ್ಷ ಅಲೆದಾಡಬೇಕಾಗುತ್ತದೆ. ಹೋದರೂ ಅಲ್ಲಿ ನ್ಯಾಯ ಸಿಗುವುದಿಲ್ಲ ಎಂದು ಗೊತ್ತಾಗಿ ರೈತ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಅವರ ಕುಟುಂಬದವರು ಇದೇ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಬರೆದುಕೊಟ್ಟಿದ್ದಾರೆ ಎಂದು ತಿಳಿಸಿದರು.

ರೈತರಿಗೆ ನೋಟಿಸ್ ಕೊಟ್ಟಿರು ವುದನ್ನು ವಾಪಸ್ ಪಡೆಯುವುದು ನಾಟಕ, ಇದು ಸರ್ಕಾರದ ಕಣ್ಣೊರೆಸುವ ತಂತ್ರ. ಎಲ್ಲಿಯವರೆಗೆ ಗೆಜೆಟ್ ನೋಟಿಫಿಕೇಶನ್ ವಾಪಸ್ ಪಡೆಯುವುದಿಲ್ಲವೋ ಅಲ್ಲಿಯವರೆಗೆ ರೈತರಿಗೆ ಯಾವುದೇ ಅನುಕೂಲವಾಗುವುದಿಲ್ಲ ಎಂದು ಅವರು ಸರ್ಕಾರದ ವಿರುದ್ಧ ಕಿಡಿ ಕಾರಿದರು.ಬಿಜೆಪಿ ಅವಧಿಯಲ್ಲಿ ಕೋವಿಡ್ ಹಗರಣದ ಕುರಿತ ಆರೋಪಕ್ಕೆ ಉತ್ತರಿಸಿದ ಅವರು, ಕೋವಿಡ್ ಸಂದರ್ಭದಲ್ಲಿ ಪಿಪಿಇ ಕಿಟ್ ಇರಲಿಲ್ಲ. ಜನ ಸಾಯುತ್ತಿದ್ದರು. ಆರೋಗ್ಯ ತುರ್ತುಪರಿಸ್ಥಿತಿ ಇತ್ತು. ವೈದ್ಯರು ಪಿಪಿಇ ಕಿಟ್ ಇಲ್ಲದಿದ್ದರೆ ಕೆಲಸ ಮಾಡಲು ಆಗುತ್ತಿರಲಿಲ್ಲ. ಹೀಗಾಗಿ ಅವು ಎಲ್ಲಿ ಸಿಗುತ್ತವೆ ಎಂದು ತಿಳಿದು ಖರಿದಿ ಮಾಡಿದ್ದೇವು. ರಾಷ್ಟ್ರೀಯ ವಿಪತ್ತು ಅಂತ ಘೋಷಣೆ ಮಾಡಲಾಗಿತ್ತು. ಜನರ ಪ್ರಾಣ ಉಳಿಸಲು ಸರ್ಕಾರ ನಿರ್ಧರಿಸಿ, ನಿಯಮದಂತೆಯೇ ಖರೀದಿ ಮಾಡಲಾಯಿತು ಎಂದು ಅವರು ವಿವರಿಸಿದರು.

ಇದೀಗ ಎಲ್ಲವನ್ನು ಕಾಂಗ್ರೆಸ್ ಚುನಾವಣೆ ಸಂದರ್ಭದಲ್ಲಿ ರಾಜಕೀಯ ವಾಗಿ ಬಳಕೆ ಮಾಡಿಕೊಳ್ಳಲು ಮುಂದಾಗಿದೆ. ಕಾಂಗ್ರೆಸ್ ಆರೋಪಿಸಿ ಹಗರಣಗಳ ವರದಿ ಸ್ವೀಕರಿಸದಿದ್ದರೂ ಅದರಲ್ಲಿನ ಕೆಲವು ಅಂಶವನ್ನು ಲೀಕ್ ಮಾಡಲಾಗುತ್ತಿದೆ.

# ಸಿಎಂ ಸಿದ್ದರಾಮಯ್ಯ ನಮ್ಮ ನಾಯಕ: ಇಕ್ಬಾಲ್ ಅನ್ಸಾರಿ



**ಕೊಪ್ಪಳ, ನ.10–** ಸದ್ಯ ರಾಜ್ಯದಲ್ಲಿ ವಕ್ಫ್ ವಿವಾಹ ತೀವ್ರ ಸ್ವರೂಪ ಪಡೆದುಕೊಂಡಿದೆ ಸಿಎಂ ಸಿದ್ದ ರಾಮಯ್ಯ ರೈತರಿಗೆ ನೀಡಿದ ನೋಟಿಸ್ ಪಡೆಯುವಂತೆ ಸೂಚನೆ ನೀಡಿದರು ಕೂಡ ಬಿಜೆಪಿ ನಾಯಕರು ಪ್ರತಿಭಟನೆ ಹೋರಾಟ ನಡೆಸಿದರು.

ಇದೀಗ ಕಾಂಗ್ರೆಸ್ ಶಾಸಕ ಇಕ್ಬಾಲ್ ಅನ್ಸಾರಿ ಸಿಎಂ ಸಿದ್ದರಾಮಯ್ಯ ಮಾತ್ರ ನಮ್ಮ ನಾಯಕರು ಸೋನಿಯಾ, ರಾಹುಲ್ ಗಾಂಧಿ ಅವರನ್ನು ನಮ್ಮ ನಾಯಕರೆಂದು ಒಪ್ಪಿಕೊಂಡಿಲ್ಲ ಎಂದು ತಿಳಿಸಿದ್ದಾರೆ.

ಕೊಪ್ಪಳ ನಗರದಲ್ಲಿ ನಿನ್ನೆ ಸಂಜೆ ನಡೆದ ಸ್ವತಂತ್ರ ಹೋರಾಟಗಾರರ ಜಯಂತಿ ಕಾರ್ಯಕ್ರಮದಲ್ಲಿ ಇಕ್ಬಾಲ್ ಅನ್ಸಾರಿ ಮಾತನಾಡಿ, ಸಿದ್ದರಾಮಯ್ಯ ಸಿಎಂ ಇರೋವರಗೆ ನಮ್ಮ ಮುಸ್ಲಿಂ ಸಮಾಜದವರು ಏನಾದ್ರು ಮಾಡಿ ಕೊಳ್ಳಬೇಕು. ಅವರ ನಂತರ ನಮಗೆ ಚೊಂಬೆ ಗತಿಯಾಗುತ್ತೆ ಎಂದು ಕಾಂಗ್ರೆಸ್ ಶಾಸಕ ಇಕ್ಬಾಲ್ ಅನ್ಸಾರಿ ಹೇಳಿಕೆಯನ್ನು ನೀಡಿದ್ದಾರೆ. ಸಿದ್ದರಾಮಯ್ಯ ಬಳಿ ಸಮಾಜದವರು ಆರು ತಿಂಗಳಿಗೊಮ್ಮೆ ಹೋಗಬೇಕು, ನೂರು ಕೋಟಿ ರೂ. ಅನುದಾನ ತಂದು, ಸಮಾಜದ ಕೆಲಸ ಮಾಡಬೇಕು. ನಾವು ನೀವು, ನಮ್ಮ ಸಮಾಜದವರು ಏನಾದ್ರು ಮಾಡಿ ಕೊಳ್ಳಬೇಕು. ನಂತರ ಚಂಬೇ ಗತಿಯಾಗುತ್ತದೆ ಎಂದು ಹೇಳಿದ್ದಾರೆ.

ಇನ್ನು ನಾನು ಸಿದ್ದರಾಮಯ್ಯರನ್ನು ಮಾತ್ರ ನನ್ನ ನಾಯಕ ಎಂದು ಒಪ್ಪಿಕೊಂಡಿದ್ದೇನೆ. ರಾಹುಲ್ ಗಾಂಧಿ, ಸೋನಿಯಾಗಾಂಧಿರನ್ನು ಕೂಡಾ ನಾನು ನಮ್ಮ ನಾಯಕ ಅಂತ ಒಪ್ಪಿಕೊಂಡಿಲ್ಲ ಎಂದು ಇಕ್ಬಾಲ್ ಅನ್ಸಾರಿ ಹೇಳಿದ್ದಾರೆ.

# ವಕ್ಫ್ ನೆಪದಲ್ಲಿ ವಿಜಯಪುರ ಹಿಂದುತ್ವದ ಪ್ರಯೋಗಶಾಲೆ ಮಾಡಲು ಸಂಚು: ಎಂ.ಬಿ.ಪಾಟೀಲ್



**ವಿಜಯಪುರ, ನ.10–** ರಾಜ್ಯದಲ್ಲಿ ಕಳೆದ ಹತ್ತು ವರ್ಷಗಳಿಂದ ರಾಜ್ಯ ಮತ್ತು ಕೇಂದ್ರದಲ್ಲಿ ಅಧಿಕಾರದಲ್ಲಿ ಇದ್ದಾಗ ವಕ್ಫ್ ಆಸ್ತಿ ರಕ್ಷಣೆ ಕುರಿತು ಬಿಜೆಪಿ ಅಪಾರ ಕಾಳಜಿ ತೋರಿತ್ತು. ಇದೀಗ ಬಿಜೆಪಿ ವಿಜಯಪುರವನ್ನು ಹಿಂದುತ್ವದ ಪ್ರಯೋಗ ಶಾಲೆಯನ್ನಾಗಿ ಮಾಡಲು ಹೊರಟಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ರಾಜ್ಯ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ ಅವರು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ, ಬಿಜೆಪಿ ಅಧಿಕಾರದ ಅವಧಿಯಲ್ಲಿ ವಕ್ಫ್ ಆಸ್ತಿ ರಕ್ಷಣೆಗೆ ಹೊರಡಿಸಿದ ಹತ್ತಾರು ಸುತ್ತೋಲೆಗಳನ್ನು ಈ ಸಂದರ್ಭದಲ್ಲಿ ಬಿಡುಗಡೆ ಮಾಡಿ, ಕಳೆದ ಒಂದೆರಡು ವಾರಗಳಿಂದ ವಕ್ಫ್ ಆಸ್ತಿ ವಿಚಾರದಲ್ಲಿ ಬಿಜೆಪಿ ವ್ಯಾಪಕವಾಗಿ ಅಪಪ್ರಚಾರ ಮಾಡುತ್ತಿದೆ. ಆದರೆ, ತಾವೇ ಅಧಿಕಾರದಲ್ಲಿ ಇದ್ದಾಗ ರೈತರು, ಧಾರ್ಮಿಕ ಸ್ಥಳಗಳ ಹಾಗೂ ಎಲ್ಲ ಧರ್ಮೀಯರ ಆಸ್ತಿಯನ್ನು ವಕ್ಫ್‌ಗೆ ಹಿಂಪಡೆದಿದೆ ಎಂದು ದೂರಿದರು.

ರಾಜ್ಯದಲ್ಲಿ 2019ರಲ್ಲಿ ಬಿಜೆಪಿಯೇ ಅಧಿಕಾರದಲ್ಲಿ ಇತ್ತು. ಆ ವರ್ಷದ ಸೆ.17ರಂದು ದೇವರಹಿಪ್ಪರಗಿ ತಾಲೂಕಿನ ಮಣೂರ ಗ್ರಾಮದ ಮುರುಘೇಂದ್ರ ಶಿವಬಸಪ್ಪ ಖ್ಯಾಡಿ, ಮಾಶಾಬಿ ಮೌಲಾಸಾಬ ಮುಲ್ಲಾ, ಸುಭಾಷ ಧರ್ಮಣ್ಣ ಆನೆಗುಂದಿ ಅವರ ಆಸ್ತಿಗಳನ್ನು ವಕ್ಫ್ ಹೆಸರಿಗೆ ಇಂದೀಕರಣ ಮಾಡಿದೆ. ಇಂಡಿ ತಾಲ್ಲೂಕಿನಲ್ಲೂ 2023ರ ಜ.13ರಂದು ಮಾರ್ಸನಹಳ್ಳಿಯ ಗ್ರಾಮದ ನಿಂಗಪ್ಪ ಭೂಮಣ್ಣ ಶಿರಶ್ಯಾಡ ಅವರಿಗೆ ಸೇರಿದ ಆಸ್ತಿಯನ್ನು ಇದೇ ರೀತಿ ವಕ್ಫ್ ಹೆಸರಿಗೆ ಮಾಡಲಾಗಿದೆ ಎಂದರು.

2010ರ ಜನವರ 4ರಂದು ಬಿಜೆಪಿ ಸರ್ಕಾರವವಿದ್ದಾಗ ವಕ್ಫ್ ಆಸ್ತಿಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಕ್ರಮಗೊಳಿಸುವಂತೆ ಸರ್ಕಾರ ಆದೇಶ ಹೊರಡಿಸಲಾಯಿತು. ನಂತರ ಅದೇ ವರ್ಷದ ಮೇ 29ರಂದು ವಕ್ಫ್ ಆಸ್ತಿಗಳ ಅತಿಕ್ರಮಣ ತೆರವಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಸುತ್ತೋಲೆ ಹೊರಡಿಸಿದ್ದರು ಎಂದು ಅವರು ವಿವರಿಸಿದರು.

ಬಿಜೆಪಿ ತನ್ನ ಎರಡನೆಯ ಅವಧಿಯ ಸರ್ಕಾರ ಅಧಿಕಾರದಲ್ಲಿದ್ದಾಗಲೂ ಇದೇ ಕೆಲಸ ಮಾಡಿದೆ. 2020ರ ಆಗಸ್ಟ್ 8 ರಂದು ವಕ್ಫ್ ಆಸ್ತಿಗಳನ್ನು ಭೂಮಿ ತಂತ್ರಾಂಶದಲ್ಲಿ ಫ್ಲಾಗ್ ಮಾಡುವ ಕುರಿತು ಕಂದಾಯ ಇಲಾಖೆಯ ಅಂದಿನ ಉಪ ಕಾರ್ಯದರ್ಶಿ ಸುತ್ತೋಲೆ ಹೊರಡಿಸಿದ್ದರು.

ನಂತರ 2021ರ ಜನವರಿ 8 ರಂದು ಜಿಲ್ಲಾ ಮಟ್ಟದ ವಕ್ಫ್ ಆಸ್ತಿಗಳ ಕಾರ್ಯಪಡೆ ರಚಿಸಲು ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಿಂದ ಸುತ್ತೋಲೆ ಹೊರಡಿಸಿತ್ತು. ಆಮೇಲೆ ಸಹ 2021ರ ಜ.27ರಂದು ಗ್ರಾಮ ಠಾಣಾ ವ್ಯಾಪ್ತಿಯಲ್ಲಿರುವ ವಕ್ಸ್ ಆಸ್ತಿಗಳನ್ನು ಪಂಚತಂತ್ರ ಮತ್ತು ಇ–ಸ್ವತ್ತು ತಂತ್ರಾಂಶದಲ್ಲಿ ಫ್ಲಾಗ್ (ಲಾಕ್) ಮಾಡುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ನಿರ್ದೇಶಕರ ಆದೇಶ ಹೊರಡಿಸಿತು ಎಂದರು.

ವಕ್ಫ್ ಆಸ್ತಿಗಳ ಸಂರಕ್ಷಣೆ : 2019ರಲ್ಲಿ ಬಿಜೆಪಿ ಸಂಸದೆ ಶೋಭಾ ಕರಂದ್ಲಾಜೆ ಸಂಸತ್ತಿನಲ್ಲಿ ಪ್ರಶ್ನೆ ಕೇಳಿದ್ದಾಗಲೂ ಮೋದಿ ಸರ್ಕಾರವು ವಕ್ಫ್ ಆಸ್ತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣಕ್ಕೆ ಆದ್ಯತೆ ಕೊಡಲಾಗಿದೆ ಎಂದು ಹೇಳಿತ್ತು. ರಾಜ್ಯದಲ್ಲಿ ಈಗ ನೀಡಿರುವ ಎಲ್ಲಾ ನೋಟೀಸು ಗಳನ್ನು ವಾಪಸ್ ಪಡೆಯಲು ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶಿಸಿದ್ದಾರೆ ಎಂದು ಸಚಿವರು ಪ್ರತಿಪಾದಿಸಿದರು.

ಕಂದಾಯ ಸಚಿವ ಕೃಷ್ಣ ಭೈರೇಗೌಡ ಮತ್ತು ವಕ್ಫ್ ಸಚಿವ ಜಮೀರ ಅಹ್ಮದ್ ಖಾನ್ ಕೂಡ ಈ ಬಗ್ಗೆ ಸ್ಪಷ್ಟನೆ ಕೊಟ್ಟಿದ್ದೇವೆ. 2023ರ ಜೂನ್ 1ರಿಂದ 2024ರ ಅ.31ರವರೆಗೆ ರಾಜ್ಯದಲ್ಲಿ ವಕ್ಫ್ ಆಸ್ತಿಗಳಿಗೆ ಸಂಬಂಧಿಸಿದಂತೆ ನೋಟಿಸ್ ಜಾರಿ ಮತ್ತು ತಪ್ಪು ಸರಿಪಡಿಸಲು ಕೈಗೊಳ್ಳಲಾಗಿರುವ ಕ್ರಮಗಳ ಬಗ್ಗೆ ಮಾಹಿತಿ ಸಾರ್ವಜನಿಕ ಬಹಿರಂಗ ಪಡಿಸಿದ್ದೇವೆ ಎಂದು ತಿಳಿಸಿದರು.

ಜೆಪಿಸಿ ಅಧ್ಯಕ್ಷ ಜಗದಂಬಿಕಾ ಪಾಲ್ ಅವರ ವಿಜಯಪುರ ಭೇಟಿ ಕಾನೂನು ಬಾಹಿರ. ಇದರ ಜತೆಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಮತ್ತು ಶೋಭಾ ಕರಂದ್ಲಾಜೆ ಹೋರಾಟ ಕೆಲವೇ ಗಂಟೆಗಳಲ್ಲಿ ಮುಗಿದಿದೆ ಎಂದು ಅವರು ವ್ಯಂಗ್ಯವಾಡಿದರು.

# ಈ ಬಾರಿ ಸಂಡೂರು ಕ್ಷೇತ್ರದಲ್ಲಿ ಬಿಜೆಪಿ ಬಾವುಟ ಹಾರಾಟ ಖಚಿತ: ಸೋಮಶೇಖರ ರೆಡ್ಡಿ ವಿಶ್ವಾಸ



**ಬಳ್ಳಾರಿ, ನ.10–** ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ತಿಮ್ಮಲಾಪುರ ಗ್ರಾಮದಲ್ಲಿ ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ಬಂಗಾರು ಹನುಮಂತು ಪರವಾಗಿ ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಪ್ರಚಾರ ನಡೆಸಿದರು. ಈ ವೇಳೆ 100 ನೂರಕ್ಕು ಹೆಚ್ಚು ಯುವಕರು ಕಾಂಗ್ರೆಸ್ ಪಕ್ಷ ತೊರೆದು ಬಿಜೆಪಿ ಸೇರಿದರು.

ಇನ್ನೊಂದೆಡೆ ಕ್ಷೇತ್ರದ ಏಳುಬೆಂಚಿ ಗ್ರಾಮದಲ್ಲಿ ಕಾಂಗ್ರೆಸ್‌ನ ಮುಖೇಶ್ ಪಾಟೀಲ್, ಖಾಜಾ ಸಾಬ್, ಮೌಲಾಸಾಬ್ ಅನ್ವರ್ ಸಾಬ್, ಶರಣ, ಇ.ಲಿಂಗಪ್ಪ, ಲಿಂಗರಾಜ ಇವರು ತಮ್ಮ ಪಕ್ಷ ತೊರೆದು ಬಿಜೆಪಿ ಸೇರಿದರು. ಮುಖಂಡರುಗಳಾದ ಉಜ್ವಲ ಶ್ರೀಧರ, ಎಸ್. ಮಲ್ಲನಗೌಡರು, ಮೋತ್ಕರ್ ಶ್ರೀನಿವಾಸ್, ಕೆ. ಕೃಷ್ಣ ಇದ್ದರು. ಈ ವೇಳೆ ಮಾತನಾಡಿದ ಸೋಮಶೇಖರ ರೆಡ್ಡಿ ಅವರು ಸಂಡೂರು ಕ್ಷೇತ್ರದಲ್ಲಿ ಈ ವರೆಗೆ ಬಿಜೆಪಿ ಗೆದ್ದಿಲ್ಲ. ಈ ಬಾರಿ ಬಿಜೆಪಿ ಭಾವುಟ ಹಾರಬೇಕೆಂದು. ಕಾರಣ ಹಲವು ಹಗರಣದಲ್ಲಿ ಮುಳುಗಿರುವ ಕಾಂಗ್ರೆಸ್ ಸರ್ಕಾರಕ್ಕೆ ಎಚ್ಚರಿಕೆ ನೀಡಲು ನಮ್ಮ ಅಭ್ಯರ್ಥಿ ಬಂಗಾರು ಹನುಮಂತ ವಿಧಾನ ಸೌಧ ಪ್ರವೇಶ ಮಾಡಲು ಕಮಲದ ಗುರ್ತಿಗೆ ಮತ ಹಾಕಿ ಎಂದರು. ಸತತವಾಗಿ ಇಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಅಸಯ್ಕೆಯಾಗುತ್ತಾ ಬಂದು ಇದನ್ನು ಕಾಂಗ್ರೆಸ್‌ನ ಭದ್ರ ಕೋಟೆ ಎಂದು ಅಭಿವೃದ್ಧಿ ನಿರ್ಲಕ್ಷಿಸಲಾಗಿದೆ. ಅದಕ್ಕಾಗಿ ಅವರಿಗೆ ಪಾಠ ಕಲಿಸಲು ಬದಲಾವಣೆ ಮಾಡಿ ಎಂದರು.

# ಹೀರದ ಸೂಗಮ್ಮ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ ಶಶಿಧರ ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆ



**ಬಳ್ಳಾರಿ, ನ.10–** ಬಳ್ಳಾರಿ ನಗರದ ಹೀರದ ಸೂಗಮ್ಮ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ ಶಶಿಧರ ಬಳ್ಳಾರಿ ಜಿಲ್ಲಾ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದಲ್ಲಿ 200 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ, 100 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ, 80 ಮೀಟರ್ ಹರ್ಡಲ್ಸ್ ನಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆ ಆಗಿರುತ್ತಾರೆ.

ಮತ್ತು ಸದರಿ ವಿದ್ಯಾರ್ಥಿಯು 'ಅಗ್ರಗಣ್ಯ' ಪ್ರಶಸ್ತಿ ಪಡೆದಿರುತ್ತಾರೆ. ವೀ.ವಿ. ಸಂಘದ ಕೋಶಾಧಿಕಾರಿಗಳು ಹಾಗೂ ಸದರಿ ಶಾಲೆಯ ಆಡಳಿತ ಮಂಡಳಿ ಅಧ್ಯಕ್ಷರೂ ಆದ ಬೈಲುವದ್ದಿಗೇರಿ ಎರ್ರಿಸ್ವಾಮಿ ಇವರು ಸದರಿ ವಿದ್ಯಾರ್ಥಿಗೆ ಪಾರಿತೋಷಕ ಹಾಗೂ ಪ್ರಶಸ್ತಿಗಳನ್ನು ನೀಡಿ ರಾಜ್ಯ ಮಟ್ಟದಲ್ಲಿಯೂ ಸ್ಥಾನಗಳನ್ನು ಪಡೆದು ಶಾಲೆಗೆ ಮತ್ತು ಸಂಸ್ಥೆಗೆ ಕೀರ್ತಿ ತರಲೆಂದು ಶುಭ ಹಾರೈಸಿದರು. ವೇದಿಕೆಯಲ್ಲಿ ಅಕ್ಕಿ ಮರಿಸ್ವಾಮಿ, ಪ್ರಾಢಶಾಲಾ ಮುಖ್ಯಗುರುಗಳಾದ ಎನ್.ಎಮ್. ಶಿವಶರಣಯ್ಯ ಹಾಗೂ ವೃತ್ತಿ ಬಾಂಧವರು ಉಪಸ್ಥಿತರಿದ್ದು ವಿದ್ಯಾರ್ಥಿಗೆ ಶುಭ ಹಾರೈಸಿದರು.

# 3 ವರ್ಷದಲ್ಲಿ 50:50 ಅನುಪಾತದಲ್ಲಿ 1950 ನಿವೇಶನ ಹಂಚಿಕೆ ತನಿಖೆಯಿಂದ ಬಯಲು



**ಮೈಸೂರು, ನ.10–** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದಲ್ಲಿ ಕೇವಲ ಮೂರು ವರ್ಷದ ಅವಧಿಯಲ್ಲಿ 50:50 ಅನುಪಾತದಡಿ ಒಟ್ಟು 1950 ನಿವೇಶನ ಹಂಚಿಕೆಯಾಗಿರುವುದು ತನಿಖೆಯಿಂದ ಬಯಲಾಗಿರುವುದಾಗಿ ತಿಳಿದು ಬಂದಿದೆ.

ಹೀಗಾಗಿ ತನಿಖೆ ಪೂರ್ಣಗೊಂಡ ಬಳಿಕ 5,000 ನಿವೇಶನಗಳ ಪೈಕಿ ಎಷ್ಟು ಬದಲಿಯಾಗಿ ಹಂಚಿಕೆಯಾಗಿವೆ ಎಂಬ ಸ್ಪಷ್ಟ ಚಿತ್ರಣ ಸಿಗಲಿದೆ. ಮುಡಾ ಹಗರಣ ಕುರಿತು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ನೇತೃತ್ವದ ಏಕಸದಸ್ಯ ವಿಚಾರಣಾ ಆಯೋಗ, ಲೋಕಾಯುಕ್ತ ಹಾಗೂ ಜಾರಿ ನಿರ್ದೇಶನಾಲಯ ಗಳು ವಿವಿಧ ಆಯಾಮಗಳಲ್ಲಿ ತನಿಖೆ ನಡೆಸುತ್ತಿವೆ. ಹೀಗಾಗಿ ಮುಂದಿನ ದಿನಗಳಲ್ಲಿ ಮತ್ತಷ್ಟು ಅಕ್ರಮಗಳು ಬಯಲಿಗೆ ಬರುವ ಸಾಧ್ಯತೆ ಇದೆ. ಈ ಹಿಂದೆ ಮುಡಾ ಆಯುಕ್ತರಾಗಿದ್ದ ಎಚ್.ಎಂ.ಕಾಂತರಾಜು, ಕಾರ್ಯದರ್ಶಿಯಾಗಿದ್ದ ಎಂ.ಕೆ.ಸವಿತಾ ನೇತೃತ್ವದ ತಂಡ ಮುಡಾ ವ್ಯಾಪ್ತಿಯ ಐದು ಸಾವಿರ ನಿವೇಶನ ಗುರುತಿಸಿ ಪಟ್ಟಿ ಮಾಡಿತ್ತು. ಈ ಪೈಕಿ ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಗೆ ಬದಲಿ ನಿವೇಶನವಾಗಿ 14 ನಿವೇಶನಗಳನ್ನು ವಿಜಯನಗರ 3ನೇ ಹಂತದಲ್ಲಿ ಹಂಚಿಕೆ ಮಾಡಲಾಗಿತ್ತು. ಕೆಲವು ಪ್ರಭಾವಿಗಳು ಪ್ರಭಾವ ಬಳಸಿ ಸಾಕಷ್ಟು ನಿವೇಶನ ಪಡೆದಿರುವುದು ತನಿಖೆಯಿಂದ ಬೆಳಕಿಗೆ ಬರಲು ಪ್ರಾರಂಭವಾಗಿದೆ.

ಅಲ್ಲದೆ, ರಾಜಕಾರಣಿಗಳು ತಮ್ಮ ಕುಟುಂಬದವರು ಹಾಗೂ ಸಂಬಂಧಿಕರಿಗೆ ನಿವೇಶನಗಳನ್ನು ಮಂಜೂರು ಮಾಡಿಸಿರುವುದು ಬಯಲಿಗೆ ಬರುತ್ತಿದೆ. ರದ್ದಾದರೂ ಆತಂಕ ತಪ್ಪಿಲ್ಲ: 50:50 ಅನುಪಾತದಲ್ಲಿ ಹಂಚಿಕೆ ಆಗಿರುವ ಎಲ್ಲ ನಿವೇಶನಗಳನ್ನು ರದ್ದುಪಡಿಸಲು ಮುಡಾ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ಹಾಗೆಂದ ಮಾತ್ರಕ್ಕೆ ಅಕ್ರಮವಾಗಿ ನಿವೇಶನ ಪಡೆದವರು ತನಿಖೆಯಿಂದ ಬಚಾವಾಗಲು ಸಾಧ್ಯವಿಲ್ಲ. ಹೀಗಾಗಿ ತನಿಖೆಯ ಆತಂಕ ಪ್ರಾರಂಭವಾಗಿದೆ.ಮನೆ ನಿರ್ವಾಣಕ್ಕೆ ಅವಕಾಶ ಕೊಡಬೇಡಿ: ಮುಡಾದಿಂದ ಅಕ್ರಮವಾಗಿ ಪಡೆದಿರುವ ನಿವೇಶನಗಳಲ್ಲಿ ಮನೆ ನಿರ್ವಾಣಕ್ಕೆ ಅವಕಾಶ ನೀಡಬಾರದು ಎಂದು ಶಾಸಕ ಟಿ.ಎಸ್. ಶ್ರೀವತ್ಸ ಅವರು ಜಿಲ್ಲಾಧಿಕಾರಿ ಹಾಗೂ ಮುಡಾ ಆಯುಕ್ತರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.

ಅಕ್ರಮವಾಗಿ ಪಡೆದ ನಿವೇಶನದಲ್ಲಿ ಮನೆ ನಿರ್ಮಾಣ ಮಾಡಿ ನಂತರ ನ್ಯಾಯಾಲಯದಿಂದ ತಡೆಯಾಜ್ಞೆ ತಂದು ಯಥಾಸ್ಥಿತಿ ಕಾಯ್ದುಕೊಳ್ಳಲು ಕೆಲವರು ಆಲೋಚನೆ ಮಾಡುತ್ತಿದ್ದಾರೆ. ಇದಕ್ಕೆ ಮುಡಾ ಅವಕಾಶ ನೀಡಬಾರದು. 50:50ರ ಅನುಪಾತದಲ್ಲಿ ಹಂಚಿಕೆಯಾಗಿರುವ ಅಕ್ರಮ ನಿವೇಶನಗಳನ್ನು ಮುಡಾ ತಕ್ಷಣ ತನ್ನ ಸುಪರ್ದಿಗೆ ಪಡೆಯಬೇಕು ಎಂದು ಪತ್ರದಲ್ಲಿ ಆಗ್ರಹಿಸಿದ್ದಾರೆ.

ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಟಿ.ಎಸ್.ಶ್ರೀವತ್ಸ, 50:50ರ ಅನುಪಾತದಲ್ಲಿ ಪಡೆದಿರುವ ನಿವೇಶನದಲ್ಲಿ 200ಕ್ಕೂ ಹೆಚ್ಚು ಜನರು ಮನೆ ಕಟ್ಟುತ್ತಿರುವ ಕುರಿತು ಮಾಹಿತಿ ಇದೆ. ಅವರು ನ್ಯಾಯೋಚಿತವಾಗಿ ನಿವೇಶನ ಪಡೆದಿದ್ದರೆ ಯಾವುದೇ ರೀತಿಯ ಸಮಸ್ಯೆ ಆಗುವುದಿಲ್ಲ. ಆದರೆ, ಅಕ್ರಮವಾಗಿ ನಿವೇಶನ ಪಡೆದವರಿಗೆ ಮನೆ ನಿರ್ವಾಣಕ್ಕೆ ಅವಕಾಶ ನೀಡಬಾರದು. ಮುಡಾದಲ್ಲಿ ಸಾಕಷ್ಟು ಕಡತಗಳು ಕಾಣೆಯಾಗಿವೆ ಎಂದು ಸ್ವತಃ ಅಧಿಕಾರಿಗಳು ಒಪ್ಪಿಕೊಂಡಿದ್ದಾರೆ. ಹಾಗಾಗಿ ಅಧಿಕಾರಿಗಳನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದರೆ ಸತ್ಯಾಂಶ ಬಯಲಿಗೆ ಬರಲಿದೆ.

# ದೇಸಿ ಹಬ್ಬ ದಶಮಾನೋತ್ಸವ ಸಂಭ್ರಮ, ದೇಸಿ ಸಂಸ್ಕೃತಿ, ಪರಂಪರೆ ಉಳಿಸಿ ಬೆಳೆಸಿ: ಡಿಸಿ ಫೌಜಿಯಾ ತರನ್ನುಮ್



ಕಲಬುರಗಿ ನಗರದ ಸಂತ ಜೋಸೆಫ್ ಪಿ. ಯು ಕಾಲೇಜಿನಲ್ಲಿ ದೇಸಿ ಹಬ್ಬ ದಶಮಾನೋತ್ಸವ ಸಮಾರಂಭವನ್ನು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಂ ಉದ್ಘಾಟಿಸಿ, ಪಿಯು ಕಾಲೇಜಿನ ವಿದ್ಯಾರ್ಥಿನಿಯರ ಕೃಷಿ ವಸ್ತು ಪ್ರದರ್ಶನವನ್ನು ವೀಕ್ಷಿಸಿದರು.

**ಕಲಬುರಗಿ, ನ.10–** ನಮ್ಮ ದೇಸಿಯ ಸಂಸ್ಕೃತಿ, ಸಂಪ್ರದಾಯ, ಪರಂಪರೆ ಉಳಿಸಿ ಬೆಳೆಸುವಲ್ಲಿ ಯುವಜನತೆಯ ಪಾತ್ರ ಹಿರಿದಾದದ್ದು, ಯುವಜನತೆ ದುಶ್ಚಟಗಳಿಗೆ ಬಲಿಯಾಗದೆ ಉತ್ತಮ ಹವ್ಯಾಸಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಂ ಹೇಳಿದರು.

ನಗರದ ಸಂತ ಜೋಸೆಫ್ ಪಿ. ಯು ಕಾಲೇಜಿನಲ್ಲಿ ನಡೆದ "ಆದಾವಾ ನಮ್ಮ ಜೋಳ ಉಳಿದಾವ ನಮ್ಮ ಹಾಡ ಮುಖ್ಯ ವೇದಿಕೆಯಲ್ಲಿ ದೇಸಿಹಬ್ಬ ದಶಮಾನೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಪ್ರತಿಯೊಂದು ಶಾಲಾ–ಕಾಲೇಜುಗಳು ಕ್ರೀಡೆ, ಸಾಂಸ್ಕೃತಿಕ ಕಾರ್ಯ ಚಟುವಟಿಕೆಗಳಿಗೆ ಒತ್ತು ಕೊಡಬೇಕು ಎಂದು ಸಲಹೆ ನೀಡಿದರು.

ಕೃಷಿ– ವಸ್ತುಪ್ರದರ್ಶನ ಉದ್ಘಾಟಿಸಿದ ನಗರ ಪೊಲೀಸ ಆಯುಕ್ತ ಡಾ. ಶರಣಪ್ಪ ಎಸ್. ಡಿ, ನಮ್ಮ ಜನಪದರು ಯಾವ ವಿಶ್ವವಿದ್ಯಾಲಯದಲ್ಲಿ ಶಿಕ್ಷಣ ಪಡೆಯದೆ ಅದ್ಭುತವಾಗಿ ಸಂಸ್ಕೃತಿ, ಸಂಸ್ಕಾರ ಕಟ್ಟಿಕೊಂಡು ಆದರ್ಶವಾಗಿ ಬದುಕಿ ತೋರಿಸಿದ್ದಾರೆ. ಆ ನಿಟ್ಟಿನಲ್ಲಿ ಇಂದಿನ ಯುವ ಪೀಳಿಗೆ ಆದರ್ಶ ತತ್ವಗಳನ್ನು ಅನುಸರಿಸಬೇಕು ಎಂದರು.

ಸಂಸ್ಥೆಯ ವ್ಯವಸ್ಥಾಪಕಿ ಸಿಸ್ಟರ ಸಜನಾ ಅಧ್ಯಕ್ಷತೆ ವಹಿಸಿದ್ದರು. ಮುಖ್ಯಅತಿಥಿಗಳಾದ ಕಾಲೇಜು ಆಡಳಿತಧಿಕಾರಿ ಸಿಸ್ಟರ ಪ್ರಾನ್ಸಿನಾ, ವೆಂಕಟೇಶ ನೀರಡಗಿ , ಹನುಮಂತರಾವ ಚಿನ್ನಾ, ರವೀಂದ್ರ ವಿಭೂತಿ ವೇದಿಕೆಯಲಿದ್ದರು. ನಂತರ ಸಮಾರೋಪದಲ್ಲಿ ವಿವಿಧ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಪಿಯು ಶಿಕ್ಷಣ ಇಲಾಖೆಯ ಉಪನಿರ್ದೇಶಕ ಶಿವಶರಣಪ್ಪ ಮುಳೇಗಾಂವ ಸಮಾರೋಪದ ನುಡಿಗಳನ್ನಾಡಿದರು.

ಅತಿಥಿಗಳಾದ ಶರಣಪ್ಪ ತಳವಾರ, ಸಿಸ್ಟರ ಚೇತನಾ ಇದ್ದರು. ಮಹೇಶ್ವರಿ ಹಿರೇಮಠ ನಿರೂಪಿಸಿದರು. ಜೇಬಾ ಕುಲ್ಸುಮ್, ಶೈಲಜಾ ಸೋನಾರ ನಿರ್ವಹಿಸಿದರು. ವಿದ್ಯಾ ಕುಲಕರ್ಣಿ ವಂದಿಸಿದರು. ಪ್ರಾಂಶುಪಾಲ ಡಾ. ಚಿ. ಸಿ ನಿಂಗಣ್ಣ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತ ನಾಡಿದರು.

## ದೇಶಿ ಸಂಸ್ಕೃತಿ ಅನಾವರಣ

ನೂರಾರು ವಿದ್ಯಾರ್ಥಿನಿಯರು ಇಳಕಲ್ ಸೀರೆ, ಮುತ್ತಿನಹಾರ, ಮೂಗುತಿ, ಬೋರಮಾಳ, ಕಾಲು ಚೈನು ನಾನಾರೀತಿಯ ಆಭರಣ ಉಡುಪು ಧರಿಸಿಕೊಂಡು ಬಂದು ಹಳ್ಳಿ ಪರಿಸರ ಅನಾವರಣ ಗೊಳಿಸಿದರು. ವಿದ್ಯಾರ್ಥಿನಿಯರು ಮನೆಯಿಂದ ತಯಾರಿಸಿಕೊಂಡು ತಂದ ಜನಪದ ಅಡುಗೆ– ಸಜ್ಜಿರೊಟ್ಟಿ, ಬಿಳಿಜೋಳರೊಟ್ಟಿ , ಹೂರಣಹೋಳಗಿ, ಕೊಬರಿಗಡಬ, ಜೋಳದಹಿಟ್ಟಿನ ಕಡಬ, ಹುಗ್ಗಿ, ಅಗಸಿ ಹಿಂಡಿ, ಶೇಂಗಾಹಿಂಡಿ ನಾನಾತರದ ಕಾಳಪಲ್ಲೆ, ತರಕಾರಿಪಲ್ಲೆ, ಕಾರಚಟ್ನಿ , ಹಪ್ಪಳ, ಶೆಂಡಗಿ, ಬಜಿ, ಚೂಡಾವನ್ನು ವಿದ್ಯಾರ್ಥಿನಿಯರಿಂದ ಜನಪದರ ಅಡುಗೆ ಪ್ರದರ್ಶನವಾಯಿತು. ಕೃಷಿ ಜನಪದ – ವಸ್ತು ಪ್ರದರ್ಶನದಲ್ಲಿ ವಿದ್ಯಾರ್ಥಿನಿಯರಿಂದ ಹೊಲ–ಗದ್ದೆ , ಮಣ್ಣಿನ ಎತ್ತುಗಳು, ಎತ್ತಿನಬಂಡಿ, ಗ್ರಾಮ ದೃಶ್ಯಗಳು, ಜನಪದರು ನಿತ್ಯ ಬಳಸುವ ಕೂಡಗೋಲು, ಕುರುಪಿ, ಬೀಸುಕಲ್ಲು , ಅಳತೆ ಮಾಪನಗಳು , ಚಿಮಣಿ, ಲಾಟೀನು ಹಾಗೂ ಮನೆ'ಅಲಂಕಾರಿಕ ವಸ್ತುಗಳ ಪ್ರದರ್ಶನ ಜರುಗಿತು. ನಂತರದಲ್ಲಿ ಸಮೂಹ ನೃತ್ಯ ನಡೆದವು. ಜನಪದ ಉಡುಗೆ ನಡುಗೆಯಲ್ಲಿ ಸುಮಾರು ಮೂವತ್ತುಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಭಾಗವಹಿಸಿ ಪ್ರದರ್ಶಿಸಿದರು.



ಚಿಕ್ಕಮಗಳೂರಿನಲ್ಲಿ ಭಾನುವಾರ ಶ್ರೀರಾಮಸೇನೆ ಆಯೋಜಿಸಿದ್ದ ದತ್ತಮಾಲಾ ಅಭಿಯಾನದ ಅಂಗವಾಗಿ ನಡೆದ ಶೋಭಾಯಾತ್ರೆಯಲ್ಲಿ ಭಾರೀ ಸಂಖ್ಯೆಯ ಜನರು ಪಾಲ್ಗೊಂಡಿದ್ದರು.

### ರಾಯಚೂರು ವಿವಿಯಲ್ಲಿ ಎನ್‌ಎಸ್‌ಎಸ್ ವಾರ್ಷಿಕೋತ್ಸವ

# ಸೇವಾ ಮನೋಭಾವ ಅಳವಡಿಸಿಕೊಳ್ಳಲು ಶಿಬಿರ ಸಹಕಾರಿ: ಡಾ.ವೆಂಕಟೇಶ್




**ರಾಯಚೂರು, ನ.10–** ಮೈತ್ರಿ–ಸೌಹಾರ್ದತೆ, ಸಹಕಾರ, ಸೇವಾ ಮನೋಭಾವ, ಸಹಜೀವನ ಗುಣಗಳನ್ನು ಮೈಗೂಡಿಸಿಕೊಳ್ಳಲು ಎನ್‌ಎಸ್‌ಎಸ್ ಶಿಬಿರಗಳು ಸಹಕಾಯಿರಿಯಾಗಿವೆ ಎಂದು ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಸಹ ಪ್ರಾಧ್ಯಾಪಕ ಡಾ.ವೆಂಕಟೇಶ ಅವರು ಅಭಿಪ್ರಾಯಪಟ್ಟರು.

ನಗರದ ಹೊರವಲಯದಲ್ಲಿರುವ ರಾಯಚೂರು ವಿಶ್ವವಿದ್ಯಾಲಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಘಟಕದಿಂದ ಏರ್ಪಡಿಸಿದ್ದ ವಾರ್ಷಿಕ ವಿಶೇಷ ಶಿಬಿರದ ಉದ್ಘಾಟಿಸಿ ಮಾತನಾಡಿದ ಅವರು, ಪರಸ್ಪರ ಒಬ್ಬರನ್ನೊಬ್ಬರು ಅರಿತು ಸಹಬಾಳ್ವೆ ನಡೆಸುವ ಮನೋಭಾವದ ಜೊತೆಗೆ ರಾಷ್ಟ್ರೀಯ ಭಾವೈಕ್ಯತೆಯನ್ನು ನಮ್ಮಲ್ಲಿ ಮೂಡಿಸುತ್ತದೆ. ವಿವಿಧತೆಯಲ್ಲಿ ಏಕತೆ ಎಂಬ ಆದರ್ಶವನ್ನು ಸಾಕಾರಗೊಳಿಸಲು ಎನ್‌ಎಸ್‌ಎಸ್ ಸಹಕಾರಿಯಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮೌಲ್ಯಮಾಪನ ಕುಲಸಚಿವ ಪ್ರೊ. ಯರಿಸ್ವಾಮಿ.ಎಂ ಮಾತನಾಡಿ, ಸಂಘಟನಾ ಸಾಮರ್ಥ್ಯವನ್ನು ಬೆಳೆಸಿಕೊಳ್ಳುವ ಜೊತೆಗೆ ಉತ್ತಮ ನಾಯಕತ್ವ ಗುಣಗಳನ್ನು ರೂಢಿಸಿಕೊಳ್ಳಲು ಎನ್‌ಎಸ್‌ಎಸ್ ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಈ ಶಿಬಿರದಲ್ಲಿ ಸಕ್ರಿಯರಾಗಿ ಭಾಗವಹಿಸಿ ಸದುಪಯೋಗ ಪಡೆಯಬೇಕು ಎಂದು ಸಲಹೆ ನೀಡಿದರು.

ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋಜನಾಧಿಕಾರಿ ಹಾಗೂ ವಿದ್ಯಾರ್ಥಿ ಕಲ್ಯಾಣಾಧಿಕಾರಿಯಾಗಿರುವ ಡಾ.ಜಿ.ಎಸ್.ಬಿರಾದಾರ್ ಅವರು ಪ್ರತಿಜ್ಞಾ ವಿಧಿಯನ್ನು ಬೋಧಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಗಾಂಧೀಜಿಯವರ ಗ್ರಾಮ ಸ್ವರಾಜ್ಯ ಹಾಗೂ ಸ್ವಯಂ ಸೇವೆ ಆದರ್ಶಗಳ ಅಡಿಯಲ್ಲಿ ಈ ಎನ್‌ಎಸ್‌ಎಸ್ ಸ್ಥಾಪನೆಯಾಗಿದ್ದು, ರಾಷ್ಟ್ರದಾದ್ಯಂತ 800 ವಿಶ್ವವಿದ್ಯಾಲಯಗಳು ಹಾಗೂ 50 ಸಾವಿರ ಕಾಲೇಜುಗಳನ್ನೊಳಗೊಂಡಂತೆ 11 ಲಕ್ಷ ನೋಂದಾಯಿತ ಸ್ವಯಂ ಸೇವಕರನ್ನು ಈ ರಾಷ್ಟ್ರೀಯ ಸೇವಾ ಯೋಜನೆ ಒಳಗೊಂಡಿದೆ. ಸದ್ಯ ರಾವಿವಿಯಲ್ಲಿ ಹಮ್ಮಿಕೊಳ್ಳಲಾಗಿರುವ ಈ ವಾರ್ಷಿಕ ವಿಶೇಷ ಶಿಬಿರವು ನ. 11ರಿಂದ ನ.13ರವರೆಗೆ ನಡೆಯಲಿದ್ದು, ಧ್ವಜಾರೋಹಣ, ಪ್ರಾರ್ಥನೆ, ಪಥಸಂಚಲನ, ಯೋಗ, ಶ್ರಮದಾನ, ಸಾಂಸ್ಕೃತಿಕ ಹಾಗೂ ವಿಶೇಷ ಉಪನ್ಯಾಸ ಕಾರ್ಯಕ್ರಮಗಳು ಪ್ರತಿನಿತ್ಯ ನಡೆಯಲಿವೆ ಎಂದು ವಿವರಿಸಿದರು.

# ಸಂಡೂರಿನ ವಿವಿಧೆಡೆ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ತುಕಾರಾಂ ಭರ್ಜರಿ ಪ್ರಚಾರ

**ಸಂಡೂರು, ನ.10–** ಕುಡುತಿನಿ ಪಟ್ಟಣ ಪಂಚಾಯಿತಿಯ ಅಂಬೇಡ್ಕರ್ ನಗರದಲ್ಲಿ ಮನೆಮನೆಗೆ ತೆರಳಿ ಪ್ರಚಾರ ನಡೆಸಿದ ಸಂಡೂರು ಉಪ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ಅವರು, ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಸಿ ಎಂದು ಮನವಿ ಮಾಡಿದರು.



ಕುಡುತಿನಿಯ ಇಂದಿರಾ ನಗರದ ವಾರ್ಡ್ ನಂಬರ್ 15 ರಲ್ಲಿ ಪ್ರಚಾರ ನಡೆಸಿದ ಅವರು ಕಾಂಗ್ರೆಸ್‌ಗೆ ಮತ ನೀಡಿ ಎಂದು ವಿನಂತಿ ಮಾಡಿದರು. ಈ ವೇಳೆ ಅವರೊಂದಿಗೆ ಅಪಾರ ಸಂಖ್ಯೆಯ ಕಾರ್ಯಕರ್ತರು ಇದ್ದರು. ಕಾಂಗ್ರೆಸ್‌ಗೆ ಸೇರ್ಪಡೆ: ಕುಡುತಿನಿಯ ಬಿಜೆಪಿಯ 40 ಮುಖಂಡರು ಮತ್ತು ಕಾರ್ಯಕರ್ತರು ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತವನ್ನು ಮೆಚ್ಚಿ ಹಾಗೂ ಸಂಡೂರಿನ ಅಭಿವೃದ್ಧಿಯನ್ನು ಮನಗಂಡು ಕಾಂಗ್ರೆಸ್ ಪಕ್ಷಕ್ಕೆ ಸೇರಿದರು.

ಈ ವೇಳೆ ಮಾತನಾಡಿದ ಅನ್ನಪೂರ್ಣ ಅವರು, ಇವರ ಸೇರ್ಪಡೆಯಿಂದ ಪಕ್ಷಕ್ಕೆ ಇನ್ನಷ್ಟು ಬಲ ಬಂದಂತಾಗಿದೆ. ನಮ್ಮ ಗೆಲುವಿನ ವಿಶ್ವಾಸ ಇನ್ನಷ್ಟು ಹೆಚ್ಚಿದೆ ಎಂದು ಹೇಳಿದರು.

## ಎರಡನೇ ಬಾರಿ ಉಚಿತ ಸಾಮಾನ್ಯ ಜ್ಞಾನ ಸ್ಪರ್ಧಾತ್ಮಕ ಸ್ಪರ್ಧೆ-820 ವಿದ್ಯಾರ್ಥಿಗಳು ಭಾಗಿ

**ಬಳ್ಳಾರಿ, ನ.10–** ಬಳ್ಳಾರಿ ನಗರದ ಹೆಸರಾಂತ ಶ್ರೀ ವಾಸವಿ ವಿದ್ಯಾಲಯದಲ್ಲಿ ಆರ್ ಎಸ್ ಬಿ ಚಾರಿಟೇಬಲ್ ಟ್ರಸ್ಟ್ ಹಾಗೂ ಶ್ರೀ ವಾಸವಿ ಎಜ್ಯುಕೇಷನ್ ಟ್ರಸ್ಟ್ ಸಹಕಾರದೊಂದಿಗೆ ಎರಡನೇ ಬಾರಿ ಉಚಿತ ಸಾಮಾನ್ಯ ಜ್ಞಾನ ಸ್ಪರ್ಧಾತ್ಮಕ ಸ್ಪರ್ಧೆ 10 ನವಂಬರ್ 2024 ರಂದು ವಿಜೃಂಭಣೆಯಿಂದ ನಡೆಯಿತು. ಭಾನುವಾರ ಬೆಳಿಗ್ಗೆ 10 ಗಂಟೆಗೆ ಪರೀಕ್ಷೆಯನ್ನು ನಡೆಸಲಾಯಿತು. ಈ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಬಳ್ಳಾರಿ ನಗರದ ಸುಮಾರು 40 ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 5ನೇ, 6ನೇ, 7ನೇ ಮತ್ತು 8ನೇ ತರಗತಿಯ ಸುಮಾರು 820 ವಿದ್ಯಾರ್ಥಿಗಳು ಈ ಪರೀಕ್ಷೆಯಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದರು.

ಮಕ್ಕಳಲ್ಲಿ ಸ್ಪರ್ಧಾತ್ಮಕ ಮನೋ ಭಾವ, ಸೃಜನಶೀಲತೆ, ಆತ್ಮಬಲ, ಸಹಕಾರ ಮತ್ತು ಹೊಂದಾಣಿಕೆಯ ಅಂಶಗಳನ್ನು ಬೆಳೆಸುವುದು ಈ ಸ್ಪರ್ಧೆಯ ಮುಖ್ಯ ಉದ್ದೇಶವಾಗಿತ್ತು. ವಿದ್ಯಾರ್ಥಿಗಳ ಜೀವನದಲ್ಲಿ ಸಾಮಾನ್ಯ ಜ್ಞಾನ ಸ್ಪರ್ಧೆಗಳು ಬಹಳ ಮಹತ್ವವನ್ನು ಹೊಂದಿವೆ.ಇವು ವಿಶೇಷವಾಗಿ ವಿದ್ಯಾಭ್ಯಾಸದ ಬುನಾದಿಯನ್ನು ಬಲಪಡಿಸಿ, ವಿದ್ಯಾರ್ಥಿಗಳಲ್ಲಿ ಜ್ಞಾನವೃದ್ಧಿಗೆ ಹಾಗೂ ಆತ್ಮವಿಶ್ವಾಸದ ಪೂರಕವಾದ ಮನೋಭಾವವನ್ನು ರೂಪಿಸುತ್ತವೆ. ಶಾಲೆಯ ಸಿಬ್ಬಂದಿ, ಶಿಕ್ಷಕರು, ಮತ್ತು ಆಡಳಿತ ಮಂಡಳಿಯ ಸಹಕಾರದಿಂದ ಈ ಪರೀಕ್ಷೆಯು ಅತ್ಯಂತ ಕ್ರಮಬದ್ಧವಾಗಿ ನಡೆಯಿತು.

# ಉತ್ತರ ಕರ್ನಾಟಕ ಗ್ಯಾಸ್ಟ್ರೋಎಂಟರಾಲಜಿ ಸಮಾವೇಶ: ವೈದ್ಯಕೀಯ ಕ್ಷೇತ್ರದಲ್ಲಿ ಕೌಶಲ್ಯ ಬೆಳೆಸಿಕೊಳ್ಳುವುದು ಅಗತ್ಯ: ಡಾ.ನರೇಶ ಭಟ್

**ಕಲಬುರಗಿ, ನ.10–** ವೈದ್ಯರು ವೈದ್ಯಕೀಯ ಕ್ಷೇತ್ರದಲ್ಲಿ ಕೌಶಲ್ಯತೆ ಬೆಳೆಸಿಕೊಳ್ಳಬೇಕು. ಕೌಶಲ್ಯದಿಂದ ಅನೇಕ ರೋಗಗಳನ್ನು ಗುಣಪಡಿಸಬಹುದು ಎಂದು ಬೆಂಗಳೂರಿನ ಗ್ಯಾಸ್ಟ್ರೋಎಂಟರಾಲಜಿಸ್ಟ್ ಡಾ.ನರೇಶ ಭಟ್ ಹೇಳಿದರು.

ನಗರದ ಮಹಾದೇವಪ್ಪ ರಾಂಪುರೆ ವೈದ್ಯಕೀಯ ಮಹಾವಿದ್ಯಾಲಯದ ಅಕಾಡೆಮಿಕ್ ಕೇಂದ್ರದಲ್ಲಿ ಗ್ಯಾಸ್ಟ್ರೋ ಸೊಸೈಟಿಯಿಂದ ಗ್ಯಾಸ್ಟ್ರೋಎಂಟರಾಲಜಿ ಮತ್ತು ಜನರಲ್ ಮೆಡಿಸಿನ್ ವಿಭಾಗದಿಂದ ಆಯೋಜಿಸಿದ್ದ ಉತ್ತರ ಕರ್ನಾಟಕ ಗ್ಯಾಸ್ಟ್ರೋಎಂಟರಾಲಜಿ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ವೈದ್ಯರಾದವರು ಕೇವಲ ಪದವಿ ಪೂರ್ಣಗೊಳಿಸಿದರೆ ಸಾಲದು ನಿರಂತರ ಅಧ್ಯಯನ ಮತ್ತು ಕೌಶಲ್ಯ ಜ್ಞಾನ ಬೆಳೆಸಿಕೊಂಡು ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಬೇಕು ಎಂದರು. ಇತಿಹಾಸದ ಜತೆಗೆ ಹೊಸ ತಂತ್ರಜ್ಞಾನ ಅಳವಡಿಸಿಕೊಳ್ಳಬೇಕು. ಹಳೆಯದು ಮರೆಯಬಾರದು. ಕಲಬುರಗಿಯವರೇ ಆದ ಡಾ.ವಿವೇಕ ಜವಳಿ, ಡಾ.ನಾಗರಾಜ ದೇಸಾಯಿ ಸೇರಿದಂತೆ ದೇಶದ ಟಾಪ್ ಸರ್ಜನ್‌ಗಳು ಉತ್ತರ ಕರ್ನಾಟಕದವರು. ಅಧ್ಯಯನಕ್ಕೆ ಇರುವ ಅವಕಾಶಗಳ ಸದುಪಯೋಗ ಪಡೆಸಿಕೊಂಡು ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಬೇಕು ಎಂದು ಸಲಹೆ ನೀಡಿದರು.



ಕಲಬುರಗಿ ನಗರದ ಮಹಾದೇವಪ್ಪ ರಾಂಪುರೆ ವೈದ್ಯಕೀಯ ಮಹಾವಿದ್ಯಾಲಯದ ಅಕಾಡೆಮಿಕ್ ಕೇಂದ್ರದಲ್ಲಿ ಉತ್ತರ ಕರ್ನಾಟಕ ಗ್ಯಾಸ್ಟ್ರೋಎಂಟರಾಲಜಿ ಸಮಾವೇಶವನ್ನು ಡಾ.ನರೇಶ ಭಟ್ ಉದ್ಘಾಟಿಸಿದರು.

ವೈದ್ಯಕೀಯ ಕ್ಷೇತ್ರದ ಪ್ರಮುಖ ಭಾಗವೇ ಆಗಿರುವ ಗ್ಯಾಸ್ಟ್ರೋಎಂಟರಾಲಜಿ ವಿಭಾಗದಲ್ಲಿ ವಿಪುಲ ಅವಕಾಶಗಳಿವೆ. ಜನರ ಆರೋಗ್ಯದಲ್ಲಿ ನಿರ್ಣಾಯಕ ಪಾತ್ರ ನಿರ್ವಹಿಸುತ್ತಿದೆ. 6 ದಶಕಗಳಲ್ಲಿ ಉತ್ತರ ಕರ್ನಾಟಕದ ವೈದ್ಯಕೀಯ ಕ್ಷೇತ್ರದಲ್ಲಿ ಬಹುದೊಡ್ಡ ಬದಲಾವಣೆಗಳಾಗಿವೆ. ವಿಶ್ವವಿಖ್ಯಾತ ಶಸ್ತ್ರಚಿಕಿತ್ಸಜ್ಞರು ಇಲ್ಲಿ ಅಧ್ಯಯನ ಮಾಡಿ, ಹೊರ ಬಂದಿದ್ದಾರೆ. ನಾನು ಸಹ ಇಲ್ಲಿನ ವೈದ್ಯ ವಿದ್ಯಾರ್ಥಿಯಾಗಿರುವುದನ್ನು ನೆನಪಿಸಿ ಕೊಂಡರು. ಹೆಚ್‌ಕೆಇ ಆಡಳಿತ ಮಂಡಳಿ ಸದಸ್ಯ, ಖ್ಯಾತ ವೈದ್ಯ ಡಾ.ಶರಣಬಸಪ್ಪ. ಆರ್. ಹರವಾಳ ಮಾತನಾಡಿ, ಭಾವಿ ವೈದ್ಯರು, ಕಿರಿಯ ವೈದ್ಯರು ಹಿರಿಯ ವೈದ್ಯರಿಂದ ಜ್ಞಾನ, ಕೌಶಲ ಪಡೆದುಕೊಂಡು ಗ್ಯಾಸ್ಟ್ರೋಎಂಟರಾಲಜಿಸ್ಟ್ ಕ್ಷೇತ್ರದಲ್ಲಿ ಅಮೋಘ ಸಾಧನೆ ಮಾಡಬೇಕು ಎಂದರು.

ಬೆಂಗಳೂರು ಸೇರಿದಂತೆ ಇತರ ಕಡೆ ರಾಜ್ಯ ಮಟ್ಟದ ಗ್ಯಾಸ್ಟ್ರೋಎಂಟರಾಲಜಿ ಸಮಾವೇಶ ಸಂಘಟಿಸಲಾಗಿದೆ. ಇದೇ ಮೊದಲ ಬಾರಿಗೆ ಕಲಬುರಗಿಯಲ್ಲಿ ಉತ್ತರ ಕರ್ನಾಟಕ ಭಾಗದ ಸಮ್ಮೇಳನ ಸಂಘಟಿಸಲಾಗಿದೆ. ಗ್ಯಾಸ್ಟ್ರೋಎಂಟರಾಲಜಿ ತಜ್ಞರು ನೀಡುವ ಉಪನ್ಯಾಸದ ಅಂಶಗಳನ್ನು ತಿಳಿದುಕೊಂಡು ಹೊಸ ಹೊಸ ಕೌಶಲ್ಯ ಬೆಳೆಸಿಕೊಳ್ಳಬೇಕು.

–ಡಾ.ಶಿವಾನಂದ ಪಾಟೀಲ್, ಅಧ್ಯಕ್ಷರು, ಉತ್ತರ ಕರ್ನಾಟಕ ಗ್ಯಾಸ್ಟ್ರೋಎಂಟರಾಲಜಿ ಕ್ಲಬ್, ಕಲಬುರಗಿ.

# ಕಾನೂನು ಅರಿವಿನಿಂದ ಅನಾಹುತ ತಪ್ಪಿಸಬಹುದು: ಮಾಯಣ್ಣವರ್ ಅಭಿಮತ



ಕಲಬುರಗಿ ಜಿಲ್ಲೆಯ ಅಫಜಲಪುರದಲ್ಲಿ ಅಂತರರಾಷ್ಟ್ರೀಯ ಕಾನೂನು ಸೇವಾ ದಿನದ ಅಂಗವಾಗಿ ನಡೆದ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ನ್ಯಾಯಾಧೀಶ ವಿನಾಯಕ ಮಾಯಾಣ್ಣನವರ್ ಉದ್ಘಾಟಿಸಿದರು.

**ಕಲಬುರಗಿ, ನ.10–** ಈ ದೇಶದ ಕಾನೂನು ಎಲ್ಲರಿಗೂ ಸಮಾನತೆ, ಸ್ವಾತಂತ್ರ್ಯ ನೀಡಿದೆ. ಹೀಗಾಗಿ ಎಲ್ಲರಿಗೂ ಕಾನೂನಿನ ಅರಿವು ಇರುವುದು ಅತ್ಯವಶವಾಗಿದೆ. ಕಾನೂನು ಅರಿವಿನಿಂದ ಅನೇಕ ಅನಾಹುತಗಳನ್ನು ತಪ್ಪಿಸಬಹುದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ತಾಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷ ವಿನಾಯಕ ಮಾಯಣ್ಣವರ್ ಹೇಳಿದರು.

ಅಫಜಲಪುರದ ಮಹಾಂತಮ್ಮ ಪಾಟೀಲ್ ಸ್ವತಂತ್ರ ಪಿಯು ಕಾಲೇಜಿನಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ, ಮಹಾಂತಮ್ಮ ಪಾಟೀಲ್ ಸ್ವತಂತ್ರ ಪದವಿ ಪೂರ್ವ ಕಲಾ ಹಾಗೂ ವಿಜ್ಞಾನ ಮಹಾವಿದ್ಯಾಲಯದ ಆಶ್ರಯದಲ್ಲಿ ನಡೆದ ಅಂತರಾಷ್ಟ್ರೀಯ ಕಾನೂನು ಸೇವಾ ದಿನದ ಅಂಗವಾಗಿ ನಡೆದ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬಡವರು, ಹಿರಿಯ ನಾಗರಿಕರು, ಆರ್ಥಿಕವಾಗಿ ಕಷ್ಟದಲ್ಲಿರುವ ಜನರಿಗೆ, ಬಡವರಿಗೆ ತಾಲೂಕು ಕಾನೂನು ಸೇವಾ ಸಮಿತಿಯಿಂದ ಉಚಿತವಾಗಿ ಸೇವೆ ನೀಡಲಾಗುತ್ತಿದ್ದು, ಇದನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ವಕೀಲರಾದ ಡಿ. ಮಂಜುನಾಥ ತೆಲ್ಲೂರ, ಸುಪ್ರಿಯಾ ಅಂಕಲಗಿ ರಾಷ್ಟ್ರೀಯ ಕಾನೂನು ಸೇವಾ ದಿವಸ ಅಂಗವಾಗಿ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಧ್ಯೇಯೋದ್ದೇಶಗಳು ಹಾಗೂ ಜನನ–ಮರಣ ನೊಂದಣಿ ಕಾಯ್ದೆ, ಮೋಟಾರ್ ವಾಹನ ಚಾಲನೆ ನೊಂದಣಿ ಮತ್ತು ವಿಮೆ, ಬಾಲ್ಯವಿವಾಹ ನಿಷೇಧ ಕುರಿತು ಉಪನ್ಯಾಸ ನೀಡಿದರು.

ಸರ್ಕಾರಿ ಸಹಾಯಕ ಅಭಿಯೋಜಕಿ ಜಯಶ್ರೀ ಗಣಾಚಾರಿ, ಹೆಚ್ಚುವರಿ ಸರ್ಕಾರಿ ವಕೀಲ ಡಿ.ಡಿ ದೇಶಪಾಂಡೆ, ವಕೀಲರ ಸಂಘದ ಅಧ್ಯಕ್ಷ ಎಸ್.ಎಸ್ ಪಾಟೀಲ್, ಸುರೇಶ ಅವಟೆ, ಪ್ರಾಚಾರ್ಯ ವೀರಣ್ಣಗೌಡ, ಗುಂಡಯ್ಯ ಸ್ವಾಮಿ, ಅಶೋಕ ತಂಬಾಕೆ, ಚಿದಾನಂದ, ರಾಜೇಶ್ವರಿ ಹಿರೇಮಠ, ಪ್ರಭಾವತಿ ಮೇತ್ರಿ, ಮಾದೇಶ ನಾಯಕ, ಶಂಕರ ದೊಡ್ಮನಿ, ಬಿ.ಎಸ್ ಬಿರಾದಾರ ಮತ್ತಿತರರಿದ್ದರು.

# ಕ್ರೀಡೆಗಳಿಂದ ಧೈರ್ಯ, ಸಾಹಸ ಗುಣ ವೃದ್ಧಿ: ಶಾಸಕ ಶಶಿಲ್ ನಮೋಶಿ



ಕಲಬುರಗಿಯಲ್ಲಿ ವಾರ್ಷಿಕ ಕ್ರೀಡಾಕೂಟಕ್ಕೆ ಎಚ್‌ಕೆಇ ಸೊಸೈಟಿ ಅಧ್ಯಕ್ಷರೂ ಆದ ವಿಧಾನ ಪರಿಷತ್ ಸದಸ್ಯ ಶಶಿಲ್ ನಮೋಶಿ ಉದ್ಘಾಟಿಸಿದರು.

**ಕಲಬುರಗಿ, ನ.10–** ವೈಯಕ್ತಿಕ ಓರೆ ಕೋರೆಗಳನ್ನು ತಿದ್ದಿಕೊಂಡು ಹೊಂದಾಣಿಕೆಯ ಮನೋಭಾವ ಬೆಳೆಸಿಕೊಳ್ಳಲು ಕ್ರೀಡೆ ನೆರವಾಗುತ್ತದೆ. ದೈಹಿಕ, ಮಾನಸಿಕ ಬೆಳವಣಿಗೆಗೆ ಸಹಾಯುವಾಗಿ ಧೈರ್ಯ ಮತ್ತು ಸಾಹಸ ಗುಣಗಳನ್ನು ವೃದ್ಧಿಸಲಿದೆ ಎಂದು ಎಚ್‌ಕೆಇ ಸೊಸೈಟಿಯ ಅಧ್ಯಕ್ಷರೂ ಆದ ವಿಧಾನ ಪರಿಷತ್ ಸದಸ್ಯ ಶಶಿಲ್ ನಮೋಶಿ ಹೇಳಿದರು.

ಎಚ್‌ಕೆಇ ಸಂಸ್ಥೆ ಸಿಬ್ಬಂದಿಗಳ 2024 ನೇ ಸಾಲಿನ ವಾರ್ಷಿಕ ಕ್ರೀಡಾಕೂಟ ಉದ್ಘಾಟಿಸಿದ ಮಾತನಾಡಿದ ಅವರು, ಎಲ್ಲ ಶಾಲಾ ಕಾಲೇಜುಗಳಲ್ಲಿ ಕ್ರೀಡೆಗಳಿಗೆ ಹೆಚ್ಚಿನ ಮಹತ್ವ ನೀಡಿ ಅತ್ಯುತ್ತಮ ಕ್ರೀಡಾ ಪಟುಗಳನ್ನು ತಯಾರಿಸುವ ಜವಾಬ್ದಾರಿ ನಮ್ಮ ಕ್ರೀಡಾ ಶಿಕ್ಷಕರ ಮೇಲಿದೆ ಎಂದು ಹೇಳಿದರು.

ಕ್ರೀಡಾಕ್ಷೇತ್ರವು ಇಚ್ಛಾಶಕ್ತಿ, ಏಕಾಗ್ರತೆ ಮತ್ತು ಸ್ಪರ್ಧಾ ಮನೋಭಾವ ವನ್ನು ಬೆಳೆಸಲಿದೆ. ನಿರಂತರವಾದ ಕಠಿಣ ಪ್ರಯತ್ನದಿಂದ ಮಾತ್ರ ಸಾಧನೆ ಮಾಡಲು ಸಾಧ್ಯ. ಸೋಲು ಕೊನೆಯಲ್ಲ. ಸೋಲೇ ಗೆಲುವಿನ ಸೋಪಾನ. ಕ್ರೀಡೆಯಲ್ಲಿ ಪರಿಣಿತರಾದವರಿಗೆ ಶೈಕ್ಷಣಿಕ ಕ್ಷೇತ್ರದಲ್ಲೂ ಹಲವಾರು ಅವಕಾಶ ಗಳಿವೆ. ಭಾಗವಹಿಸಿದ ಎಲ್ಲಾ ಕ್ರೀಡಾಪಟುಗಳಿಗೆ ಉಜ್ವಲ ಭವಿಷ್ಯವಿದೆ. ನಮ್ಮ ಸಂಸ್ಥೆಯ ಎಲ್ಲಾ ಶಾಲಾ ಕಾಲೇಜುಗಳಲ್ಲಿ 3 ರಿಂದ 4 ಕ್ರೀಡೆಗಳನ್ನು ಆಯ್ದುಕೊಂಡು ಅವುಗಳಲ್ಲಿ ವಿದ್ಯಾರ್ಥಿಗಳನ್ನು ತೊಡಗಿಸಬೇಕೆಂದು ಹೇಳಿದರು.

### ತೋಟಗಾರಿಕೆ ಮಹಾವಿದ್ಯಾಲಯಗಳ ಯುವಜನೋತ್ಸವ

# ಸಮಗ್ರ ವೀರಾಗ್ರಣಿ ಮುಡಿಗೇರಿಸಿಕೊಂಡ ಬೆಂಗಳೂರು ಮಹಾವಿದ್ಯಾಲಯ

**ಬೀದರ್, ನ.10–** ಕಳೆದ ಮೂರು ದಿನಗಳಿಂದ ನಡೆದ 15ನೇ ಅಂತರ್ ತೋಟಗಾರಿಕೆ ಮಹಾವಿದ್ಯಾಲಯಗಳ ಯುವಜನೋತ್ಸವ–ಕಲಾ ಬಿದರಿ ಸಂಗಮ ಅರ್ಥಪೂರ್ಣವಾಗಿ ಸಮಾರೋಪಗೊಂಡಿತು. ಮೂರು ದಿನ ನಡೆದ ಸಮಾರಂಭದಲ್ಲಿ ನಾಟಕ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆದವು. ಅದರಲ್ಲಿ ಬೆಂಗಳೂರಿನ ತೋಟಗಾರಿಕೆ ಮಹಾವಿದ್ಯಾಲಯ ಸಮಗ್ರ ವೀರಾಗ್ರಣಿ ಪ್ರಶಸ್ತಿ ಪಡೆಯಿತು.

ಬೆಂಗಳೂರು ಮಹಾವಿದ್ಯಾಲಯ 82 ಅಂಕದೊಂದಿಗೆ ಚಾಂಪಿಯನ್ ಪಟ್ಟ ಅಲಂಕರಿಸಿದರೆ, ಕಿತ್ತೂರು ರಾಣಿ ಚೆನ್ನಮ್ಮ ಮಹಾವಿದ್ಯಾಲಯ ಅರಭಾವಿ ಒಟ್ಟು 71 ಅಂಕದೊಂದಿಗೆ ರನ್ನರ್ ಅಪ್ ಸ್ಥಾನ ಪಡೆದಿದ್ದರೆ, ಬೀದರ್‌ನ ತೋಟಗಾರಿಕಾ ಮಹಾವಿದ್ಯಾಲಯ 59 ಅಂಕದೊಂದಿಗೆ ಮೂರನೇ ಸ್ಥಾನ ಪಡೆದಿದೆ.

**ಸಂಗೀತ ಸ್ಪರ್ಧೆ:** ಬೆಂಗಳೂರಿನ ತೋಟಗಾರಿಕಾ ಮಹಾವಿದ್ಯಾಲಯ 16 ಅಂಕಗಳೊಂದಿಗೆ ಚಾಂಪಿಯನ್ಶಿಪ್ ಮತ್ತು 10 ಅಂಕದೊಂದಿಗೆ ಶಿರಸಿ ತೋಟಗಾರಿಕಾ ಮಹಾವಿದ್ಯಾಲಯ ರನ್ನರ್ ಅಪ್ ಸ್ಥಾನ ಪಡೆದುಕೊಂಡಿತು.

**ನಾಟಕಸ್ಪರ್ಧೆ:** ಹಾವೇರಿ ಜಿಲ್ಲೆಯ ಅರಭಾವಿಯ ಮಹಾವಿದ್ಯಾಲಯ 30 ಅಂಕಗಳೊಂದಿಗೆ ಚಾಂಪಿಯನ್ ಹಾಗೂ ಬೀದರ್ ಮಹಾವಿದ್ಯಾಲಯ 26 ಅಂಕಗಳೊಂದಿಗೆ ರನ್ನರ್ ಅಪ್ ಸ್ಥಾನ ಪಡೆಯಿತು.

**ಲಲಿತ ಕಲೆ ಸ್ಪರ್ಧೆ:** ಬೆಂಗಳೂರು ಮಹಾವಿದ್ಯಾಲಯ 26 ಅಂಕದೊಂದಿಗೆ ಚಾಂಪಿಯನ್‌ಶಿಪ್ ಆಗಿದ್ದು, ಕಿತ್ತೂರು ರಾಣಿ ಚನ್ನಮ್ಮ ಮಹಾವಿದ್ಯಾಲಯ ಹಾಗೂ ಮೈಸೂರು ಮಹಾವಿದ್ಯಾಲಯ 20 ಅಂಕಗಳೊಂದಿಗೆ ಜಂಟಿ ರನ್ನರ್ ಅಪ್ ಪಡೆದಿವೆ. ಸಾಹಿತ್ಯ ಸ್ಪರ್ಧೆ: ಶಿರಸಿ 17 ಅಂಕದೊಂದಿಗೆ ಚಾಂಪಿಯನ್ ಆಗಿದ್ದರೆ, ಬೀದರ್ ಮಹಾವಿದ್ಯಾಲಯ 16 ಅಂಕದೊಂದಿಗೆ ರನ್ನರ್ ಅಪ್ ಪಡೆದಿದೆ.

# ಖಲಿಸ್ತಾನಿ ಉಗ್ರ ನಿಜ್ಜರ್ ಆಪ್ತ ಅರ್ಶ್ ಡಲ್ಲಾ ಸೆರೆ



**ಒಟ್ಟಾವಾ,ನ.10:** ಮಹತ್ವದ ಬೆಳವಣಿಗೆಯಲ್ಲಿ ಕೆನಡಾದಲ್ಲಿ ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜರ್ ಆಪ್ತ ಅರ್ಶ್ ಡಲ್ಲಾ ಅಲಿಯಾಸ್ ಅರ್ಶ್‌ದೀಪ್ ಸಿಂಗ್‌ನನ್ನು ಕೆನಡಾದಲ್ಲಿ ಬಂಧಿಸಲಾಗಿದೆ ಎಂದು ತಿಳಿದುಬಂದಿದೆ.

ಕಳೆದ ಅ.27 ಅಥವಾ 28 ರಂದು ಮಿಲ್ಟನ್ ಟೌನ್‌ನಲ್ಲಿ ನಡೆದ ಶೂಟೌಟ್‌ಗೆ ಸಂಬಂಧಿಸಿದಂತೆ ಕೆನಡಾದ ಪೊಲೀಸರು ಅರ್ಶ್ ಡಲ್ಲಾ ನನ್ನು ಬಂಧಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಡಲ್ಲಾ ಬಂಧನದ ಬಗ್ಗೆ ಮಾಹಿತಿಯನ್ನು ಪಡೆಯುತ್ತಿರುವುದನ್ನು ಭಾರತೀಯ ಭದ್ರತಾ ಏಜೆನ್ಸಿಗಳ ಮೂಲಗಳು ಖಚಿತಪಡಿಸಿವೆ.

ಭಾರತೀಯ ಗುಪ್ತಚರ ಸಂಸ್ಥೆಗಳ ಪ್ರಕಾರ, ಭಾರತದಲ್ಲಿ ವಿವಿಧ ಅಪರಾಧ ಚಟುವಟಿಕೆಗಳಿಗೆ ಬೇಕಾಗಿರುವ ಅರ್ಶ್ ಡಲ್ಲಾ ತನ್ನ ಹೆಂಡತಿಯೊಂದಿಗೆ ಕೆನಡಾದಲ್ಲಿ ವಾಸಿಸುತ್ತಿದ್ದಾನೆ. ಕೆನಡಾದ ಕಾನೂನು ಜಾರಿ ಸಂಸ್ಥೆಗಳು, ವಿಶೇಷವಾಗಿ ಹಾಲ್ಟನ್ ಪ್ರಾದೇಶಿಕ ಪೊಲೀಸ್ ಸೇವೆ , ಈ ಶೂಟೌಟ್ ಪ್ರಕರಣದ ತನಿಖೆ ನಡೆಸುತ್ತಿದೆ. ಭಾರತೀಯ ಅಧಿಕಾರಿಗಳು ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ ಮತ್ತು ಹೆಚ್ಚಿನ ವಿವರಗಳಿಗಾಗಿ ಕೆನಡಾದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ಅರ್ಶ್ ಡಲ್ಲಾ ಖಲಿಸ್ತಾನಿ ಟೈಗರ್ ಫೋರ್ಸ್‌ನ ಹಂಗಾಮಿ ಮುಖ್ಯಸ್ಥನಾಗಿದ್ದ. ಈ ಹಿಂದೆ ಹತ್ಯೆಗೀಡಾದ ಮತ್ತೋರ್ವ ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜರ್‌ನ ಆಪ್ತನಾಗಿದ್ದ ಮತ್ತು ಆತನ ಸಾವಿನ ಬಳಿಕ ಈತನೇ ಖಲಿಸ್ತಾನಿ ಹೋರಾಟದ ಉತ್ತರಾಧಿಕಾರಿಯಾಗಿ ಕಾಣಿಸಿಕೊಂಡಿದ್ದ.

ಈ ವರ್ಷದ ಸೆಪ್ಟೆಂಬರ್‌ನಲ್ಲಿ, ಪಂಜಾಬ್‌ನ ಮೋಗಾ ಜಿಲ್ಲೆಯ ತನ್ನ ನಿವಾಸದಲ್ಲಿ ಗುಂಡಿಕ್ಕಿ ಕೊಲ್ಲಲಾದ ಕಾಂಗ್ರೆಸ್ ನಾಯಕ ಬಲ್ಜಿಂದರ್ ಸಿಂಗ್ ಬಲ್ಲಿ ಅವರ ಹತ್ಯೆಯ ಹೊಣೆಯನ್ನು ಇದೇ ಡಲ್ಲಾ ವಹಿಸಿಕೊಂಡಿದ್ದ. ಈ ಕುರಿತು ಟ್ವೀಟ್ ಮಾಡಿದ್ದ ಈತ ತನ್ನ ಪೋಸ್ಟ್‌ನಲ್ಲಿ, ಬಲ್ಜಿಂದರ್ ಸಿಂಗ್ ಬಲ್ಲಿ ತನ್ನ ಭವಿಷ್ಯವನ್ನು ಹಾಳುಮಾಡಿದ್ದಾನೆ. ತನ್ನ ತಾಯಿಯ ಪೊಲೀಸ್ ಕಸ್ಟಡಿ ಹಿಂದೆ ಇದೇ ಕಾಂಗ್ರೆಸ್ ಮುಖಂಡನ ಕೈವಾಡವಿದೆ. ಇದು ಸೇಡು ತೀರಿಸಿಕೊಳ್ಳಲು ಪ್ರೇರೇಪಿಸಿತು ಎಂದು ಟ್ವೀಟ್ ಮಾಡಿದ್ದ. ಅಂದಹಾಗೆ ಭಾರತದ ರಾಷ್ಟ್ರೀಯ ತನಿಖಾ ಸಂಸ್ಥೆಯ ಭಯೋತ್ಪಾದಕರ ಪಟ್ಟಿಯಲ್ಲಿರುವ ವಾಂಟೆಡ್ ವ್ಯಕ್ತಿ ಅರ್ಶ್ ಡಲ್ಲಾ ಕಳೆದ ಮೂರ್ನಾಲ್ಕು ವರ್ಷಗಳಿಂದ ಕೆನಡಾದಲ್ಲಿರುವ ತನ್ನ ನೆಲೆಯಿಂದ ಪಂಜಾಬ್‌ನಲ್ಲಿ ಅಪರಾಧ ಚಟುವಟಿಕೆಗಳನ್ನು ನಡೆಸುತ್ತಿದ್ದಾನೆ ಎಂದು ಆರೋಪಿಸಲಾಗಿದೆ. ಮೊಗಾದ ಸ್ಥಳೀಯರಾದ ಡಲ್ಲಾ ಅವರು ಪಂಜಾಬ್‌ನಲ್ಲಿ ಅನೇಕ ಉದ್ದೇಶಿತ ಹತ್ಯೆಗಳ ಆರೋಪಿಯಾಗಿದ್ದಾನೆ.

# ಹಸೀನಾ ವಾಪಸ್ ಕರೆತರಲು ಇಂಟರ್‌ಪೋಲ್ ನೆರವು



**ಢಾಕಾ,ನ.10:** ಮಾನವೀಯತೆಯ ವಿರುದ್ಧದ ಅಪರಾಧಗಳ ವಿಚಾರಣೆಯನ್ನು ಎದುರಿಸಲು ಮಾಜಿ ಪ್ರಧಾನಿ ಶೇಖ್ ಹಸೀನಾ ಮತ್ತು ಇತರ ಆರೋಪಿಗಳನ್ನು ಭಾರತದಿಂದ ಕರೆತರಲು ಇಂಟರ್‌ಪೋಲ್‌ನ ಸಹಾಯ ಕೋರುವುದಾಗಿ ಬಾಂಗ್ಲಾದೇಶದ ಮಧ್ಯಂತರ ಸರ್ಕಾರ ಭಾನುವಾರ ಹೇಳಿದೆ.

ವಿವಾದಾತ್ಮಕ ಉದ್ಯೋಗ ಮೀಸಲಾತಿಗೆ ಸಂಬಂಧಿಸಿದಂತೆ ಹಸೀನಾ ನೇತೃತ್ವದ ಅವಾಮಿ ಲೀಗ್ ಸರ್ಕಾರದ ವಿರುದ್ಧ ಕಳೆದ ಆಗಸ್ಟ್‌ನಲ್ಲಿ ಪ್ರತಿಭಟನೆಗಳು ಭುಗಿಲೆದ್ದಿದ್ದವು. ಈ ವೇಳೆ ಅಪಾರ ಪ್ರಮಾಣದ ಸಾವುನೋವು ಸಂಭವಿಸಿದ್ದು, ಘಟನೆಗೆ ಹಸೀನಾ ಸರ್ಕಾರದ ಹಿಂಸಾತ್ಮಕ ನೀತಿಗಳು ಕಾರಣ ಎಂದು ಆರೋಪಿಸಲಾಗಿದೆ. ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ ಆಗಸ್ಟ್ 5ರಂದು ಹಸೀನಾ ಭಾರತಕ್ಕೆ ಪಲಾಯನ ಮಾಡಿದ್ದರು. 'ಪ್ರತಿಭಟನೆಯ ಸಮಯದಲ್ಲಿ ಕನಿಷ್ಠ 753 ಜನ ಮೃತಪಟ್ಟು, ಸಾವಿರಾರು ಮಂದಿ ಗಾಯಗೊಂಡಿದ್ದರು. ಇದು ಮಾನವೀಯತೆಯ ವಿರುದ್ಧದ ಅಪರಾಧ ಹಾಗೂ ನರಮೇಧ' ಎಂದು ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರ ಪ್ರತಿಪಾದಿಸಿದೆ.

**60ಕ್ಕೂ ಹೆಚ್ಚು ದೂರು ದಾಖಲು:**

ಹಸೀನಾ ಮತ್ತು ಅವರ ಪಕ್ಷದ ನಾಯಕರ ವಿರುದ್ಧ ಬಾಂಗ್ಲಾದ ಅಂತರರಾಷ್ಟ್ರೀಯ ಅಪರಾಧಗಳ ನ್ಯಾಯಮಂಡಳಿ (ಐಸಿಟಿ) ಮತ್ತು ಪ್ರಾಸಿಕ್ಯೂಷನ್ಗೆ ಮಾನವೀಯತೆಯ ವಿರುದ್ಧದ ಅಪರಾಧಗಳು ಮತ್ತು ನರಮೇಧ ಪ್ರಕರಣದ ಸಂಬಂಧ 60ಕ್ಕೂ ಹೆಚ್ಚು ದೂರುಗಳು ದಾಖಲಾಗಿವೆ.

**ಶೀಘ್ರದಲ್ಲೇ ರೆಡ್‌ಕಾರ್ನರ್ ನೋಟಿಸ್:**

'ಇಂಟರ್ಪೋಲ್ ಮೂಲಕ ಶೀಘ್ರದಲ್ಲೇ ರೆಡ್ ಕಾರ್ನರ್ ನೋಟಿಸ್ ನೀಡಲಾಗುವುದು. ಈ ಪಲಾಯನವಾದಿ ಫ್ಯಾಸಿಸ್ಟ್‌ಗಳು ಜಗತ್ತಿನ ಯಾವ ಮೂಲೆಯಲ್ಲಿ ಅಡಗಿಕೊಂಡಿದ್ದರೂ, ಅವರನ್ನು ಮರಳಿ ಕರೆತಂದು ನ್ಯಾಯಾಲಯದಲ್ಲಿ ಹೊಣೆಗಾರರನ್ನಾಗಿ ಮಾಡಲಾಗುವುದು' ಎಂದು ಕಾನೂನು ವ್ಯವಹಾರಗಳ ಸಲಹೆಗಾರ ಆಸಿಫ್ ನಜ್ರುಲ್ ತಿಳಿಸಿದ್ದಾರೆ. ಹಸೀನಾ ಮತ್ತು ಅವಾಮಿ ಲೀಗ್ ನಾಯಕರನ್ನು ಐಸಿಟಿ ನ್ಯಾಯಮಂಡಳಿಯಲ್ಲಿ ವಿಚಾರಣೆಗೆ ಒಳಪಡಿಸಲಾಗುವುದು ಎಂದು ಬಾಂಗ್ಲಾ ಮಧ್ಯಂತರ ಸರ್ಕಾರ ಈ ಹಿಂದೆ ಹೇಳಿತ್ತು. ಆದಾಗ್ಯೂ, ಕಳೆದ ತಿಂಗಳು ಯುಕೆ ಮೂಲದ ಫೈನಾನ್ಷಿಯಲ್ ಟೈಮ್ಸ್ ಪತ್ರಿಕೆಗೆ ನೀಡಿದ ಸಂದರ್ಶನದಲ್ಲಿ ಯೂನಸ್ ಅವರು, ಹಸೀನಾರನ್ನು ಭಾರತದಿಂದ ಹಸ್ತಾಂತರಿಸುವ ಬಗ್ಗೆ ತಮ್ಮ ಸರ್ಕಾರ ತಕ್ಷಣವೇ ಪ್ರಯತ್ನಿಸುವುದಿಲ್ಲ ಎಂದೂ ಹೇಳಿದ್ದರು.

# ರಷ್ಯಾದ ರಾಜಧಾನಿ ಮೇಲೆ ಉಕ್ರೇನ್ ಡ್ರೋನ್ ದಾಳಿ



**ಮಾಸ್ಕೋ,ನ.10:** ಉಕ್ರೇನ್ ಭಾನುವಾರ ಕನಿಷ್ಠ 34 ಡ್ರೋನ್‌ಗಳೊಂದಿಗೆ ಮಾಸ್ಕೋ ಮೇಲೆ ದಾಳಿ ನಡೆಸಿದೆ, ಇದು 2022 ರಲ್ಲಿ ಯುದ್ಧ ಪ್ರಾರಂಭವಾದ ನಂತರ ರಷ್ಯಾದ ರಾಜಧಾನಿಯ ಮೇಲೆ ನಡೆದ ಅತಿದೊಡ್ಡ ಡ್ರೋನ್ ದಾಳಿಯಾಗಿದೆ,

ನಗರದ ಮೂರು ಪ್ರಮುಖ ವಿಮಾನ ನಿಲ್ದಾಣಗಳಿಂದ ವಿಮಾನಗಳನ್ನು ಬೇರೆಡೆಗೆ ತಿರುಗಿಸಲು ಒತ್ತಾಯಿಸಿದೆ ಮತ್ತು ಕನಿಷ್ಠ ಒಬ್ಬ ವ್ಯಕ್ತಿ ಗಾಯಗೊಂಡಿದ್ದಾರೆ. ರಷ್ಯಾದ ವಾಯು ರಕ್ಷಣಾ ಪಡೆಗಳು ಭಾನುವಾರ ಮೂರು ಗಂಟೆಗಳಲ್ಲಿ ಪಶ್ಚಿಮ ರಷ್ಯಾದ ಇತರ ಪ್ರದೇಶಗಳ ಮೇಲೆ ಇನ್ನೂ 36 ಡ್ರೋನ್ಗಳನ್ನು ನಾಶಪಡಿಸಿವೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. "ರಷ್ಯಾ ಒಕ್ಕೂಟದ ಭೂಪ್ರದೇಶದಲ್ಲಿ ವಿಮಾನ ಮಾದರಿಯ ಡ್ರೋನ್‌ಗಳನ್ನು ಬಳಸಿಕೊಂಡು ಭಯೋತ್ಪಾದಕ ದಾಳಿ ನಡೆಸುವ ಕೈವ್ ಆಡಳಿತದ ಪ್ರಯತ್ನವನ್ನು ವಿಫಲಗೊಳಿಸಲಾಗಿದೆ" ಎಂದು ಸಚಿವಾಲಯ ತಿಳಿಸಿದೆ. ಡೊಮೊಡೆಡೊವೊ, ಶೆರೆಮೆಟ್ಯೆವೊ ಮತ್ತು ಝುಕೋವ್ಸ್ಕಿ ವಿಮಾನ ನಿಲ್ದಾಣಗಳು ಕನಿಷ್ಠ 36 ವಿಮಾನಗಳನ್ನು ಬೇರೆಡೆಗೆ ತಿರುಗಿಸಿದವು, ಆದರೆ ನಂತರ ಕಾರ್ಯಾಚರಣೆಯನ್ನು ಪುನರಾರಂಭಿಸಿದವು ಎಂದು ರಷ್ಯಾದ ಫೆಡರಲ್ ವಾಯು ಸಾರಿಗೆ ಸಂಸ್ಥೆ ತಿಳಿಸಿದೆ. ಮಾಸ್ಕೋ ಪ್ರದೇಶದಲ್ಲಿ ಒಬ್ಬ ವ್ಯಕ್ತಿ ಗಾಯಗೊಂಡಿದ್ದಾನೆ ಎಂದು ವರದಿಯಾಗಿದೆ.

ಕನಿಷ್ಠ 21 ದಶಲಕ್ಷ ಜನಸಂಖ್ಯೆಯನ್ನು ಹೊಂದಿರುವ ಮಾಸ್ಕೋ ಮತ್ತು ಅದರ ಸುತ್ತಮುತ್ತಲಿನ ಪ್ರದೇಶವು ಇಸ್ತಾಂಬುಲ್ ಜೊತೆಗೆ ಯುರೋಪಿನ ಅತಿದೊಡ್ಡ ಮೆಟ್ರೋಪಾಲಿಟನ್ ಪ್ರದೇಶಗಳಲ್ಲಿ ಒಂದಾಗಿದೆ. ರಷ್ಯಾ ರಾತ್ರೋರಾತ್ರಿ ದಾಖಲೆಯ 145 ಡ್ರೋನ್‌ಗಳನ್ನು ಉಡಾವಣೆ ಮಾಡಿದೆ ಎಂದು ಉಕ್ರೇನ್ ಹೇಳಿದೆ. ಅವುಗಳಲ್ಲಿ 62 ಅನ್ನು ತನ್ನ ವಾಯು ರಕ್ಷಣಾ ಪಡೆಗಳು ಹೊಡೆದುರುಳಿಸಿವೆ ಎಂದು ಕೈವ್ ಹೇಳಿದರು. ರಷ್ಯಾದ ಬ್ರಿಯಾನ್ಸ್ಕ್ ಪ್ರದೇಶದ ಶಸ್ತ್ರಾಗಾರದ ಮೇಲೆ ದಾಳಿ ನಡೆಸಿರುವುದಾಗಿ ಉಕ್ರೇನ್ ಹೇಳಿದೆ, ಈ ಪ್ರದೇಶದಲ್ಲಿ 14 ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ ಎಂದು ವರದಿಯಾಗಿದೆ. ರಷ್ಯಾದ ಟೆಲಿಗ್ರಾಮ್ ಚಾನೆಲ್‌ಗಳಲ್ಲಿ ಪೋಸ್ಟ್ ಮಾಡಲಾದ ಪರಿಶೀಲಿಸದ ವೀಡಿಯೊದಲ್ಲಿ ಡ್ರೋನ್‌ಗಳು ಆಕಾಶದಾದ್ಯಂತ ಗಿಜಿಗುಡುತ್ತಿರುವುದನ್ನು ತೋರಿಸಿದೆ. ಯುದ್ಧದ ಆರಂಭಿಕ ದಿನಗಳಿಂದಲೂ ಮಾಸ್ಕೋ ಪಡೆಗಳು ವೇಗವಾಗಿ ಮುನ್ನಡೆದ ನಂತರ ಮತ್ತು ಡೊನಾಲ್ಡ್ ಟ್ರಂಪ್ ಅಮೆರಿಕದ 47 ನೇ ಅಧ್ಯಕ್ಷರಾಗಿ ಆಯ್ಕೆಯಾದ ನಂತರ ಉಕ್ರೇನ್‌ನಲ್ಲಿ 2–1/2 ವರ್ಷಗಳ ಯುದ್ಧವು ಅದರ ಅಂತಿಮ ಕ್ರಮವಾಗಿದೆ ಎಂದು ಕೆಲವು ಅಧಿಕಾರಿಗಳು ಹೇಳುತ್ತಾರೆ.

ಜನವರಿಯಲ್ಲಿ ಅಧಿಕಾರ ವಹಿಸಿಕೊಳ್ಳಲಿರುವ ಟ್ರಂಪ್, ಪ್ರಚಾರದ ಸಮಯದಲ್ಲಿ 24 ಗಂಟೆಗಳಲ್ಲಿ ಉಕ್ರೇನ್‌ನಲ್ಲಿ ಶಾಂತಿಯನ್ನು ತರಬಹುದು ಎಂದು ಹೇಳಿದರು, ಆದರೆ ಇದನ್ನು ಹೇಗೆ ಮಾಡಲು ಪ್ರಯತ್ನಿಸುತ್ತಾರೆ ಎಂಬುದರ ಕುರಿತು ಕೆಲವು ವಿವರಗಳನ್ನು ನೀಡಿದ್ದಾರೆ. ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಜೆಲೆನ್ಸ್ಕಿ ಅವರು ಟ್ರಂಪ್ ಅವರಿಗೆ ಕರೆ ಮಾಡಿ ಅಧ್ಯಕ್ಷೀಯ ಚುನಾವಣೆಯ ವಿಜಯಕ್ಕಾಗಿ ಅಭಿನಂದಿಸಿದಾಗ, ಟೆಸ್ಲಾ ಸಿಇಒ ಮತ್ತು ಟ್ರಂಪ್ ಬೆಂಬಲಿಗ ಎಲೋನ್ ಮಸ್ಕ್ ಕರೆಯಲ್ಲಿ ಸೇರಿಕೊಂಡರು ಎಂದು ಮಾಧ್ಯಮ ವರದಿಗಳು ತಿಳಿಸಿವೆ. ಮಸ್ಕ್ ಸ್ಪೇಸ್‌ಎಕ್ಸ್ ಅನ್ನು ಹೊಂದಿದ್ದಾರೆ, ಇದು ಉಕ್ರೇನ್‌ನ ರಕ್ಷಣಾ ಪ್ರಯತ್ನಕ್ಕೆ ಪ್ರಮುಖವಾದ ಸ್ಟಾರ್ಲಿಂಕ್ ಉಪಗ್ರಹ ಸಂವಹನ ಸೇವೆಗಳನ್ನು ಒದಗಿಸುತ್ತದೆ.

# ದೃಷ್ಟಿ ಮರುಸ್ಥಾಪನೆಗೆ ಜಪಾನ್‌ನ ವಿಶ್ವದ ಮೊದಲ ಸ್ಟೆಮ್‌ಸೆಲ್ ಚಿಕಿತ್ಸೆ ಆರಂಭ



**ಟೋಕಿಯೋ,ನ.10:** ಜಪಾನ್‌ನ ಒಸಾಕಾ ವಿಶ್ವವಿದ್ಯಾಲಯದ ಸಂಶೋಧನಾ ತಂಡವು ಸ್ಟೆಮ್ ಸೆಲ್ ಥೆರಪಿಯನ್ನು ಬಳಸಿಕೊಂಡು ಕುರುಡುತನದ ಚಿಕಿತ್ಸೆಯಲ್ಲಿ ಪ್ರಗತಿಯನ್ನು ಸಾಧಿಸಿದೆ. ಲಿಂಬಲ್ ಸ್ಟೆಮ್ ಸೆಲ್ ಡೆಫಿಶಿಯನ್ಸಿ ಯಿಂದ ಬಳಲುತ್ತಿರುವ ರೋಗಿಗಳಲ್ಲಿ ಸಂಶೋಧಕರು ಯಶಸ್ವಿಯಾಗಿ ದೃಷ್ಟಿಯನ್ನು ಪುನಃಸ್ಥಾಪಿಸಿದ್ದಾರೆ. ಇದು ದೃಷ್ಟಿಯನ್ನು ತೀವ್ರವಾಗಿ ದುರ್ಬಲಗೊಳಿಸುವ ಮತ್ತು ಐತಿಹಾಸಿಕವಾಗಿ ಚಿಕಿತ್ಸೆ ನೀಡಲು ಕಷ್ಟಕರವಾಗಿದೆ. ಎಲ್‌ಎಸ್‌ಸಿಡಿ ಕಣ್ಣಿನ ಕಾರ್ನಿಯಾವನ್ನು ಹಾನಿಗೊಳಿಸುತ್ತದೆ, ಇದು ನಿರಂತರ ನೋವು, ದೃಷ್ಟಿ ದೌರ್ಬಲ್ಯ ಮತ್ತು ಆಗಾಗ್ಗೆ ಕುರುಡುತನಕ್ಕೆ ಕಾರಣವಾಗುತ್ತದೆ. ಎಲ್‌ಎಸ್‌ಸಿಡಿಗೆ ಸಾಂಪ್ರದಾಯಿಕ ಚಿಕಿತ್ಸೆಗಳು ಸೀಮಿತವಾಗಿವೆ. ದೃಷ್ಟಿಯನ್ನು ಪುನಃಸ್ಥಾಪಿಸುವ ಹಿಂದಿನ ಪ್ರಯತ್ನಗಳು ತೀವ್ರ ಅಡ್ಡಪರಿಣಾಮಗಳು ಮತ್ತು ಸೀಮಿತ ಯಶಸ್ಸಿನ ದರಗಳು ಸೇರಿದಂತೆ ಗಮನಾರ್ಹ ಸವಾಲುಗಳನ್ನು ಎದುರಿಸಿವೆ.

ಜಪಾನ್‌ನ ಒಸಾಕಾ ವಿಶ್ವವಿದ್ಯಾಲಯದ ನೇತ್ರತಜ್ಞ ಕೊಹ್ಜಿ ನಿಶಿದಾ ಮತ್ತು ಅವರ ಸಹೋದ್ಯೋಗಿಗಳು ಕಾರ್ನಿಯಲ್ ಕಸಿಮಾಡಲು ಜೀವಕೋಶಗಳ ಪರ್ಯಾಯ ಮೂಲವನ್ನು ಬಳಸಿದರು. ಅವರು ಆರೋಗ್ಯವಂತ ದಾನಿಯಿಂದ ರಕ್ತಕಣಗಳನ್ನು ತೆಗೆದುಕೊಂಡು ಅವುಗಳನ್ನು ಭ್ರೂಣದಂತಹ ಸ್ಥಿತಿಗೆ ಮರು–ಪ್ರೋಗ್ರಾಮ್ ಮಾಡಿದರು, ನಂತರ ಅವುಗಳನ್ನು ಚಮ್ಮಾರಕಲ್ಲಿನ ಆಕಾರದ ಕಾರ್ನಿಯಲ್ ಎಪಿಥೆಲಿಯಲ್ ಕೋಶಗಳ ತೆಳುವಾದ, ಪಾರದರ್ಶಕ ಹಾಳೆಯಾಗಿ ಪರಿವರ್ತಿಸಿದರು.

ಈ ಮರು–ಪ್ರೋಗ್ರಾಮ್ ಮಾಡಿದ ಕೋಶಗಳನ್ನು ಅಳವಡಿಸುವ ಮೂಲಕ, ತಂಡವು ನಾಲ್ಕು ಭಾಗವಹಿಸುವವರಲ್ಲಿ ಮೂವರಲ್ಲಿ ದೃಷ್ಟಿಯನ್ನು ಯಶಸ್ವಿಯಾಗಿ ಪುನಃಸ್ಥಾಪಿಸಿತು.

ನಾಲ್ಕನೇ ರೋಗಿಯು ತಾತ್ಕಾಲಿಕ ಸುಧಾರಣೆಯನ್ನು ಕಂಡರು, ತೀವ್ರ ಸಂದರ್ಭಗಳಲ್ಲಿಯೂ ದೃಷ್ಟಿನಷ್ಟವನ್ನು ಹಿಮ್ಮೆಟ್ಟಿಸುವ ಚಿಕಿತ್ಸೆಯ ಸಾಮರ್ಥ್ಯವನ್ನು ತೋರಿಸಿದರು.

**ಯಾವುದೇ ತೀವ್ರ ಅಡ್ಡ ಪರಿಣಾಮಗಳಿಲ್ಲ**

ಅಧ್ಯಯನದ ಅತ್ಯಂತ ಭರವಸೆಯ ಅಂಶವೆಂದರೆ ತೀವ್ರ ಅಡ್ಡಪರಿಣಾಮಗಳ ಅನುಪಸ್ಥಿತಿ. ಎರಡು ವರ್ಷಗಳ ಮೇಲ್ವಿಚಾರಣೆಯ ನಂತರ, ಯಾವುದೇ ರೋಗಿಗಳು ಗೆಡ್ಡೆ ರಚನೆ ಅಥವಾ ಪ್ರತಿರಕ್ಷಣಾ ತಿರಸ್ಕಾರದಂತಹ ತೊಡಕುಗಳನ್ನು ಪ್ರದರ್ಶಿಸಲಿಲ್ಲ, ಇದು ಸ್ಟೆಮ್ ಸೆಲ್ ಚಿಕಿತ್ಸೆಗಳೊಂದಿಗೆ ಸಾಮಾನ್ಯ ಅಪಾಯವಾಗಿದೆ. ಎಲ್ಲಾ ನಾಲ್ಕು ಸ್ವೀಕರಿಸುವವರು ತಮ್ಮ ದೃಷ್ಟಿಯಲ್ಲಿ ತಕ್ಷಣದ ಸುಧಾರಣೆಗಳನ್ನು ತೋರಿಸಿದರು, ಮತ್ತು ಎಲ್‌ಎಸ್ಸಿಡಿಯಿಂದ ಬಾಧಿತವಾದ ಕಾರ್ನಿಯಾದ ವಿಸ್ತೀರ್ಣದಲ್ಲಿ ಇಳಿಕೆಯನ್ನು ತೋರಿಸಿದರು. ಇದು ಉನ್ನತ ಮಟ್ಟದ ಸುರಕ್ಷತೆ ಮತ್ತು ಸ್ಥಿರತೆಯನ್ನು ಸೂಚಿಸುತ್ತದೆ, ಇದು ವ್ಯಾಪಕ ಕ್ಲಿನಿಕಲ್ ಅನ್ವಯಿಕೆಗಳಿಗೆ ದಾರಿ ಮಾಡಿಕೊಡುತ್ತದೆ.

# ಪಂಕಜ್‌ಗೆ ದಾಖಲೆಯ 28ನೇ ವಿಶ್ವ ಕಿರೀಟ

**ನವದೆಹಲಿ,ನ.10:** ಭಾರತದ ಅನುಭವಿ ಆಟಗಾರ ಪಂಕಜ್ ಅಡ್ವಾಣಿ ಅವರು ದೋಹಾದಲ್ಲಿ ಶನಿವಾರ ಮುಕ್ತಾಯಗೊಂಡ ಐಬಿಎಸ್‌ಎಫ್ ವಿಶ್ವ ಬಿಲಿಯರ್ಡ್ಸ್ ಚಾಂಪಿಯನ್‌ಶಿಪ್‌ನಲ್ಲಿ ಸತತ ಏಳನೇ ಬಾರಿ ಪ್ರಶಸ್ತಿ ಮುಡಿಗೇರಿಸಿಕೊಂಡರು. ಅವರಿಗೆ ಒಟ್ಟಾರೆ ಇದು ದಾಖಲೆಯ 28ನೇ ವಿಶ್ವ ಪ್ರಶಸ್ತಿಯಾಗಿದೆ.




39 ವರ್ಷ ವಯಸ್ಸಿನ ತಾರೆ ಪಂಕಜ್ ಫೈನಲ್‌ನಲ್ಲಿ 4–2ರಿಂದ ಇಂಗ್ಲೆಂಡ್‌ನ ರಾಬರ್ಟ್ ಹಾಲ್ ಅವರನ್ನು ಮಣಿಸಿದರು. ಸಿಂಗಪುರದ ಪೀಟರ್ ಗಿಲ್‌ಕ್ರಿಸ್ಟ್ ಮತ್ತು ಭಾರತದ ಸೌರವ್ ಕೊಠಾರಿ ಅವರು ಜಂಟಿ ಕಂಚಿನ ಪದಕ ಗೆದ್ದರು.

# ದಕ್ಷಿಣ ಆಫ್ರಿಕಾ ವಿರುದ್ಧ ಸೋತ ಭಾರತ

ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ 2ನೇ ಟಿ20 ಪಂದ್ಯದಲ್ಲಿ ಆತಿಥೇಯ ದಕ್ಷಿಣ ಆಫ್ರಿಕಾ ತಂಡ 3 ವಿಕೆಟ್‌ಗಳ ಗೆಲುವು ಸಾಧಿಸಿದೆ. ಆಫ್ರಿಕಾ ಪರ ಅದ್ಭುತ ಇನ್ನಿಂಗ್ಸ್ ಆಡಿದ ಸ್ಟಬ್ಸ್ ಗೆಲುವಿನ ರೂವಾರಿ ಎನಿಸಿಕೊಂಡರು.

ಇದರೊಂದಿಗೆ ಉಭಯ ತಂಡಗಳ ನಡುವಿನ ನಾಲ್ಕು ಪಂದ್ಯಗಳ ಟಿ20 ಸರಣಿ 1–1ರಿಂದ ಸಮಬಲಗೊಂಡಿದೆ.

ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ 2ನೇ ಟಿ20 ಪಂದ್ಯದಲ್ಲಿ ಆತಿಥೇಯ ದಕ್ಷಿಣ ಆಫ್ರಿಕಾ ತಂಡ 3 ವಿಕೆಟ್?ಗಳ ಗೆಲುವು ಸಾಧಿಸಿದೆ. ಆಫ್ರಿಕಾ ಪರ ಅದ್ಭುತ ಇನ್ನಿಂಗ್ಸ್ ಆಡಿದ ಸ್ಟಬ್ಸ್ ಗೆಲುವಿನ ರೂವಾರಿ ಎನಿಸಿಕೊಂಡರು. ಇದರೊಂದಿಗೆ ಉಭಯ ತಂಡಗಳ ನಡುವಿನ ನಾಲ್ಕು ಪಂದ್ಯಗಳ ಟಿ20 ಸರಣಿ 1–1ರಿಂದ ಸಮಬಲಗೊಂಡಿದೆ. ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಭಾರತ 20 ಓವರ್‌ಗಳಲ್ಲಿ ಆರು ವಿಕೆಟ್‌ಗೆ 124 ರನ್ ಗಳಿಸಿತು. ಪ್ರತ್ಯುತ್ತರವಾಗಿ ಗುರಿ ಬೆನ್ನಟ್ಟಿದ ಆಫ್ರಿಕಾ ಪರ ಸ್ಟಬ್ಸ್ 41 ಎಸೆತಗಳಲ್ಲಿ ಏಳು ಬೌಂಡರಿಗಳ ನೆರವಿನಿಂದ 47 ರನ್‌ಗಳ ಅಜೇಯ ಇನ್ನಿಂಗ್ಸ್ ಆಡಿ ತಂಡವನ್ನು ಗೆಲುವಿನ ದಡ ಮುಟ್ಟಿಸಿದರು. ಭಾರತದ ಪರ ಸ್ಪಿನ್ನರ್ ವರುಣ್ ಚಕ್ರವರ್ತಿ ನಾಲ್ಕು ಓವರ್‌ಗಳಲ್ಲಿ 17 ರನ್ ನೀಡಿ ಐದು ವಿಕೆಟ್ ಕಬಳಿಸಿ ತಂಡವನ್ನು ಗೆಲುವಿನತ್ತ ಕೊಂಡೊಯ್ಯಲು ಪ್ರಯತ್ನಿಸಿದರಾದರೂ ಸ್ಟಬ್ಸ್ ಅವರ ಇನ್ನಿಂಗ್ಸ್ ಭಾರತಕ್ಕೆ ಗೆಲುವು ದಕ್ಕಲು ಅವಕಾಶ ಮಾಡಿಕೊಡಲಿಲ್ಲ.

# ಚಾಂಪಿಯನ್ಸ್ ಟ್ರೋಫಿ: ಪಟ್ಟು ಸಡಿಲಿಸದ ಭಾರತ ಬಿಸಿಸಿಐ ವಿರುದ್ಧ ಕೋರ್ಟ್ ಮೆಟ್ಟಿಲೇರಲು ಸಜ್ಜಾದ ಪಾಕ್



**ನವದೆಹಲಿ,ನ.10:** 2025ರ ಫೆಬ್ರವರಿ 19ರಿಂದ ಮಾರ್ಚ್ 09ರವರೆಗೆ ಪಾಕಿಸ್ತಾನದ ಆತಿಥ್ಯದಲ್ಲಿ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿಗೆ ಸಂಬಂಧಿಸಿದಂತೆ ಭಾರತ ಈಗಾಗಲೇ ತನ್ನ ನಿಲುವನ್ನು ತಿಳಿಸಿದ್ದು, ಹೈಬ್ರಿಡ್ ಮಾದರಿಯಲ್ಲಿ ಟೂರ್ನಿ ನಡೆಸಿದರೆ ಮಾತ್ರ ಭಾಗಿಯಾಗುವುದಾಗಿ ಕಡ್ಡಿ ಮುರಿದಂತೆ ಹೇಳಿದೆ. ಆದರೆ, ಭಾರತದ ನಿಲುವನ್ನು ವಿರೋಧಿಸುತ್ತಲೇ ಬಂದಿರುವ ಪಾಕಿಸ್ತಾನ ಕ್ರಿಕೆಟ್ ಮಂಡಳಿ ಮಾತ್ರ ಐಸಿಸಿ ಮೇಲೆ ಒತ್ತಡ ಹೇರುತ್ತಿದ್ದು, ಇದೀಗ ನ್ಯಾಯಾಲಯದ ಮೆಟ್ಟಿಲೇರಲು ಸಜ್ಜಾಗಿದ್ದು, ಭಾರತಕ್ಕೆ ಸೆಡ್ಡು ಹೊಡೆಯಲು ಮುಂದಾಗಿದೆ. ಬಿಸಿಸಿಐ ವಿರುದ್ಧ ಕೋರ್ಟ್ ಆಫ್ ಆರ್ಬಿಟ್ರೇಷನ್ ಫಾರ್ ಸ್ಪೋರ್ಟ್ಸ್ ಮೇಲ್ಮನವಿ ಸಲ್ಲಿಸಲು ಪಾಕಿಸ್ತಾನ ಕ್ರಿಕೆಟ್ ಮಂಡಳಿ ಸಜ್ಜಾಗಿದ್ದು, ಈ ಬಗ್ಗೆ ಸುದ್ದಿ ಮಾಧ್ಯಮಗಳು ವರದಿ ಮಾಡಿವೆ. ಈ ವಿಚಾರ ಮುಂದಿನ ದಿನಗಳಲ್ಲಿ ಅದ್ಯಾವ ಹಂತ ತಲುಪಲಿದೆ ಎಂದು ಕಾದು ನೋಡಬೇಕಿದೆ.

ಈ ಸಂಬಂಧ ಮಾತನಾಡಿರುವ ಬಿಸಿಸಿಐನ ಹಿರಿಯ ಅಧಿಕಾರಿಯೊಬ್ಬರು, ಇದು ಐಸಿಸಿ ಆ ಂ ೕ ಜ ಸ ಂ ತ್ತಿ ರ ಂ ವ ಟೂರ್ನಿಯಾಗಿದ್ದು, ಭದ್ರತೆಯ ಕಾರಣದಿಂದಾಗಿ ಭಾರತ ತಂಡ ಪಾಕ್ಗೆ ಪ್ರಯಾಣಿಸುವುದಿಲ್ಲ ಎಂದು ಈಗಾಗಲೇ ಸ್ಪಷ್ಟವಾಗಿ ಹೇಳಿದೆ. ಈ ವಿಚಾರ ಐಸಿಸಿಯ ನಿಲುವಿಗೆ ಬಿಡಲಾಗಿದ್ದು, ಟೂರ್ನಿ ಆತಿಥ್ಯ ವಹಿಸುತ್ತಿರುವ ರಾಷ್ಟ್ರಕ್ಕೆ ಐಸಿಸಿ ಈ ಬಗ್ಗೆ ಮನವರಿಕೆ ಮಾಡಬೇಕಿದೆ. ಇದಲ್ಲದೆ ಟೂರ್ನಿ ನಡೆಯುವ 100 ದಿನ ಮುಂಚಿತವಾಗಿ ವೇಳಾಪಟ್ಟಿಯನ್ನು ಪ್ರಕಟಿಸಬೇಕಿದ್ದು, ಮುಂದಿನ ದಿನಗಳಲ್ಲಿ ಏನಾಗಲಿದೆ ಎಂದು ಕಾದು ನೋಡಬೇಕಿದೆ.

ಭಾರತ ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾಗಿಯಾಗುವ ಸಂಬಂಧ ಈಗಾಗಲೇ ಪಿಸಿಬಿ ಕೋರ್ಟ್ ಆಫ್ ಆರ್ಬಿಟ್ರೇಷನ್ ಫಾರ್ ಸ್ಪೋರ್ಟ್ಸ್‌ಗೆ ಮನವಿ ಸಲ್ಲಿಸುವ ಬಗ್ಗೆ ಮಾತುಕತೆ ನಡೆಸಿದೆ. ಭಾರತದ ನಿಲುವನ್ನು ಆಧರಿಸಿ ಮುಂದಿನ ಹೆಜ್ಜೆ ಇಡುವ ಬಗ್ಗೆ ಪ್ರಮುಖವಾಗಿ ಮಾತುಕತೆ ಯಾಗುತ್ತಿದ್ದು, ವರ್ಷಾಂತ್ಯದ ವೇಳೆಗೆ ಸ್ಪಷ್ಟ ಚಿತ್ರಣ ಹೊರಬೀಳಬಹುದು ಎಂದು ಪಿಸಿಬಿ ಮೂಲಗಳು ತಿಳಿಸಿವೆ.

## ಮಾಜಿ ಪೋಲೋ ಆಟಗಾರ ಹರಿಂದರ್ ಸಿಂಗ್ ಸೋಧಿ ನಿಧನ



**ನವದೆಹಲಿ,ನ.10:** ಭಾರತದ ಮಾಜಿ ಪೋಲೋ ಆಟಗಾರ, ಅರ್ಜುನ ಪ್ರಶಸ್ತಿ ಪುರಸ್ಕೃತ ಹರಿಂದರ್ ಸಿಂಗ್ ಸೋಧಿ ಅವರು ನಿಧನರಾಗಿದ್ದಾರೆ. ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದ ಅವರು ಶನಿವಾರ ಮೃತಪಟ್ಟಿದ್ದಾರೆ. ಅವರಿಗೆ 86 ವರ್ಷ ವಯಸ್ಸಾಗಿತ್ತು. ಪತ್ನಿ ಮತ್ತು ಇಬ್ಬರು ಪುತ್ರಿಯರನ್ನು ಅಗಲಿದ್ದಾರೆ. ಸೋಧಿ ಅವರು, ಹನುತ್ ಸಿಂಗ್, ಸವಾಯಿ ಮಾನ್ ಸಿಂಗ್ (ಜೈಪುರದ ಮಹಾರಾಜ) ಹಾಗೂ ಅವರ ಮಗ ಭವಾನಿ ಸಿಂಗ್ ಅವರೊಂದಿಗೆ ಪೋಲೋ ಆಡಿದ್ದರು. ಇವರ ಕಿರಿಯ ಸಹೋದರ, ಹೆಸರಾಂತ ಪೋಲೋ ಆಟಗಾರ ರವೀಂದರ್ ಸಿಂಗ್ ಸೋಧಿ ಕೂಡ ಅರ್ಜುನ ಪ್ರಶಸ್ತಿ ಪುರಸ್ಕೃತರು. ಹರೀಂದರ್ ಅವರು, 1980ರ ಮಾಸ್ಕೋ ಒಲಿಂಪಿಕ್ಸ್‌ನಲ್ಲಿ ಭಾರತದ ಈಕ್ವೆಸ್ಟ್ರಿಯನ್ ತಂಡದ ಮ್ಯಾನೇಜರ್ ಆಗಿದ್ದರು.



ಸೌದಿ ಅರೇಬಿಯಾದ ರಿಯಾದ್‌ನಲ್ಲಿ ನಡೆದ WTA ಫೈನಲ್ಸ್ ಟೆನಿಸ್ ಪಂದ್ಯಾವಳಿಯ ಅಂತಿಮ ಪಂದ್ಯದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅಮೆರಿಕದ ಕೊಕೊ ಗೌಫ್ ಮತ್ತು ಚೀನಾದ ಝೆಂಗ್ ಕ್ವಿನ್ವೆನ್ ಅವರು ಫೋಟೋಗಳಿಗೆ ಪೋಸ್ ನೀಡಿದರು.

# ಯುಪಿ ಯೋಧಾಸ್ ಬಗ್ಗುಬಡಿದ ಯು ಮುಂಬಾ



ಪ್ರೋ ಕಬಡ್ಡಿ 11ನೇ ಆವೃತ್ತಿಯಲ್ಲಿ ಯುಪಿ ಯೋಧಾಸ್ ಸೋಲಿನ ಸುಳಿಯಲ್ಲಿ ಸಿಲುಕಿಕೊಂಡಿದೆ. ಭಾನುವಾರ ನೋಯ್ಡಾದಲ್ಲಿ ನಡೆದ ಎರಡನೇ ಪಂದ್ಯದಲ್ಲಿ ಯು ಮುಂಬಾ ವಿರುದ್ಧ ಯುಪಿ ಯೋಧಾಸ್ ಸೋಲು ಕಂಡಿದೆ. ಯುಪಿ ಯೋಧಾಸ್ ತಂಡವನ್ನು 35–33 ಅಂಕಗಳಿಂದ ಯು ಮುಂಬಾ ಸೋಲಿಸಿದೆ. ಈ ಗೆಲುವಿನೊಂದಿಗೆ ಯು ಮುಂಬಾ ತಂಡ ಎರಡನೇ ಸ್ಥಾನವನ್ನು ಭದ್ರಪಡಿಸಿಕೊಂಡಿದೆ.

ಇತ್ತ ಯುಪಿ ಯೋಧಾಸ್ ಸೋಲಿನೊಂದಿಗೆ 10ನೇ ಸ್ಥಾನದಲ್ಲಿದೆ.

ಮೊದಲಾರ್ಧದ ಆರಂಭದಲ್ಲಿ ಯುಪಿ ಯೋಧಾಸ್ ರೈಡರ್‌ಗಳು ಮತ್ತು ಡಿಫೆಂಡರ್‌ಗಳು ಒಟ್ಟಾಗಿ ಅಂಕಗಳ ಬೇಟೆಯಾಡಿದರು. ಪರಿಣಾಮ ಮೊದಲಾರ್ಧದಲ್ಲಿ ಮುಂಬಾ ತಂಡವನ್ನು ಯುಪಿ ಯೋಧಾಸ್ ಆಲೌಟ್ ಮಾಡುವ ಮೂಲಕ ಮುನ್ನಡೆ ಸಾಧಿಸಿತು.

ಯುಪಿ ಯೋಧಾಸ್ ಪರ ಶಿವಂ ಚೌಧರಿ ಮತ್ತು ಭರತ್ ಹೂಡಾ ಅದ್ಭುತ ರೇಡ್ ಮಾಡುವ ಮೂಲಕ ಅಂಕಗಳನ್ನು ಗಳಿಸಿದರು. ಎಡ–ಮೂಲೆಯ ಡಿಫೆಂಡರ್ ಸುಮಿತ್ ಕೂಡ ಎದುರಾಳಿಯನ್ನು ಕಟ್ಟಿ ಹಾಕುವಲ್ಲಿ ಯಶಸ್ವಿಯಾದರು.

ಮೊದಲ 10 ನಿಮಿಷಗಳಲ್ಲಿ ನಿಧಾನಗತಿಯ ಆರಂಭ ಪಡೆದ ಯು ಮುಂಬಾ ನಂತರ ಪುಟಿದೇಳಿತು. ಇದಾದ 7ನೇ ನಿಮಿಷದಲ್ಲಿ ಯುಪಿ ಯೋಧಾಸ್ ತಂಡವನ್ನು ಯು ಮುಂಬಾ ಆಲೌಟ್ ಮಾಡಿತು. ಇದರೊಂದಿಗೆ ಮೊದಲಾರ್ಧದಲ್ಲಿ ಯು ಮುಂಬಾ ತನ್ನ ಹಿನ್ನಡೆಯನ್ನು ಕೇವಲ ಒಂದು ಅಂಕಕ್ಕೆ ತಗ್ಗಿಸಿತು.

ಯು ಮುಂಬಾ ಸೂಪರ್ ಟ್ಯಾಕಲ್‌ನಲ್ಲಿ ಭರತ್ ಹೂಡಾ ಅವರನ್ನು ಔಟ್ ಮಾಡುವ ಮೂಲಕ ಮೊದಲಾರ್ಧದಲ್ಲಿ ಯು ಮುಂಬಾ 17–16 ಸ್ಕೋರ್ ಅನ್ನು ಕಾಯ್ದುಕೊಂಡಿತ್ತು.

ದ್ವಿತೀಯಾರ್ಧದಲ್ಲಿ ಆಕ್ರಮಣಕಾರಿ ಅಟಕ್ಕೆ ಯು ಮುಂಬಾ ಮುಂದಾಯಿತು. ಯು ಮುಂಬಾ ಪರ ರೈಡರ್‌ಗಳು ತಮ್ಮ ನಾಯಕ ಸುನಿಲ್ ಕುಮಾರ್ ನೇತೃತ್ವದಲ್ಲಿ ಅದ್ಭುತ ಪ್ರದರ್ಶನ ನೀಡಿದರು. ಪರಿಣಾಮ ದ್ವಿತೀಯಾರ್ಧದಲ್ಲಿ ಪಂದ್ಯ ಗತಿಯೇ ಬದಲಾಯಿತು. ಯುಪಿ ಯೋಧಾಸ್ ಕಡೆ ಇದ್ದ ಪಂದ್ಯವನ್ನು ಯು ಮುಂಬಾ ತನ್ನಂತೆ ಮಾಡಿಕೊಂಡಿತ್ತು. ಅಂತಿಮವಾಗಿ ಯು ಮುಂಬಾ ಎರಡನೇ ಬಾರಿಗೆ ಆಲೌಟ್ ಆದರೂ ಪಂದ್ಯವನ್ನು ಗೆಲ್ಲುವಲ್ಲಿ ಯಶಸ್ವಿಯಾಯಿತು.

**ಗುಜರಾತ್ ಜೈಂಟ್ಸ್ ಗೆಲುವು**

ಭಾನುವಾರ ನೋಯ್ಡಾದಲ್ಲಿ ನಡೆದ ಮೊದಲ ಪಂದ್ಯದಲ್ಲಿ ಹರಿಯಾಣ ಸ್ಟೀಲರ್ಸ್ ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಕಾದಾಟ ನಡೆಸಿದವು. ಕಾದಾಟದಲ್ಲಿ ಹರಿಯಾಣ ಸ್ಟೀಲರ್ಸ್ ತಂಡವನ್ನು ಗುಜರಾತ್ ಜೈಂಟ್ಸ್ ಮಣಿಸಿದೆ. ಹರಿಯಾಣ ಸ್ಟೀಲರ್ಸ್ ವಿರುದ್ಧ ಮಿಂಚಿನ ದಾಳಿ ನಡೆಸಿದ ಗುಜರಾತ್ ಜೈಂಟ್ಸ್ 39–23 ಅಂಕಗಳ ಅಂತರದಿಂದ ಅದ್ಭುತ ಗೆಲುವು ದಾಖಲಿಸಿದೆ. ಇದರೊಂದಿಗೆ ಗುಜರಾತ್ ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದೆ. ಸೋಲು ಕಂಡ ಹರಿಯಾಣ ಸ್ಟೀಲರ್ಸ್ 7ನೇ ಸ್ಥಾನದಲ್ಲಿದೆ.